

ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಸಂಪುಟ: 21, ಸಂಚಿಕೆ: 83, ಪುಟಗಳು: 8, ಮಂಗಳವಾರ, 2 ಜನವರಿ 2024 RNI NO. KARKAN/2002/08054

epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ


ಸುಭಾಷಿತ

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

## ಪಂಚಾಂಗ

(ಮಂಗಳವಾರ 1, ಜನವರಿ -2024)

- ಶೋಭಾಕೃತ ನಾಮ ಸಂವತ್ಸರ,
- ದಕ್ಷಿಣಾಯಣ, ಹಿಮಂತ ಋತು,
- ಮಾರ್ಗಶಿರ ಮಾಸ, ಕೃಷ್ಣ ಪಕ್ಷ,
- ತಿಥಿ: ಷಷ್ಠಿ,
- ನಕ್ಷತ್ರ ಮಖ,
- **ರಾಹುಕಾಲ:** 03 : 30 PM -04 : 59 PM
- **ಗುಳಿಕಕಾಲ:** 12 : 32 PM - 02 : 01 PM
- **ಯಮಗಂಡಕಾಲ:** 09 : 34 AM - 11 : 03 AM





ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of
Newspapers | Tabloids | Magazines


## ಸಂಕ್ಷಿಪ್ತ ಸುದ್ದಿ

### ಮಥುರಾದಲ್ಲೂ ಕೃಷ್ಣ ದೇವಾಲಯ ಕಟ್ಟುತ್ತೇವೆ

**ಶಿವಮೊಗ್ಗ:** ಗುಲಾಮಗಿರಿ ಮಸೀದಿ ಒಡೆದು ರಾಮಮಂದಿರ ಕಟ್ಟಿದ್ದೇವೆ. ಮಥುರಾದಲ್ಲೂ ಶ್ರೀಕೃಷ್ಣನ ದೇವಸ್ಥಾನ ಕಟ್ಟೇ ಕಟ್ಟುತ್ತೇವೆ ಎಂದು ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್.ಈಶ್ವರಪ್ಪ ಪ್ರಚೋದನಕಾರಿ ಹೇಳಿಕೆ ನೀಡಿದ್ದಾರೆ.



ಶಿವಮೊಗ್ಗದಲ್ಲಿ ಮಾತನಾಡಿದ ಅವರು, 496 ವರ್ಷದ ಕೆಳಗೆ ಅಯೋಧ್ಯೆಯಲ್ಲಿ ರಾಮಮಂದಿರ ಧ್ವಂಸ ಮಾಡಿದ್ದರು. ಬಾಬರ್ ಮಸೀದಿ ಕಟ್ಟಿದ್ದರು. ಗುಲಾಮಗಿರಿ ಮಸೀದಿ ಹೊಡೆದು ರಾಮಮಂದಿರ ಕಟ್ಟಿದ್ದೇವೆ. ನಮ್ಮೆಲ್ಲರ ಸೌಭಾಗ್ಯ, ನಾವು ಬದುಕಿರುವ ದಿನದಲ್ಲೇ ಬಾಲರಾಮನ ವಿಗ್ರಹ ಪ್ರತಿಷ್ಠಾಪನೆ ಆಗ್ತಿದೆ ಎಂದು ಹೇಳಿದ್ದಾರೆ. ಪುಟ 2

### ಅಯೋಧ್ಯೆ ರಾಮಮಂದಿರಕ್ಕೆ ಮೈಸೂರಿನ ಶಿಲ್ಪಿ ಕೆತ್ತಿದ ವಿಗ್ರಹ

# ಆನಂದ, ಪರಮಾನಂದ

**ಮೈಸೂರು:** ಅಯೋಧ್ಯೆಯಲ್ಲಿ ರಾಮಲಲ್ಲಾ ವಿಗ್ರಹ ಪ್ರತಿಷ್ಠಾಪನೆಗೆ ದಿನಗಣನೆ ಆರಂಭವಾಗಿದ್ದು, ಮೈಸೂರಿನ ಶಿಲ್ಪಿ ಅರುಣ್ ಯೋಗಿರಾಜ್ ನಿರ್ಮಿಸಿರುವ ವಿಗ್ರಹ ಅಯೋಧ್ಯೆಯ ರಾಮ ಮಂದಿರದಲ್ಲಿ ಪ್ರತಿಷ್ಠಾಪನೆಗೆ ಆಯ್ಕೆಯಾಗಿದೆ. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರು 'ಪ್ರಾಣ ಪ್ರತಿಷ್ಠೆ'ಗೆ ಅಂತಿಮಗೊಳಿಸಿರುವ ಭಗವಾನ್ ರಾಮನ ವಿಗ್ರಹದ ಚಿತ್ರವನ್ನು ಬಹಿರಂಗಪಡಿಸಿದ್ದಾರೆ. ಇದೇ ವೇಳೆ, ಮೈಸೂರಿನ ಶಿಲ್ಪಿ ಅರುಣ್ ಯೋಗಿರಾಜ್ ಬಗ್ಗೆಯೂ ರಾಜ್ಯದ ಎಲ್ಲೆಡೆ ಆನಂದ, ಪರಮಾನಂದ ಮೆಚ್ಚುಗೆಯ ಮಾತುಗಳು ಕೇಳಿಬರುತ್ತಿವೆ.

'ಎಲ್ಲಿ ರಾಮನೋ ಅಲ್ಲಿ ಹನುಮನು. ಅಯೋಧ್ಯೆಯಲ್ಲಿ ಶ್ರೀರಾಮನ ಪ್ರಾಣ ಪ್ರತಿಷ್ಠಾಪನಾ ಕಾರ್ಯಕ್ಕೆ ವಿಗ್ರಹ ಆಯ್ಕೆ ಅಂತಿಮಗೊಂಡಿದೆ. ನಮ್ಮ ನಾಡಿನ ಹೆಸರಾಂತ ಶಿಲ್ಪಿ ನಮ್ಮ ಹೆಮ್ಮೆಯ ಅರುಣ್ ಯೋಗಿರಾಜ್ ಅವರು ಕೆತ್ತಿರುವ ಶ್ರೀರಾಮನ ವಿಗ್ರಹ ಪುಣ್ಯಭೂಮಿ ಅಯೋಧ್ಯೆಯಲ್ಲಿ ಪ್ರತಿಷ್ಠಾಪನೆಗೊಳ್ಳಲಿದೆ. ರಾಮ ಹನುಮರ ಅವಿನಾಭಾವ ಸಂಬಂಧಕ್ಕೆ ಇದು ಮತ್ತೊಂದು ನಿದರ್ಶನ. ಹನುಮನ ನಾಡು ಕರ್ನಾಟಕದಿಂದ ರಾಮಲಲ್ಲಾನಿಗೆ ಇದೊಂದು ಮಹತ್ವಪೂರ್ಣ ಸೇವೆ ಎಂದರೆ ತಪ್ಪಾಗಲಾರದು' ಎಂದು ಪ್ರಲ್ಹಾದ್ ಜೋಶಿ ಸಾಮಾಜಿಕ ಮಾಧ್ಯಮ ಎಕ್ಸ್ ನಲ್ಲಿ ಸಂದೇಶ ಪ್ರಕಟಿಸಿದ್ದಾರೆ. ಪುಟ 2



## ಇಂದಿನಿಂದ ಕೋವಿಡ್ ವ್ಯಾಕ್ಸಿನೇಷನ್ ಆರಂಭ

**ಬೆಂಗಳೂರು:** ಕೋವಿಶೀಲ್ಡ್ ಅಥವಾ ಕೊವ್ಯಾಕ್ಸಿನ್ 2ನೇ ಲಸಿಕೆ ಪಡೆದವರಿಗೆ ನೀಡಲು ಕೇಂದ್ರ ಸರ್ಕಾರವು ರಾಜ್ಯಕ್ಕೆ 30,000 ಡೋಸ್ ಕಾರ್ಬೆವ್ಯಾಕ್ಸ್ ಲಸಿಕೆಯನ್ನು ಸರಬರಾಜು ಮಾಡಿದೆ.

ಈ ಲಸಿಕೆಯನ್ನು ವಿಜಾತಿ (ಹೆಟೆರೊಲಾಗಸ್) ಮುನ್ನೆಚ್ಚರಿಕೆಯಾಗಿ ನೀಡಬಹುದು. ತಾಂತ್ರಿಕ ಸಲಹಾ ಸಮಿತಿಯ ಶಿಫಾರಸಿನಂತೆ ಕೋವಿಶೀಲ್ಡ್ ಅಥವಾ ಕೋವ್ಯಾಕ್ಸಿನ್ ಲಸಿಕೆಯ 2ನೇ ಡೋಸ್ ಪಡೆದು ಆರು ತಿಂಗಳು ಅಥವಾ 26 ತಿಂಗಳು ಪೂರೈಸಿದ ಬಳಿಕವೂ ಮುನ್ನೆಚ್ಚರಿಕೆ ಡೋಸ್ ಪಡೆಯದವರಿಗೆ ಈ ಲಸಿಕೆ ನೀಡಬಹುದು.

60 ವರ್ಷ ದಾಟಿದವರು, ರೋಗ ನಿರೋಧಕ ಶಕ್ತಿ ಕಡಿಮೆ ಇರುವವರು ಈ ಲಸಿಕೆಯನ್ನು ಪಡೆಯಬಹುದು. ಕೋವಿಡ್-19 ಲಸಿಕಾಕರಣದ ಮಾರ್ಗಸೂಚಿಯಂತೆಯೇ ಈ ಲಸಿಕೆಯನ್ನು ನೀಡಲಾಗುವುದು. ಜಿಲ್ಲಾ ಆಸ್ಪತ್ರೆಗಳು ಮತ್ತು ಜಿಲ್ಲಾ ಮಟ್ಟದಲ್ಲಿ ನಿರ್ಣಯಿಸಲಾದ ತಾಲೂಕು ಆಸ್ಪತ್ರೆಗಳಿಗೆ ಮಾತ್ರ ಹಂಚಿಕೆ ಮಾಡಿ ಲಸಿಕಾಕರಣ ಹಮ್ಮಿಕೊಳ್ಳಲಾಗಿದೆ. ಪುಟ 2







ಶ್ರೀ ಸಿದ್ದರಾಮಯ್ಯ
ಮಾನ್ಯ ಮುಖ್ಯಮಂತ್ರಿಗಳು

ಬಾಗಿಲಿಗೆ ಬಂತು ಸರ್ಕಾರ
ಸೇವೆಗೆ ಇರಲಿ ಸಹಕಾರ

ಅಹವಾಲು ನಿಮ್ಮದು, ಪರಿಹಾರ ನಮ್ಮದು



ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಬರುವ ಬಿಬಿಎಂಪಿ, ಬಿಡಿಎ, ಬಿಎಂಆರ್‌ಡಿಎ ಬಿಎಂಆರ್‌ಸಿಎಲ್, ಬಿಎಂಟಿಸಿ, ಜಲಮಂಡಳಿ, ಕಂದಾಯ, ಬೆಸ್ಕಾಂ ಹಾಗೂ ಗ್ಯಾರಂಟಿ ಯೋಜನೆಗಳ ಸಮಸ್ಯೆ ಬಗ್ಗೆ ಅಹವಾಲು ಸಲ್ಲಿಸಬಹುದು.

| ದಿನಾಂಕ | ವಿಧಾನಸಭಾ ಕ್ಷೇತ್ರ | ಸ್ಥಳ |
|---|---|---|
| ಜನವರಿ 03 2024 | ಕೆ ಆರ್ ಪುರ ಮಹದೇವಪುರ | ಡಾ. ಬಿ ಆರ್ ಅಂಬೇಡ್ಕರ್ ಕ್ರೀಡಾಂಗಣ, ದೂರವಾಣಿ ನಗರ, ಕೆ ಆರ್ ಪುರ ಮುಖ್ಯರಸ್ತೆ, ಬೆಂಗಳೂರು-560016. |
| ಜನವರಿ 05 2024 | ಯಲಹಂಕ ದಾಸರಹಳ್ಳಿ ಬ್ಯಾಟರಾಯನಪುರ | ಡಾ. ಬಿ ಆರ್ ಅಂಬೇಡ್ಕರ್ ಭವನ, 16ನೇ "ಎ" ಮುಖ್ಯರಸ್ತೆ, ಎನ್.ಇ.ಎಸ್. ಬಸ್ ನಿಲ್ದಾಣದ ಹತ್ತಿರ, ಯಲಹಂಕ ನ್ಯೂಟೌನ್, ಬೆಂಗಳೂರು-560064. |
| ಜನವರಿ 06 2024 | ಶಿವಾಜಿನಗರ ಹೆಬ್ಬಾಳ ಪುಲಕೇಶಿನಗರ | ಆರ್.ಬಿ.ಎ.ಎನ್.ಎಮ್.ಎಸ್ ಹೈಸ್ಕೂಲ್ ಮೈದಾನ, ಸೆಂಟ್ ಜಾನ್ಸ್ ರಸ್ತೆ, ಶಿವನ್ ಚೆಟ್ಟಿ ಗಾರ್ಡನ್, ಬೆಂಗಳೂರು-560042. |

**ಸೂಚನೆ:** ಅಹವಾಲು ಸಲ್ಲಿಸಲು ಬರುವ ನಾಗರಿಕರು ತಮ್ಮ ಆಧಾರ್ ಕಾರ್ಡ್ ಅಥವಾ ಪಡಿತರ ಚೀಟಿ ತರಲು ಕೋರಿದೆ.

ಬೆಳಗ್ಗೆ 9.30 ರಿಂದ



ಶ್ರೀ ಡಿ ಕೆ ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು

## ತೋಟಕ್ಕೆ ಹೊರಟಿದ್ದ ವೇಳೆ ಏಕಾಏಕಿ ಕಾಡಾನೆ ದಾಳಿ: ಮಹಿಳೆ ಗಂಭೀರ



**ರಾಮನಗರ:** ಕಾಡಾನೆಯೊಂದು ಏಕಾಏಕಿ ದಾಳಿ ನಡೆಸಿದ ಪರಿಣಾಮ ಮಹಿಳೆಯೊಬ್ಬಳು ಗಂಭೀರವಾಗಿ ಗಾಯಗೊಂಡ ಘಟನೆ ಕನಕಪುರದ ಬರಡನಹಳ್ಳಿಯಲ್ಲಿ ನಡೆದಿದೆ.

ಗ್ರಾಮದ ದುಂಡಮ್ಮ (35) ಗಾಯಗೊಂಡ ಮಹಿಳೆಯಾಗಿದ್ದಾಳೆ. ಮುಂಜಾನೆ ತೋಟಕ್ಕೆ ಹೋಗುತ್ತಿದ್ದ ವೇಳೆ ಆನೆ ಏಕಾಏಕಿ ದಾಳಿ ನಡೆಸಿದೆ. ಪರಿಣಾಮ ಮಹಿಳೆ ಗಂಭೀರವಾಗಿ ಗಾಯಗೊಂಡಿದ್ದಾಳೆ. ಆನೆ ದಾಳಿಯಿಂದ ಮಹಿಳೆಯ ಎಡಗೈ ಮುರಿದಿದೆ. ಕೂಡಲೇ ಗ್ರಾಮಸ್ಥರು ಮಹಿಳೆಯನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿದ್ದಾರೆ. ಘಟನಾ ಸ್ಥಳಕ್ಕೆ ಅರಣ್ಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಧಿಕಾರಿಗಳು ಗಾಯಗೊಂಡ ಮಹಿಳೆಯ ಚಿಕಿತ್ಸಾ ವೆಚ್ಚ ಭರಿಸಿ, ಪರಿಹಾರ ನೀಡುವ ಭರವಸೆ ನೀಡಿದ್ದಾರೆ. ಗ್ರಾಮದಲ್ಲಿ ಆನೆಗಳ ಹಾವಳಿ ಹೆಚ್ಚಾಗುತ್ತಿದ್ದು, ಅರಣ್ಯ ಇಲಾಖೆ ಅಧಿಕಾರಿಗಳು ಸೂಕ್ತ ಕ್ರಮಕೈಗೊಳ್ಳಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

## ಫ್ಯಾನ್‌ಗೆ ನೇಣು ಬಿಗಿದುಕೊಂಡು ಯುವತಿ ಆತ್ಮಹತ್ಯೆ



**ಬೆಂಗಳೂರು:** ಯುವತಿಯೊಬ್ಬಳು ಫ್ಯಾನ್‌ಗೆ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡ ಘಟನೆ ಸುಧಾಮನಗರದಲ್ಲಿ ನಡೆದಿದ್ದು, ಈ ಮೂಲಕ ವರ್ಷದ ಮೊದಲ ದಿನವೇ ಸಾವಿನ ಸುದ್ದಿ ಬರೆಯುವಂತಾಗಿದೆ. ವರ್ಷಿಣಿ (21) ಆತ್ಮಹತ್ಯೆಗೆ ಶರಣಾದ ಯುವತಿಯಾಗಿದ್ದಾಳೆ. ಸುಧಾಮನಗರದಲ್ಲಿ ಕುಟುಂಬದೊಂದಿಗೆ ವಾಸವಿರುವ ಈಕೆ ಜಯನಗರದ ಕಾಲೇಜ್ ಒಂದರಲ್ಲಿ ಬಿಬಿಎ ವ್ಯಾಸಂಗ ಮಾಡುತ್ತಿದ್ದಳು.

ಆತ್ಮಹತ್ಯೆಗೆ ನಿಖರ ಕಾರಣ ತಿಳಿದುಬಂದಿಲ್ಲ. ಯುವತಿಯ ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಕಿಮ್ಸ್ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ಸ್ಥಳಕ್ಕೆ ವಿಲ್ಸನ್ ಗಾರ್ಡನ್ ಪೊಲೀಸರು ತೆರಳಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ನ್ಯಾಷನಲ್ ಸಂಸ್ಥೆಯ ಮೇಲೆ ಇಡಿ ದಾಳಿ

**ಶಿವಮೊಗ್ಗ:** ತೀರ್ಥಹಳ್ಳಿಯ ನ್ಯಾಷನಲ್ ಸಂಸ್ಥೆ ಮೇಲೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ದಾಳಿ ನಡೆಸಿ ದಾಖಲೆಗಳನ್ನು ಪರಿಶೀಲಿಸುತ್ತಿದ್ದಾರೆ.

ಸುಲೈಮಾನ್ ಎಂಬುವರಿಗೆ ಸೇರಿದ ನ್ಯಾಷನಲ್ ಸಂಸ್ಥೆಯ ಗೋಲ್ಡ್ ಪ್ಯಾಲೇಸ್, ಸೂಪರ್ ಬಜಾರ್, ಇಂಡಿಯನ್ ಗ್ಯಾಸ್ ಗೋಡೌನ್ ಹಾಗೂ ಸುಲೈಮಾನ್ ನಿವಾಸದ ಮನೆ ಮೇಲೆ ದಾಳಿಯಾಗಿದೆ. ಬೆಳ್ಳಂಬೆಳಗ್ಗೆ 10 ವಾಹನಗಳಲ್ಲಿ ಇಡಿ ಅಧಿಕಾರಿಗಳು ಆಗಮಿಸಿದ್ದಾರೆ. ಇನ್ನೂ ಅಂಗಡಿ ಹಾಗೂ ಕಚೇರಿಯ ಬಾಗಿಲು ತೆರೆಯದ ಕಾರಣ ಇಡಿ ಅಧಿಕಾರಿಗಳು ಹೊರಗಡೆ ಕಾಯುತ್ತಿದ್ದಾರೆ. ಸುಲೈಮಾನ್ ಪುತ್ರ ಷರೀಫ್ ಅವರು ಕನ್‌ಸ್ಟ್ರಕ್ಷನ್ ವ್ಯವಹಾರ ಮಾಡುತ್ತಿದ್ದು, ಶಿವಮೊಗ್ಗದ ವಿಮಾನ ನಿಲ್ದಾಣ ಕಾಮಗಾರಿ ಮಾಡಿದ್ದರು.

## ಬೆಂಗಳೂರಿನಲ್ಲಿ ಯುವಕನ ಬರ್ಬರ ಹತ್ಯೆ

**ಬೆಂಗಳೂರು:** ಶನಿವಾರ ತಡರಾತ್ರಿ, ಯುವಕನೋರ್ವನನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಿರುವ ಘಟನೆ ಬೆಂಗಳೂರಿನ ಹನುಮಂತ ನಗರದ 80 ಅಡಿ ರಸ್ತೆಯಲ್ಲಿ ನಡೆದಿದೆ.



ವಿಜಯ್ (21) ಹತ್ಯೆಯಾದ ಯುವಕ. ತಡರಾತ್ರಿ, ಒಂದು ಗಂಟೆಯ ಸುಮಾರಿಗೆ ಘಟನೆ ನಡೆದಿದ್ದು, ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಯುವಕನನ್ನು ಹತ್ಯೆಗೈದಿದ್ದಾರೆ. ಈ ಕುರಿತು ಹನುಮಂತ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಕುಡಿದ ಮತ್ತಿನಲ್ಲಿ ಸ್ನೇಹಿತರ ನಡುವೆ ಜಗಳ ನಡೆದು ಕೊಲೆಯಾಗಿರುವ ಶಂಕೆ ವ್ಯಕ್ತವಾಗಿದೆ. ಹನುಮಂತ ನಗರದ ಶ್ರೀನಿವಾಸ ನಗರ ಬಸ್ ನಿಲ್ದಾಣದ ಬಳಿ ಘಟನೆ ನಡೆದಿದ್ದು, ಆಟೋದಲ್ಲಿ ಬಂದ ದುಷ್ಕರ್ಮಿಗಳು ಯುವಕನ ಮೇಲೆ ಅಟ್ಯಾಕ್ ಮಾಡಿ ಕೊಲೆ ಮಾಡಿದ್ದಾರೆ ಎನ್ನಲಾಗಿದೆ.

# ನಾವು ಅಯೋಧ್ಯೆ ರಾಮ ಮಂದಿರದ ಪರ

**ಬೆಂಗಳೂರು:** ಅಯೋಧ್ಯೆ ರಾಮಮಂದಿರ ಉದ್ಘಾಟನೆ ವಿಚಾರವನ್ನು ಬಿಜೆಪಿ ರಾಜಕೀಯ ಲಾಭಕ್ಕೆ ಬಳಸಿಕೊಳ್ಳುತ್ತಿದೆ ಎಂದು ಹಲವು ವಿರೋಧ ಪಕ್ಷದ ನಾಯಕರು ಆರೋಪಿಸಿರುವ ಬೆನ್ನಲ್ಲೇ, 'ನಮ್ಮ ಸರ್ಕಾರ ಮತ್ತು ಪಕ್ಷ ರಾಮ ಮಂದಿರದ ಪರವಾಗಿದೆ. ರಾಮ ಮಂದಿರಕ್ಕೆ ನಮ್ಮ ಸಂಪೂರ್ಣ ಬೆಂಬಲವಿದೆ' ಎಂದು ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದ್ದಾರೆ. ಅಯೋಧ್ಯೆ ರಾಮಮಂದಿರ ವಿಚಾರಕ್ಕೆ ನಮ್ಮ ವಿರೋಧವಿಲ್ಲ. ಮಂದಿರ ನಿರ್ಮಾಣಕ್ಕೆ ನಮ್ಮ ವಿರೋಧವಿಲ್ಲ. ನಾವು ರಾಮಮಂದಿರದ ಪರವಾಗಿದ್ದೇವೆ ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

ಮುಂಬರುವ ಲೋಕಸಭೆ ಚುನಾವಣೆಯಲ್ಲಿ ಮತ ಗಳಿಸಲು ಕೇಂದ್ರದ ಬಿಜೆಪಿ ಸರ್ಕಾರ ರಾಮಮಂದಿರ ಉದ್ಘಾಟನೆಯನ್ನು ಬಳಸಿಕೊಂಡಿದೆ. ರಾಮ ಮಂದಿರ ಉದ್ಘಾಟನೆ ಒಂದು ಸ್ಟಂಟ್ ಅಷ್ಟೇ ಎಂದು ಸಿದ್ದರಾಮಯ್ಯ ಸಂಪುಟದ ಸಚಿವರೊಬ್ಬರು ಆರೋಪಿಸಿದ ಬೆನ್ನಲ್ಲೇ ಅವರು ರಾಮ ಮಂದಿರದ ಪರ ಹೇಳಿಕೆ ನೀಡಿದ್ದಾರೆ.



ಪುಲ್ವಾಮಾ ಭಯೋತ್ಪಾದಕ ದಾಳಿ ಸಂದರ್ಭವನ್ನು ನೆನಪಿಸಿಕೊಂಡಿದ್ದ ಕರ್ನಾಟಕ ಸಚಿವ ಸುಧಾಕರ್, ಕಳೆದ ಲೋಕಸಭೆ ಚುನಾವಣೆಯಲ್ಲಿ ಮತ ಗಳಿಸಲು ಬಿಜೆಪಿ ಸರ್ಕಾರ ಪುಲ್ವಾಮಾ ಭಯೋತ್ಪಾದನಾ ದಾಳಿಯನ್ನು ಬಳಸಿಕೊಂಡಿತ್ತು. ಇದೀಗ ಭಗವಾನ್ ರಾಮನ ಮತ್ತು ಅಯೋಧ್ಯೆಯಲ್ಲಿ ರಾಮ ಮಂದಿರ ಉದ್ಘಾಟನೆಯನ್ನು ಬಳಸಿಕೊಳ್ಳುತ್ತಿದ್ದಾರೆ ಎಂದು ಟೀಕಿಸಿದ್ದರು. ಮತ್ತೊಬ್ಬ ಸಚಿವ ಪ್ರಿಯಾಂಕ್ ಖರ್ಗೆ ಸಹ ರಾಮ ಮಂದಿರ ವಿಚಾರವಾಗಿ ಟೀಕೆ ಮಾಡಿದ್ದರು. ಈ ವಿಚಾರ ರಾಜಕೀಯವಾಗಿ ನಕಾರಾತ್ಮಕ ಪರಿಣಾಮ ಉಂಟು ಮಾಡುವ ಸಾಧ್ಯತೆ ಇದೆ ಎಂಬ ಸುಳಿಸುವ ಸಿಕ್ಕ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯ ಡ್ಯಾಮೇಜ್ ಕಂಟ್ರೋಲ್‌ಗೆ ಮುಂದಾಗಿದ್ದಾರೆ.

## ಬನ್ನೇರುಘಟ್ಟಕ್ಕೆ ಹೊಸ ಅತಿಥಿಯ ಆಗಮನ



**ಬೆಂಗಳೂರು:** ಬನ್ನೇರುಘಟ್ಟ ಜೈವಿಕ ಉದ್ಯಾನವನಕ್ಕೆ ಹೊಸ ಅತಿಥಿಯೊಂದರ ಆಗಮನವಾಗಿದೆ. 15 ವರ್ಷದ ಆನೆಯೊಂದು ಹೆಣ್ಣು ಮರಿಗೆ ಜನ್ಮ ನೀಡಿದ್ದು, ಜೈವಿಕ ಉದ್ಯಾನವನದಲ್ಲಿ ಸಂತಸ ಮನೆ ಮಾಡಿದೆ.

ಡಿ.11 ರಂದು ರೂಪಾ ಎಂಬ ಆನೆ ಮರಿಗೆ ಜನ್ಮ ನೀಡಿದ್ದು, ಸಫಾರಿಯ ಸೀಗೆಕಟ್ಟೆಯಲ್ಲಿ ಮರಿ ಆನೆ ಪ್ರವಾಸಿಗರ ಕಣ್ಮನ ಸೆಳೆಯುತ್ತಿದೆ. ಪಶುವೈದ್ಯರ ಆರೈಕೆಯಲ್ಲಿ ತಾಯಿ ಹಾಗೂ ಮರಿ ಆನೆಗಳು ಆರೋಗ್ಯವಾಗಿವೆ. ಈ ಹಿಂದೆ ಎರಡು ಮರಿಗಳಿಗೆ ರೂಪಾ ಜನ್ಮ ನೀಡಿತ್ತು.

ಈ ಹಿಂದೆ ಒಂದು ಗಂಡು ಹಾಗೂ ಒಂದು ಹೆಣ್ಣು ಮರಿಗೆ ರೂಪಾ ಜನ್ಮ ನೀಡಿತ್ತು. ಇದೀಗ ಮೂರನೇ ಹೆಣ್ಣು ಮರಿಗಳಿಗೆ ಜನ್ಮ ನೀಡಿದ್ದು, ಜೈವಿಕ ಉದ್ಯಾನವನದ ಆನೆಗಳ ಸಂಖ್ಯೆ 25ಕ್ಕೆ ಏರಿಕೆ ಕಂಡಿದೆ.

## ಹೊಸ ವರ್ಷದ ಪಾರ್ಟಿಗೆ 193 ಕೋಟಿ ಮೌಲ್ಯದ ಎಣ್ಣೆ ಸೇಲ್




**ಬೆಂಗಳೂರು:** ಹೊಸ ವರ್ಷ ಬರಮಾಡಿಕೊಳ್ಳುವ ಸಂಭ್ರಮಾಚರಣೆಯಲ್ಲಿ ಮದ್ಯದ ಕಿಕ್ ಕೂಡ ಜೋರಾಗಿತ್ತು. ನ್ಯೂ ಇಯರ್‌ಗೆ ಸರ್ಕಾರದ ಬೊಕ್ಕಸಕ್ಕೆ ಎಣ್ಣೆ ಕಾಸು ಹರಿದು ಬಂದಿದೆ.

2023ರ ಕೊನೆಯ ದಿನವಾದ ಭಾನುವಾರದಿಂದು 193 ಕೋಟಿ ಮೌಲ್ಯದ ಮದ್ಯ ಮಾರಾಟವಾಗಿದೆ. ಈ ಮೂಲಕ ಒಂದೇ ದಿನ ಭರ್ಜರಿ ಲಿಕ್ಕರ್ ಸೇಲ್ ಆಗಿದೆ. ಡಿಸೆಂಬರ್ ತಿಂಗಳಲ್ಲಿ ಇಂಡಿಯನ್ ಮೇಡ್ ಲಿಕ್ಕರ್ 3,07,953 ಬಾಕ್ಸ್, ಬಿಯರ್ 1,95,005 ಬಾಕ್ಸ್ ಮಾರಾಟವಾಗಿದೆ. ಕಳೆದ ವರ್ಷ ಡಿಸೆಂಬರ್ ತಿಂಗಳಲ್ಲಿ 2,611 ಕೋಟಿ ಆದಾಯ ಬಂದಿತ್ತು. ಈ ವರ್ಷ ಡಿಸೆಂಬರ್ ತಿಂಗಳಲ್ಲಿ 3 ಸಾವಿರ ಕೋಟಿ ಆದಾಯ ಸಂಗ್ರಹವಾಗಿದೆ.

ಒಟ್ಟಿನಲ್ಲಿ ಎರಡು ವರ್ಷಕ್ಕೆ ಹೋಲಿಸಿದರೆ ಈ ವರ್ಷದಲ್ಲಿ ಮದ್ಯ ಮಾರಾಟದಿಂದ ಸರ್ಕಾರದ ಬೊಕ್ಕಸಕ್ಕೆ ಹೆಚ್ಚು ಆದಾಯ ಹರಿದುಬಂದಿದೆ. ನಗರ ಹಾಗೂ ಗ್ರಾಮೀಣ ಭಾಗದ ಮೂಲೆ ಮೂಲೆಯಲ್ಲಿಯೂ ಜನರು ಮದ್ಯದ ನಶೆಯ ಮೂಲಕ ಹೊಸ ವರ್ಷವನ್ನು ಅದ್ದೂರಿಯಾಗಿ ಬರಮಾಡಿಕೊಂಡಿದ್ದಾರೆ.

## ಕೆಲಸದ ಒತ್ತಡ: ಕಚೇರಿಯಲ್ಲೇ ನೇಣು ಬಿಗಿದುಕೊಂಡು ಸರ್ಕಾರಿ ನೌಕರ ಆತ್ಮಹತ್ಯೆ

**ಚಿಕ್ಕಮಗಳೂರು:** ಬಿಇಓ ಕಚೇರಿಯ ವ್ಯವಸ್ಥಾಪಕ ಅಧಿಕಾರಿ ಕಚೇರಿಯಲ್ಲೇ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನಲ್ಲಿ ನಡೆದಿದೆ.

ಕಡೂರು ತಾಲೂಕು ಮೂಲದ ನಿಂಗನಾಯಕ (57) ಕಚೇರಿಯಲ್ಲೇ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾದ ವ್ಯವಸ್ಥಾಪಕ. ಸೋಮವಾರ (ಜ.1) ಬೆಳಿಗ್ಗೆ ಬಿಇಓ ಕಚೇರಿಯಲ್ಲೇ ಡೆತ್ ನೋಟ್ (Death Note) ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.



ಕಳೆದ ಎರಡು ವರ್ಷಗಳಿಂದ ಇಲ್ಲಿ ಕೆಲಸ ಮಾಡುತ್ತಿದ್ದ ನಿಂಗನಾಯಕ ಕೆಲಸದ ಒತ್ತಡದ ಕಾರಣದಿಂದ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎನ್ನಲಾಗಿದೆ.

ಸೋಮವಾರ ಬೆಳಗ್ಗೆ ಮನೆಗೆ ಹಾಲು ತಂದುಕೊಟ್ಟ ನಿಂಗನಾಯಕ ಮನೆಯಲ್ಲಿ ವಾಕಿಂಗ್ ಹೋಗಿ ಬರ್ತೀನಿ ಅಂತ ಕಚೇರಿ ಕೀ ತೆಗೆದುಕೊಂಡು ಹೋಗಿದ್ದರು. ಅಲ್ಲಿಯೇ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ತಿಳಿದುಬಂದಿದೆ.

ಶಿಕ್ಷಣ ಇಲಾಖೆಯಲ್ಲಿ ಕೆಲಸದ ಒತ್ತಡ ಅಧಿಕವಾಗಿತ್ತು. ಡಿ-ಗ್ರೂಪ್ ನೌಕರರು ಕಡಿಮೆ ಇದ್ದರು. ಇದರಿಂದ ಕೆಲಸಗಳು ಆಗದೇ ಭಾನುವಾರವೂ ಕೆಲಸ ಮಾಡುವ ಪರಿಸ್ಥಿತಿ ಇತ್ತು. ಭಾನುವಾರ (ಡಿ.31) ಸಹ ಕಚೇರಿಗೆ ಹೋಗಿ ಕೆಲಸ ಮಾಡಿದ್ದರು. ಆದರೂ ಎಲ್ಲಾ ಕೆಲಸ ಸಮಯಕ್ಕೆ ಸರಿಯಾಗಿ ನಿರ್ವಹಿಸಲು ಸಾಧ್ಯವಾಗುತ್ತಿರಲಿಲ್ಲ. ಇದರಿಂದ ಮನೆಯಲ್ಲಿ ನಿದ್ರೆ ಬರುತ್ತಿರಲಿಲ್ಲ ಎಂದು ಡೆತ್‌ನೋಟ್‌ನಲ್ಲಿ ಬರೆದಿರುವುದಾಗಿ ಪೊಲೀಸರು ತಿಳಿಸಿದ್ದಾರೆ. ಈ ಸಂಬಂಧ ಮೂಡಿಗೆರೆ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

### ಡಿಕೆ ಅಕ್ರಮ ಆಸ್ತಿ ಗಳಿಕೆ ಕೇಸ್

## ಲೋಕಾಯುಕ್ತ ತನಿಖೆ

**ಬೆಂಗಳೂರು:** ಡಿಸಿಎಂ ಡಿಕೆ ಶಿವಕುಮಾರ್ ಅವರ ಅಕ್ರಮ ಆಸ್ತಿ ಗಳಿಕೆ ಪ್ರಕರಣವನ್ನು ಈಗ ಎರಡು ಸಂಸ್ಥೆಗಳು ತನಿಖೆ ನಡೆಸಲಿದೆ.



ಹೌದು. ಅಕ್ರಮ ಆಸ್ತಿ ಪ್ರಕರಣದ ತನಿಖೆಯನ್ನು ಲೋಕಾಯುಕ್ತದಿಂದ ನಡೆಸಲು ಸರ್ಕಾರ ಮುಂದಾಗಿದೆ. ಡಿಕೆ ಶಿವಕುಮಾರ್ ಅವರೇ ಈ ವಿಚಾರವನ್ನು ತಿಳಿಸಿದ್ದು, ಸರ್ಕಾರದಿಂದ ಅಧಿಕೃತ ಆದೇಶ ಆಗಿದೆ ಎಂದು ಹೇಳಿದ್ದಾರೆ.

2013ರಿಂದ 2018ರವರೆಗೆ 74 ಕೋಟಿ ರೂ. ಅಕ್ರಮ ಆಸ್ತಿಯನ್ನು ಡಿಕೆಶಿ ಸಂಪಾದಿಸಿದ್ದಾರೆ ಎಂಬ ಆರೋಪ ಕೇಳಿಬಂದಿದ್ದು ಈಗ ಸಿಬಿಐ ತನಿಖೆ ನಡೆಸಿದ್ದು ಚಾರ್ಜ್‌ಶೀಟ್ ಸಲ್ಲಿಕೆ ಮಾಡಲು ಮಾತ್ರ ಬಾಕಿಯಿದೆ.

**ಏನಿದು ಪ್ರಕರಣ :** 2017 ರಲ್ಲಿ ಡಿ.ಕೆ.ಶಿವಕುಮಾರ್ ವಾಸ್ತವ್ಯವಿದ್ದ ಈಗಲ್‌ಟನ್ ರೆಸಾರ್ಟ್ ಮತ್ತು ಅವರ ಸಹಚರರ ಮೇಲೆ ದಾಳಿ ಮೇಲೆ ದಾಳಿ ಮಾಡಿದ್ದ ಆದಾಯ ತೆರಿಗೆ ಇಲಾಖೆ ಸುಮಾರು 8.59 ಕೋಟಿ ಹಣ ವಶಪಡಿಸಿಕೊಂಡಿತ್ತು. ಲೆಕ್ಕಕ್ಕೆ ಸಿಗದ ಈ ಹಣವನ್ನು ಡಿ.ಕೆ.ಶಿವಕುಮಾರ್ ತಮ್ಮ ಸಹಚರರ ಬಳಿ ಇರಿಸಿದ್ದರು ಎಂದು ಆರೋಪಿಸಿತ್ತು. ಇದೇ ಪ್ರಕರಣದಲ್ಲಿ ಇಡಿ ಡಿ.ಕೆ.ಶಿವಕುಮಾರ್ ಅವರನ್ನು ಬಂಧಿಸಿತ್ತು. ಈ ಬಗ್ಗೆ ಸರ್ಕಾರಕ್ಕೆ ಪತ್ರ ಬರೆದಿದ್ದ ಇಡಿ ಪಿಸಿ ಆಕ್ಟ್ ನಡಿ ತನಿಖೆ ನಡೆಸಲು ಸಿಬಿಐಗೆ ನೀಡಲು ಶಿಫಾರಸು ಮಾಡಿತ್ತು. ಶಿಫಾರಸು ಆಧರಿಸಿ ಅಂದಿನ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ನೇತೃತ್ವದ ಸರ್ಕಾರ ಸಿಬಿಐ ತನಿಖೆಗೆ ನೀಡಿತ್ತು.

### ಹುಬ್ಬಳ್ಳಿ ಹಿಂದೂ ಕಾರ್ಯಕರ್ತನ ಬಂಧನ

## ಉದ್ದೇಶಪೂರ್ವಕ ಅಲ್ಲ, ಆಕಸ್ಮಿಕ

**ಬೆಂಗಳೂರು:** ಹುಬ್ಬಳ್ಳಿ ಗಲಭೆ ವಿಚಾರವಾಗಿ ಹಿಂದೂ ಕಾರ್ಯಕರ್ತರ ಬಂಧನ ಉದ್ದೇಶಪೂರ್ವಕ ಅಲ್ಲ ಎಂದು ಗೃಹ ಸಚಿವ ಡಾ.ಜಿ ಪರಮೇಶ್ವರ್ ಹೇಳಿದ್ದಾರೆ.

ನಗರದಲ್ಲಿ ಮಾತನಾಡಿದ ಅವರು, ಹಳೆ ಪ್ರಕರಣಗಳನ್ನು ಕ್ಲೀಯರ್ ಮಾಡಿ ಎಂದುಆದೇಶ ಕೊಟ್ಟಿದ್ದೇವೆ. ಅದರಲ್ಲಿ ಹುಬ್ಬಳ್ಳಿಯಲ್ಲಿ ಅವರನ್ನು ಅರೆಸ್ಟ್ ಮಾಡಿದ್ದಾರೆ. ಕಾನೂನು ಅಡಿಯಲ್ಲಿ ಪೊಲೀಸ್ ಇಲಾಖೆ ಕ್ರಮ ಕೈಗೊಳ್ಳುತ್ತದೆ. ಹಿಂದೂ ಕಾರ್ಯಕರ್ತರು ಅಂತ ಅಲ್ಲ. ಅದಕ್ಕೆ ಆ ಬಣ್ಣವನ್ನು ಕಟ್ಟುವುದು ಸೂಕ್ತವಲ್ಲ ಎಂದರು.

ಒಬ್ಬರನ್ನೇ ಬಂಧನ ಮಾಡಿಲ್ಲ, ಆಕಸ್ಮಿಕವಾಗಿ ಆಗಿರಬಹುದು. ಈ ಸಮಯದಲ್ಲಿ ಉದ್ದೇಶ ಪೂರ್ವಕವಾಗಿ ಯಾರಾದರೂ ಬಂಧನ ಮಾಡುತ್ತಾರಾ ವರ್ಷಾನುಗಟ್ಟಲೇ ಬಾಕಿ ಉಳಿದಿರುವ ಕೇಸ್‌ಗಳನ್ನು ಕ್ಲೀಯರ್ ಮಾಡಲು ಹೇಳಿದ್ದೇವೆ. ಅದರಲ್ಲಿ ಹುಬ್ಬಳ್ಳಿಯಲ್ಲಿ 32 ಕೇಸುಗಳು ಪೆಂಡಿಂಗ್ ಇತ್ತು . ಅದನ್ನು ಓಪನ್ ಮಾಡಿ ಕ್ಲೀಯರ್ ಮಾಡುವ ವೇಳೆ ಈ ಕೇಸ್ ಬಂದಿದೆ. ಈ ಪ್ರಕರಣದಲ್ಲಿ ಅರೆಸ್ಟ್ ಮಾಡಿ ಕಸ್ಟಡಿಗೆ ಕೊಟ್ಟಿದಾರೆ. ಎಲ್ಲರಿಗೂ ಹೇಗೆ ಮಾಡಿದ್ದಾರೆ ಇವರಿಗೂ ಹಾಗೆ ಮಾಡಿದ್ದಾರೆ ಎಂದರು.



ಇದರಲ್ಲಿ ಬೇರೆ ಯಾವುದೇ ಉದ್ದೇಶ ಇಟ್ಟುಕೊಂಡಿಲ್ಲ. ಹಿಂದೂ ಕಾರ್ಯಕರ್ತರು ಇನ್ನೊಂದು ಕಾರ್ಯಕರ್ತರು ಎನ್ನುವ ಟಾರ್ಗೆಟ್ ಮಾಡಿ ಮಾಡುವ ಪ್ರಯತ್ನ ಮಾಡಿಲ್ಲ.ಕಾನೂನಿನ ಪ್ರಕಾರ ಯಾವ ಕ್ರಮ ಆಗಬೇಕು ಪೊಲೀಸ್ ಇಲಾಖೆ ಮಾಡುತ್ತದೆ. ಇದಕ್ಕೆ ಕೋಮು ಬಣ್ಣ ಕಟ್ಟುವುದು ಸೂಕ್ತ ಅಲ್ಲ ಎಂದು ಹೇಳಿದರು.

ಈ ರೀತಿ ಬಹಳ ಕಡೆ ಕೇಸುಗಳನ್ನು ಬಿಟ್ಟು ಬಿಡುತ್ತಾರೆ. ಯಾವಾಗಲೂ ಒಮ್ಮೆ ಕೇಸ್ ರೀ ಓಪನ್ ಆಗುತ್ತದೆ. ಅಂಥದ್ದು ಏನಿತ್ತು ಈ ಪ್ರಕರಣದಲ್ಲಿ ಎನ್ನುವುದರ ಬಗ್ಗೆ ಆಯುಕ್ತರ ಜೊತೆ ಮಾತನಾಡುತ್ತೇನೆ ಎಂದು ತಿಳಿಸಿದರು.

### ಕೆಲವು ಬಿಜೆಪಿ ಶಾಸಕರು ಕೆಲಸ ಮಾಡಿಸಿಕೊಳ್ಳಲು

## ರಾತ್ರಿ ಡಿಕೆಶಿ ಮನೆಗೆ ಬರ್ತಾರೆ



**ಬೆಂಗಳೂರು:** ಕೆಲವು ಬಿಜೆಪಿ ಶಾಸಕರು ಡಿಸಿಎಂ ಡಿ.ಕೆ.ಶಿವಕುಮಾರ್ ಅವರ ಬಳಿ ಕೆಲಸ ಮಾಡಿಸಿಕೊಳ್ಳಲು ರಾತ್ರಿ ಅವರ ಮನೆಗೆ ಬಂದು ಹೋಗುತ್ತಾರೆ ಎಂದು ಯಶವಂತಪುರದ ಬಿಜೆಪಿ ಶಾಸಕ ಎಸ್. ಟಿ ಸೋಮಶೇಖರ್ ಹೇಳಿದ್ದಾರೆ.

ಸದಾಶಿವನಗರದ ಡಿಕೆಶಿ ನಿವಾಸದ ಬಳಿ ಮಾತನಾಡಿದ ಅವರು, ಹೊಸ ವರ್ಷದ ಶುಭಾಶಯ ಹೇಳಲು ಬಂದಿದ್ದೆ. ನಿಮ್ಮ ನೇತೃತ್ವದಲ್ಲಿ ಬೆಂಗಳೂರು ಅಭಿವೃದ್ಧಿ ಆಗಲಿ ಅಂತ ಹೇಳಿದೆ ಎಂದರು.

ನಮ್ಮ ಕ್ಷೇತ್ರದ ಬಗ್ಗೆ ಒಂದು ಮನವಿ ಇತ್ತು ಹಾಗಾಗಿ ಬಂದಿದ್ದೆ. ಕೆಲ ಬಿಜೆಪಿ ಶಾಸಕರು ರಾತ್ರಿ ಬರುತ್ತಾರೆ. ಮತ್ತೊಂದಿಷ್ಟು ಜನ ಮಾಧ್ಯಮದ ಕಣ್ಣು ತಪ್ಪಿಸಿ ಹೋಗುತ್ತಾರೆ. ನಾನು ರಾಜರೋಷವಾಗಿ ಬಂದು ಹೋಗುತ್ತಿದ್ದೇನೆ. ಕೆಲವರ ಹಾಗೆ ಕತ್ತಲಲ್ಲಿ ಬಂದು ಹೋಗಲ್ಲ. ನಾನಿದ್ದಾಗಲೂ ಸಾಕಷ್ಟು ಜನ ಬರುತ್ತಿದ್ದರು. ಆದರೆ ನೀವು ಅವರನ್ನು ಗಮನಿಸುವುದಿಲ್ಲ, ಯಶವಂತಪುರ ಶಾಸಕರನ್ನು ಮಾತ್ರ ಗಮನಿಸುತ್ತೀರಿ ಎಂದು ಪ್ರತಿಕ್ರಿಯಿಸಿದರು.

## ಸೋಮಣ್ಣ ಬಿಜೆಪಿ ಬಿಡಲ್ಲ, ಯತ್ನಾಳ್ ಬಗ್ಗೆ ಹೈಕಮಾಂಡ್ ನೋಡಿಕೊಳ್ಳುತ್ತೆ

**ಬೆಂಗಳೂರು:** ಮಾಜಿ ಸಚಿವ ವಿ.ಸೋಮಣ್ಣ ಬಿಜೆಪಿ ಬಿಡಲ್ಲ. ಸೋಮಣ್ಣ ಅವರ ಜೊತೆ ದೂರವಾಣಿ ಜೊತೆ ಮಾತುಕತೆ ನಡೆಸಿದ್ದೇನೆ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಜನವರಿ 4 ರಂದು ಸೋಮಣ್ಣ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸುತ್ತೇನೆ. ಅವತ್ತು ಎಲ್ಲವೂ ದಿ ಎಂಡ್ ಆಗಲಿದೆ. ಅಲ್ಲದೇ ಯತ್ನಾಳ್ ಅಸಮಾಧಾನ ವಿಚಾರವನ್ನು ಹೈಕಮಾಂಡ್ ಅವರು ನೋಡಿಕೊಳ್ಳುತ್ತಾರೆ ಎಂದರು.

ಲೋಕಸಭೆ ಬಳಿಕ ಸಾಕಷ್ಟು ಬದಲಾವಣೆ ಆಗುತ್ತೆ. ಶಿಂಧೆ, ಪವಾರ್ ಇದ್ದಾರೆ. ಸರ್ಕಾರ ಇರಲ್ಲ ಎಂದು ಕುಮಾರಸ್ವಾಮಿ ಸಹ ಹೇಳಿದ್ದಾರೆ. ಅವರಿಗೂ ಹಲವು ಸಂಪರ್ಕ ಇದೆ. ಯಾರೋ ಜ್ಯೋತಿಷಿ ಸಹ ಈ ಸರ್ಕಾರ ಉಳಿಯಲ್ಲ,



ಅಲ್ಲೋಲ ಕಲ್ಲೋಲ ಎಂದಿದ್ದಾರೆ. ಸರ್ಕಾರ ಎರಡು ಭಾಗ ಆಗುತ್ತೆ ಎಂದಿದ್ದಾರೆ. ಆದರೆ ನಾನು ಜ್ಯೋತಿಷ್ಯ ನಂಬಲ್ಲ, ಆದರೆ ನನಗೂ ಮಾಹಿತಿ ಇದೆ. ನಾನು ಎಲ್ಲಿ ಯಾವಾಗ ಹೇಳಬೇಕೋ ಆಗ ಹೇಳುವೆ. ಡಿಕೆಶಿ ಅವರೇ ಸುಳಿವು ಕೊಟ್ಟಿದ್ದಾರೆ ಎಂದು ಮಾರ್ಮಿಕವಾಗಿ ನುಡಿದರು.

## ಆನಂದ, ಪರಮಾನಂದ

**ಯಾರಿದು ಅರುಣ್ ಯೋಗಿರಾಜ್:** ಅರುಣ್ ಯೋಗಿರಾಜ್ ಮೈಸೂರು ಮಣ್ಣಿನ ಅಪ್ಪಟ ಪ್ರತಿಭೆ. ಅರುಣ್ ಯೋಗಿರಾಜ್ ಅವರ ಕುಟುಂಬ ಕಲ್ಲಿನ ವಿಗ್ರಹ ಶಿಲ್ಪದಲ್ಲಿ 200 ವರ್ಷಗಳ ಪರಂಪರೆ ಹೊಂದಿದೆ. ಯೋಗಿರಾಜ್ ಅವರ ತಂದೆ, ತಾತ, ಮುತ್ತಾತ, ಅವರ ತಂದೆ ಹಾಗೂ ತಾತ, ಅಂದರೆ ಬರೋಬ್ಬರಿ ಐದು ತಲೆ ಮಾರಿನಿಂದ ಕಲ್ಲಿನ ಶಿಲ್ಪ ಕಲೆಯಲ್ಲಿ ಇವರ ವಂಶಸ್ಥರು ತೊಡಗಿಕೊಂಡಿದ್ದಾರೆ. ಅರುಣ್ ತಂದೆ ಯೋಗಿರಾಜ್ ಕೂಡ ನುರಿತ ಶಿಲ್ಪಿ.

**ಮೈಸೂರು ರಾಜರ ಆಸ್ಥಾನದಲ್ಲಿದ್ದ ಅರುಣ್ ಅಜ್ಜ:** ಅರುಣ್ ಯೋಗಿರಾಜ್ ಅವರ ಅಜ್ಜ ಬಸವಣ್ಣ ಶಿಲ್ಪಿ ಮೈಸೂರು ರಾಜರ ಆಸ್ಥಾನದಲ್ಲಿದ್ದರು. ತಾತ ಮುತ್ತಾತ ಕೂಡ ಶಿಲ್ಪಿಗಳಾಗಿದ್ದರು. ಸುಮಾರು 200 ವರ್ಷದ ಹಿಂದಿನವರ ಕಲೆ ಅರುಣ್ ಅವರಿಗೆ ಸಿದ್ಧಿಸಿದೆ. ಅರುಣ್ ಯೋಗಿರಾಜ್ ಅವರು ಬಾಲ್ಯದಿಂದಲೂ ಕೆತ್ತನೆಯಲ್ಲಿ ತೊಡಗಿಸಿಕೊಂಡಿದ್ದರು. ಆದರೆ ಎಂಬಿಎ ಮುಗಿಸಿದ ಬಳಿಕ ಖಾಸಗಿ ಕಂಪನಿಯಲ್ಲಿ ಕೆಲಕಾಲ ಕೆಲಸ ಮಾಡಿದ್ದಾರೆ. ಆದರೆ ಅವರಿಗೆ ಆ ಕೆಲದ ತೃಪ್ತಿ ನೀಡಲಿಲ್ಲ. ಆಗ ಅವರಿಗೆ, ತಮ್ಮ ಪೂರ್ವಜರ ಕಲೆಯನ್ನು ಮುಂದುವರಿಸಬೇಕು ಎಂದು ಅನಿಸಿದೆ. ಬಳಿಕ ವಾಪಸ್ಸು ಕಲೆಯ ಕಡೆಗೆ ಬಂದರು. ತಂದೆಗೆ ವಿಚಾರ ತಿಳಿಸಿದರು. ಮೊದ ಮೊದಲು ತಂದೆ ಇದಕ್ಕೆ ಒಪ್ಪದಿದ್ದರೂ ಮಗನ ಆಸಕ್ತಿ ಮುಂದೆ ಅವರು ಸೋಲಲೇಬೇಕಾಯಿತು.

**ಅರುಣ್ ಯೋಗಿರಾಜ್ ಗೆ ತಂದೆಯ ಷರತ್ತು!:** ವಾಪಸ್ ಕಲೆ ಕೆಲಸಕ್ಕೆ ಮರಳಲು ಅರುಣ್ ಅವರಿಗೆ ಅವರ ತಂದೆ ಒಂದು ಷರತ್ತನ್ನು ಹಾಕಿ ಅನುಮತಿ ನೀಡಿದರು. ನೀನು ಎಂಬಿಎ ಪದವೀಧರ. ಮಾರ್ಕೆಟಿಂಗ್ ನಿನ್ನ ತಲೆಯಲ್ಲಿ ಹಾಸು ಹೊಕ್ಕಿರುತ್ತದೆ. ಆದರೆ ಇದು ಶ್ರದ್ಧಾ ಭಕ್ತಿಯ ಕೆಲಸ.

### ಮೊದಲನೆ ಪುಟದಿಂದ...

ಇಲ್ಲಿ ನೀನು ಮಾರ್ಕೆಟಿಂಗ್ ಮಾಡುವುದಾದರೆ ಸುತಾರಾಂ ನೀನು ಬರಬೇಡ. ಕಲ್ಲಿನ ವಿಗ್ರಹಗಳ ಖರೀದಿ ಮಾರಾಟಕ್ಕೆ ಇಲ್ಲಿ ಅವಕಾಶವಿಲ್ಲ. ಇಲ್ಲೇನಿದ್ದರೂ ಕಲಾಸೇವೆ ಅಷ್ಟೇ ಎಂದು ಕಡ್ಡಿ ತುಂಡಾದ ರೀತಿ ಷರತ್ತು ವಿಧಿಸಿದ್ದರು. ಅದಕ್ಕೆ ಒಪ್ಪಿದ ಅರುಣ್ ಯೋಗಿರಾಜ್ 2008ರಿಂದ ಮತ್ತೆ ಶಿಲ್ಪ ಕೆತ್ತನೆ ವೃತ್ತಿ ಮುಂದುವರಿಸಿದರು.

**ಅರುಣ್ ಯೋಗಿರಾಜ್ ಸಾಧನೆಗಳಿವು:** ದೆಹಲಿಯ ಇಂಡಿಯಾ ಗೇಟ್ ಬಳಿಯ ಅಮರ್ ಜವಾನ್ ಜ್ಯೋತಿಯ ಹಿಂದೆ ಸ್ಥಾಪಿಸಲಾಗಿರುವ ಸುಭಾಷ್ ಚಂದ್ರ ಬೋಸ್ ಅವರ 30-ಅಡಿ ಪ್ರತಿಮೆಯನ್ನು ನಿರ್ಮಾಣ ಮಾಡಿರುವುದೂ ಸೇರಿದಂತೆ ಹಲವು ಪ್ರಮುಖ ಪ್ರತಿಮೆ ನಿರ್ಮಾಣಗಳಲ್ಲಿ ಅರುಣ್ ಅವರ ಶ್ರಮವಿದೆ.ಕೇದಾರನಾಥದ 12 ಅಡಿ ಎತ್ತರದ ಆದಿ ಶಂಕರಾಚಾರ್ಯರ ಶಿಲ್ಪ ಮತ್ತು ಮೈಸೂರಿನ 21 ಅಡಿ ಎತ್ತರದ ಹನುಮಾನ್ ಪ್ರತಿಮೆ ಕೂಡ ಅರುಣ್ ಯೋಗಿರಾಜ್ ಕೆತ್ತನೆಯಲ್ಲಿ ಮೂಡಿಬಂದಿರುವುದು ಗಮನಾರ್ಹ.

## ಕಟ್ಟುತ್ತೇವೆ

ಗುಲಾಮಗಿರಿ ಸಂಕೇತ ಹೋಗಿ ಸ್ವಾಭಿಮಾನ ಸಂಕೇತ ನಿರ್ಮಾಣ ಆಗಿದೆ. ಮನೆ ಮನೆಗೆ ಮಂತ್ರಾಕ್ಷತೆ ಕೊಡ್ತಿದ್ದೇವೆ. ಜ.22 ರಂದು ದೇವರ ಮನೆಯಲ್ಲಿ ಇಟ್ಟು ಪೂಜೆ ಮಾಡಿ ಸಿಹಿ ತಯಾರಿಸಿ ಊಟ ಮಾಡಿ. ದೀಪಾವಳಿ ಹಬ್ಬದ ರೀತಿ ಆಚರಣೆ ಮಾಡಿ ಎಂದು ತಿಳಿಸಿದ್ದಾರೆ.

ಪವಿತ್ರವಾದ ಕೆಲಸ ಮಾಡುತ್ತಿರುವ ಸಂದರ್ಭದಲ್ಲಿ ರಾಜಕಾರಣ ಮಾತನಾಡಲ್ಲ, ಪ್ರಭು ಶ್ರೀರಾಮಚಂದ್ರನ ಭಕ್ತರು ಇದ್ದಾರೋ, ಅವರಿಗೆ ಆಹ್ವಾನ ಕೊಟ್ಟಿದ್ದೇವೆ. ಬಿಜೆಪಿಯ ರಾಮ ಎನ್ನುವವರಿಗೆ ಕೇಂದ್ರದ ನಾಯಕರು ಆಹ್ವಾನ ಕೊಟ್ಟಿಲ್ಲ. ರಾಮನ ಬಗ್ಗೆ ಯಾರಿಗೆ ಗೌರವ ಇದೆ, ಅಭಿಮಾನ ಇದೆ ಎಲ್ಲರೂ ಬರಬಹುದು ಎಂದು ವಿಪಕ್ಷಗಳಿಗೆ ಟಾಂಗ್ ಕೊಟ್ಟಿದ್ದಾರೆ.

ಅಯೋಧ್ಯೆಯಲ್ಲಿ ರಾಮಮಂದಿರ ಆಗಬೇಕು ಎನ್ನುವ ತೀರ್ಮಾನ ಆಗುತ್ತಿದ್ದಂತೆ, ಕಾಶಿ ಮಥುರಾದಲ್ಲಿ ಸರ್ವೇಗೆ ಆದೇಶ ಆಗಿದೆ. ನಮ್ಮ ಪರವಾಗಿ ತೀರ್ಪು ಬರುತ್ತದೆ. ಕಾಶಿಯಲ್ಲೂ ಮಸೀದಿ ಒಡೆದುಹಾಕಿ ಕಾಶಿ ಮಂದಿರ ಕಟ್ಟುತ್ತೇವೆ. ಮಥುರಾದಲ್ಲೂ ಶ್ರೀಕೃಷ್ಣನ ದೇವಸ್ಥಾನ ಕಟ್ಟಿಯೇ ಕಟ್ಟುತ್ತೇವೆ ಎಂದು ಮಾತನಾಡಿದ್ದಾರೆ.

## ವ್ಯಾಕ್ಸಿನೇಷನ್ ಆರಂಭ

**ಯಾವ ಜಿಲ್ಲೆಗೆ ಎಷ್ಟು ಕಾರ್ಬೆವ್ಯಾಕ್ಸ್ ಡೋಸ್ ಹಂಚಿಕೆ:** ಬೆಂಗಳೂರು ನಗರ-840, ಬೆಂಗಳೂರು ಗ್ರಾಮಾಂತರ-480, ಬಿಬಿಎಂಪಿ-5,680, ಚಿಕ್ಕಬಳ್ಳಾಪುರ-520, ಕೋಲಾರ-680, ರಾಮನಗರ-440, ತುಮಕೂರು-1,300, ಬೆಳಗಾವಿ-2,280, ಧಾರವಾಡ-920, ಹಾವೇರಿ-780, ಉತ್ತರ ಕನ್ನಡ-660, ಬಳ್ಳಾರಿ-640, ಚಿತ್ರದುರ್ಗ-720, ದಾವಣಗೆರೆ-740, ಶಿವಮೊಗ್ಗ-820,ವಿಜಯನಗರ-560, ಬಾಗಲಕೋಟೆ-900, ವಿಜಯಪುರ-1,000, ಗದಗ-500, ಕೊಪ್ಪಳ-520, ಚಾಮರಾಜನಗರ-440, ಹಾಸನ-720, ಕೊಡಗು-220, ಮಂಡ್ಯ-720, ಮೈಸೂರು-1,360, ಚಿಕ್ಕಮಗಳೂರು-480, ದಕ್ಷಿಣ ಕನ್ನಡ-1,140, ಉಡುಪಿ-520, ಬೀದರ್-840, ಕಲಬುರಗಿ-1,280, ರಾಯಚೂರು-820, ಯಾದಗಿರಿ-480 ಡೋಸ್ ಹಂಚಲಾಗಿದೆ. ಒಟ್ಟು 30,000 ಡೋಸ್ ಲಸಿಕೆಯನ್ನು ಸರಬರಾಜು ಮಾಡಲಾಗಿದೆ.

## ಡ್ರೈವರ್ ಪ್ರೇಮದಾಟಕ್ಕೆ ವಿದ್ಯಾರ್ಥಿನಿ ಬಲಿ

**ಚಿಕ್ಕಮಗಳೂರು:** ಶಾಲಾ ಬಸ್ ಡ್ರೈವರ್ ಜೊತೆಗಿನ ಪ್ರೇಮದಾಟಕ್ಕೆ 8ನೇ ತರಗತಿ ವಿದ್ಯಾರ್ಥಿನಿ ಬಲಿಯಾಗಿರುವ ಘಟನೆ ಚಿಕ್ಕಮಗಳೂರು ಜಿಲ್ಲೆಯಲ್ಲಿ ನಡೆದಿದೆ.



ಅಜ್ಜಂಪುರ ಸಮೀಪದ ಬಂಕನಕಟ್ಟೆ ಬಳಿ ಶಾಲಾ ಬಸ್ ಡ್ರೈವರ್ 8ನೇ ತರಗತಿ ವಿದ್ಯಾರ್ಥಿನಿಯೊಂದಿಗೆ ಚಲಿಸುತ್ತಿದ್ದ ರೈಲಿಗೆ ಸಿಲುಕಿ ತಾನೂ ಮಾಡಿಕೊಂಡಿದ್ದಾನೆ. ಡ್ರೈವರ್ ಸಂತೋಷ್ (38), ವಿದ್ಯಾರ್ಥಿನಿ ಜಾಹ್ನವಿ (14) ಸಾವಿಗೀಡಾದ ದುರ್ದೈವಿಗಳು.

ಅಜ್ಜಂಪುರ ತಾಲೂಕಿನ ಗಿರಿಯಾಪುರ ಗ್ರಾಮದ ಖಾಸಗಿ ಶಾಲೆಯಲ್ಲಿ ಜಾಹ್ನವಿ 8ನೇ ತರಗತಿ ವ್ಯಾಸಂಗ ಮಾಡುತ್ತಿದ್ದಳು. ಅದೇ ಶಾಲೆಯಲ್ಲಿ ಸಂತೋಷ್ ಕಳೆದ ಮೂರು ವರ್ಷಗಳಿಂದ ಬಸ್ ಡ್ರೈವರ್ ಆಗಿದ್ದ. ವಿದ್ಯಾರ್ಥಿನಿಯನ್ನ ಪ್ರೀತಿಸುವಂತೆ ಪೀಡಿಸುತ್ತಿದ್ದ. ಬಸ್ ಡ್ರೈವರ್ ಕಿರುಕುಳ ನೀಡುತ್ತಿದ್ದ ಬಗ್ಗೆ ವಿದ್ಯಾರ್ಥಿನಿ ಪೋಷಕರು ಶಾಲಾ ಮುಖ್ಯಸ್ಥರ ಗಮನಕ್ಕೆ ತಂದಿದ್ದರು.

ಭಾನುವಾರ ಸ್ನೇಹಿತರ ಜೊತೆ ನ್ಯೂಇಯರ್ ಪಾರ್ಟಿಗೆ ಹೋಗುವುದಾಗಿ ಜಾಹ್ನವಿ ಮನೆಯಿಂದ ಹೊರಟಿದ್ದಳು. ಆದ್ರೆ ಸಂತೋಷ್ ಆಕೆಯನ್ನ ತನ್ನೊಂದಿಗೆ ಕರೆದೊಯ್ದಿದ್ದ.

ನಂತರ ಚಲಿಸುತ್ತಿದ್ದ ರೈಲಿಗೆ ಸಿಕ್ಕಿ ಇಬ್ಬರು ಸಾವಿಗೀಡಾಗಿದ್ದಾರೆ. ಈ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಘಟನೆ ನಂತರ ದೂರು ನೀಡಿದರೂ ಕ್ರಮ ಕೈಗೊಳ್ಳದ ಶಾಲೆಯ ಮುಖ್ಯಸ್ಥರ ವಿರುದ್ಧ ಕ್ರಮಕ್ಕೆ ಒತ್ತಾಯಿಸಿದ್ದಾರೆ. ಸದ್ಯ ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಚಿಕ್ಕಮಗಳೂರು ಮಲ್ಲೇಗೌಡ ಜಿಲ್ಲಾಸ್ಪತ್ರೆಗೆ ರವಾನಿಸಲಾಗಿದೆ. ಚಿಕ್ಕಮಗಳೂರು ಜಿಲ್ಲೆಯ ಅಜ್ಜಂಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದ್ದು, ಪ್ರಕರಣ ದಾಖಲಾಗಿದೆ.

## ಮೊಬೈಲ್ ಎತ್ತಿಕೊಳ್ಳಲು ನಮ್ಮ ಮೆಟ್ರೋ ಹಳಿಗಳ ಮೇಲೆ ಜಿಗಿದ ಮಹಿಳೆ

**ಬೆಂಗಳೂರು:** ಹೊಸ ವರ್ಷದಂದೆ ಇಂದಿರಾನಗರದಲ್ಲಿ ಅಘಾತಕಾರಿ ಘಟನೆಯೊಂದು ನಡೆದಿದೆ. ಕೆಳಗೆ ಬಿದ್ದ ಮೊಬೈಲ್ ತೆಗೆದುಕೊಳ್ಳಲು 750KV ವೋಲ್ಟ್ ವಿದ್ಯುತ್ ಹರಿಯುವ ನಮ್ಮ ಮೆಟ್ರೋ ಟ್ರ್ಯಾಕ್ ಗೆ ಮಹಿಳೆಯೊಬ್ಬರು ಜಿಗಿದ ಘಟನೆ ಬೆಂಗಳೂರಿನ ಇಂದಿರಾನಗರದ ಮೆಟ್ರೋ ನಿಲ್ದಾಣದಲ್ಲಿ ನಡೆದಿದೆ. ಸದ್ಯ ಮೆಟ್ರೋ ಸಿಬ್ಬಂದಿ ಸಮಯ ಪ್ರಜ್ಞೆಯಿಂದ ಭಾರೀ ಅನಾಹುತ ತಪ್ಪಿದೆ. ಇನ್ನು ಮಹಿಳೆ ಟ್ರ್ಯಾಕ್ ಗೆ ಜಿಗಿದ ಪರಿಣಾಮ ಪರ್ಪಲ್ ಲೈನ್‌ನಲ್ಲಿ ಸುಮಾರು 15 ನಿಮಿಷಗಳ ಕಾಲ ರೈಲು ಸಂಚಾರ ಸ್ಥಗಿತವಾಗಿತ್ತು.

ಜ.01ರ ಸಂಜೆ 6.40ರ ಸುಮಾರಿಗೆ ಇಂದಿರಾನಗರ ಮೆಟ್ರೋ ಸ್ಟೇಷನ್ ನಲ್ಲಿ ಈ ಘಟನೆ ನಡೆದಿದೆ. ಇಂದಿರಾನಗರ ಮೆಟ್ರೋ ನಿಲ್ದಾಣದ ಪ್ಲಾಟ್‌ಫಾರ್ಮ್ 1ರಲ್ಲಿ ಮಹಿಳೆಯೊಬ್ಬರು ಮೆಟ್ರೋ ರೈಲಿಗಾಗಿ ಕಾದು ನಿಂತಿದ್ದರು.ಈ ವೇಳೆ ಆಕಸ್ಮಿಕವಾಗಿ ಅವರ ಮೊಬೈಲ್ ರೈಲು ಹಳಿಗಳ ಮೇಲೆ ಬಿದ್ದಿದೆ. ಆಗ ತಕ್ಷಣವೇ ಮೊಬೈಲ್ ಎತ್ತಿಕೊಳ್ಳಲು ಮಹಿಳೆ ಹಳಿಗಳ ಮೇಲೆ ಜಿಗಿದಿದ್ದಾರೆ. ಇದನ್ನು ಗಮನಿಸಿದ ಮೆಟ್ರೋ ಸಿಬ್ಬಂದಿ ತಕ್ಷಣವೇ ವಿದ್ಯುತ್ ಸರಬರಾಜನ್ನು ಸ್ಥಗಿತಗೊಳಿಸಿದ್ದು, ಕೂಡಲೇ ಆಕೆಯನ್ನು ಮೇಲಕ್ಕೆ ಎಳೆದುಕೊಂಡಿದ್ದಾರೆ. ಇನ್ನು ವಿದ್ಯುತ್ ಸರಬರಾಜು ಸ್ಥಗಿತಗೊಳಿಸಿದ ಕಾರಣ ಪರ್ಪಲ್ ಲೈನ್‌ನಲ್ಲಿ ಸುಮಾರು 15 ನಿಮಿಷಗಳ ಕಾಲ ರೈಲು ಸಂಚಾರ ಸ್ಥಗಿತವಾಗಿತ್ತು.

# ಬುಡಕಟ್ಟು ಸಮುದಾಯಗಳನ್ನು ಮುಖ್ಯವಾಹಿನಿಗೆ ತನ್ನಿ

**ಮೈಸೂರು:** ಪಿಎಂ ಜನ್ಮನ್ ಬುಡಕಟ್ಟು ಸಮುದಾಯಗಳನ್ನು ಮುಖ್ಯವಾಹಿನಿಗೆ ತರುವ ಗುರಿ ಹೊಂದಿರುವ ಸರ್ಕಾರದ ಯೋಜನೆಯಾಗಿದ್ದು, ಈ ನಿಟ್ಟಿನಲ್ಲಿ ನೇಮಕವಾಗಿರುವ ನೋಡೆಲ್ ಅಧಿಕಾರಿಗಳು ಅಗತ್ಯ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ ಕೆ.ವಿ.ರಾಜೇಂದ್ರ ಅವರು ತಿಳಿಸಿದರು.



ಜಿಲ್ಲಾಧಿಕಾರಿಗಳು ಅಧ್ಯಕ್ಷತೆಯಲ್ಲಿ ಕಃ – ಎಂಒಂಒಂ ಯೋಜನೆಯ ಅನುಷ್ಠಾನಕ್ಕೆ ಸಂಬಂಧ ನಡೆದ ಸಭೆಯಲ್ಲಿ ಅವರು ಮಾತನಾಡಿದರು.

ಸುರಕ್ಷಿತ ವಸತಿ, ಶುದ್ಧ ಕುಡಿಯುವ ನೀರಿನ ಪ್ರದೇಶ, ಸುಧಾರಿತ ಆರೋಗ್ಯ, ಶಿಕ್ಷಣ, ಪೋಷಣೆ, ರಸ್ತೆ ಮತ್ತು ದೂರಸಂಪರ್ಕ ಸಂಪರ್ಕ, ಜೊತೆಗೆ ಸುಸ್ಥಿರ ಜೀವನೋಪಾಯಕ್ಕಾಗಿ ಅವಕಾಶಗಳನ್ನು ಒಳಗೊಂಡಂತೆ ಈ ಸೌಲಭ್ಯಗಳು ಬುಡಕಟ್ಟು ಸಮುದಾಯದ ಅರ್ಹ ಫಲಾನುಭವಿಗಳಿಗೆ ಸಿಗುವ ಕೆಲಸ ಆಗಬೇಕು. ಈ ನಿಟ್ಟಿನಲ್ಲಿ ಅಧಿಕಾರಿಗಳು ಸಮರ್ಪಕವಾಗಿ ಕೆಲಸ ನಿರ್ವಹಿಸಬೇಕು ಎಂದು ತಿಳಿಸಿದರು.

ಜಿಲ್ಲೆಯಲ್ಲಿ 153 ಹಾಡಿಗಳಲ್ಲಿ ಬುಡಕಟ್ಟು ಸಮುದಾಯದ ಜನರು ಇರುತ್ತಾರೆ. ಜೇನು ಕುರುಬ ಸಮುದಾಯದವರು ಈಗಲೂ ಕಚ್ಚಾ ಮನೆಗಳಲ್ಲಿ ವಾಸ ಮಾಡುತ್ತಿದ್ದಾರೆ. ಅವರಿಗೆ ಪಕ್ಕಾ ಮನೆ ನಿರ್ಮಾಣ ಮಾಡಿ ನೀಡಬೇಕು ಹಾಗೂ ಸೌಲಭ್ಯ ವಂಚಿತ ಬುಡಕಟ್ಟು ಸಮುದಾಯದ ಅರ್ಹ ಫಲಾನುಭವಿಗಳಿಗೆ ಗುರುತಿಸಿ ನೀಡಬೇಕು. 15 ವರ್ಷ ಹಳೆಯ ಮನೆಗಳು ಇದ್ದರೂ ಅಂತಹವರನ್ನು ಗುರುತಿಸಿ ಸೌಲಭ್ಯಗಳನ್ನು ನೀಡಲು ಅಗತ್ಯ ಕ್ರಮ ವಹಿಸಬೇಕು ಎಂದರು.

ತಾಲ್ಲೂಕಿನ ತಹಶೀಲ್ದಾರ್ ಅವರು ಈ ಯೋಜನೆಯಡಿ ಸೌಲಭ್ಯಗಳನ್ನು ನೀಡಲು ಎರಡು ಗಂಟೆ ಪ್ರತಿದಿನ ಕೆಲಸ ನಿರ್ವಹಿಸಬೇಕು. ಯಾವುದೇ ಹಾಡಿಗಳಲ್ಲಿ ಮೂಲ ಭೂತ ಸೌಕರ್ಯ ಕೊರತೆ ಆಗದಂತೆ ಅಧಿಕಾರಿಗಳು ಅಗತ್ಯ ಕ್ರಮ ವಹಿಸುವಂತೆ ಸೂಚಿಸಿದರು.

ಹಾಡಿಗಳಲ್ಲಿ ಅಧಿಕಾರಿಗಳು ಸಭೆ ನಡೆಸಿ ಸೂರು ಇಲ್ಲದವರಿಗೆ ಮನೆ, ಕುಡಿಯುವ ನೀರು, ಗ್ರಾಮ ಸಡಕ್ ಯೋಜನೆಯಡಿ ರಸ್ತೆ ನಿರ್ಮಾಣ, ಆಧಾರ್ ನೋಂದಣಿ, ಜಾತಿ ಹಾಗೂ ಜನನ ಪ್ರಮಾಣ ಪತ್ರ ಮಾಡಿಸುವುದು, ಎಪಿಕ್ ಕಾರ್ಡ್ ಮಾಡಿಸುವ ಬಗ್ಗೆ ನೋಡೆಲ್ ಅಧಿಕಾರಿಗಳು ಗಮನಹರಿಸಬೇಕು ಎಂದು ಅವರು ತಿಳಿಸಿದರು.

ಹೆಚ್.ಡಿ.ಕೋಟೆ, ಹುಣಸೂರು ಹಾಗೂ ಪಿರಿಯಾಪಟ್ಟಣ ತಾಲೂಕುಗಳ ಹಾಡಿಗಳಿಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ಭೇಟಿ ನೀಡಿ ಅಲ್ಲಿ ಅವರಿಗೆ ಸರ್ಕಾರದ ಸೌಕರ್ಯಗಳನ್ನು ನೀಡುವುದು. ಸುರಕ್ಷಿತ ವಸತಿ, ಶುದ್ಧ ಕುಡಿಯುವ ನೀರು, ಆರೋಗ್ಯ ರಕ್ಷಣೆಗೆ ಸುಧಾರಣೆ, ಶಿಕ್ಷಣ, ಮತ್ತು ಪೋಷಣೆ, ರಸ್ತೆ ಮತ್ತು ದೂರಸಂಪರ್ಕ ಸಂಪರ್ಕ, ಮತ್ತು ಸುಸ್ಥಿರ ಜೀವನೋಪಾಯಕ್ಕಾಗಿ ಅವಕಾಶಗಳ ಬಗ್ಗೆ ಅಧಿಕಾರಿಗಳು ಇಂದೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ಮಾಡಿ ಕಾರ್ಯಕ್ರಮದ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಕೆಲಸ ಮಾಡಲು ಮುಂದಾಗಬೇಕು ಎಂದು ಅವರು ತಿಳಿಸಿದರು.

ಸಭೆಯಲ್ಲಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ.ಗಾಯಿತ್ರಿ, ಅಪರ ಜಿಲ್ಲಾಧಿಕಾರಿ ಆರ್.ಲೋಕನಾಥ್, ಹುಣಸೂರು ಉಪ ವಿಭಾಗಾಧಿಕಾರಿ ಹ್ಯಾರಿಸ್ ಸುಮ್ಮೈರ್, ಸಮಗ್ರ ಬುಡಕಟ್ಟು ಅಭಿವೃದ್ಧಿ ಯೋಜನೆಯ ಯೋಜನಾ ಸಮನ್ವಯಾಧಿಕಾರಿ ಎನ್. ಮುನಿರಾಜು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೋವಿಡ್ ಮುಂಜಾಗ್ರತೆ ವಹಿಸಿ

**ಮೈಸೂರು:** ಜಿಲ್ಲೆಯಲ್ಲಿ ಕೋವಿಡ್ ಪ್ರಕರಣಗಳ ಸಂಬಂಧ ಮುನ್ನೆಚ್ಚರಿಕೆಯಾಗಿ ಅಗತ್ಯ ಸಿದ್ದತೆಗಳನ್ನು ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಡಾ ಕೆ.ವಿ.ರಾಜೇಂದ್ರ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಯವರ ಕಚೇರಿ ಸಭಾಂಗಣದಲ್ಲಿ ಇಂದು ಆರೋಗ್ಯ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿ, ಸರ್ಕಾರದ ಮಾರ್ಗಸೂಚಿಯಂತೆ ನಿಗದಿತ ಪರೀಕ್ಷೆಗಳನ್ನು ನಡೆಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬೆಡ್‌ಗಳ ವ್ಯವಸ್ಥೆ, ಅಗತ್ಯ ಔಷಧಿಗಳ ದಾಸ್ತಾನಿಗೆ ಕ್ರಮವಹಿಸಿ ಎಂದರಲ್ಲದೆ, ಅಂಬುಲೆನ್ಸ್ ಸುಸ್ಥಿತಿಯಲ್ಲಿರುವಂತೆ ನೋಡಿಕೊಳ್ಳುವುದರ ಜೊತೆಗೆ ಆಕ್ಸಿಜನ್ ಪ್ಲಾಂಟ್ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಪರಿಶೀಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಾರ್ವಜನಿಕರು ಭಯಪಡುವ ಅಗತ್ಯವಿಲ್ಲ ಶೀತ, ನೆಗಡಿ, ಕೆಮ್ಮು ಸಾಮಾನ್ಯವಾಗಿ ಬರುತ್ತದೆ ಅದಕ್ಕೆ ಹೆದರುವುದು ಬೇಡ ಮುನ್ನೆಚ್ಚರಿಕೆಯಿಂದ ಚಿಕಿತ್ಸೆ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿಯವರು ತಿಳಿಸಿದರು. ವೃದ್ದರು ರಕ್ತದ ಒತ್ತಡ, ಸಕ್ಕರೆ ಕಾಯಿಲೆ ಕಡಿಮೆ ಮಾಡುವ ಬಗ್ಗೆ ಹಾಗೂ ಆರೋಗ್ಯದ ಕಡೆ ಹೆಚ್ಚು ಗಮಹರಿಸಲು ಅರಿವು ಮೂಡಿಸಿ ಎಂದು ತಿಳಿಸಿದರು.

ಪ್ರತಿ ತಾಲೂಕಿನಲ್ಲಿಯೂ ಕೋವಿಡ್ ಖಖಿಕಅಖ ಪರೀಕ್ಷೆ ಮಾಡಿಸಲಾಗುತ್ತಿದೆ. ಬೆಂಗಳೂರು ಬಿಟ್ಟರೆ ಮೈಸೂರಿನಲ್ಲಿ ಪಾಸಿಟಿವಿಟಿ ಜಾಸ್ತಿ ಇದೆ. ಕಳೆದ 8 ದಿನಗಳಲ್ಲಿ ಮೂರು ಸಾವಾಗಿದ್ದು, 84 ಪ್ರಕರಣಗಳು ಸಕ್ರಿಯವಾಗಿದೆ. ನೆನ್ನೆ 25 ಪಾಸಿಟಿವ್ ಪ್ರಕರಣ ದಾಖಲಾಗಿದೆ. 20 ಕೋವಿಡ್ ರೋಗಿಗಳು ಹಾಸ್ಪಿಟಲ್ ನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಜಿಲ್ಲಾ ಆರೋಗ್ಯ ಸರ್ವೇಕ್ಷಣಾಧಿರಿಗಳಾದ ಡಾ. ಮಹಾದೇವ ಪ್ರಸಾದ್ ಅವರು ಸಭೆಯಲ್ಲಿ ಮಾಹಿತಿ ನೀಡಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಕೆ.ಎಂ. ಗಾಯಿತ್ರಿ, ಅಪರ ಜಿಲ್ಲಾಧಿಕಾರಿ ಆರ್. ಲೋಕನಾಥ್, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಪಿ.ಸಿ ಕುಮಾರಸ್ವಾಮಿ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಭಾರತ ಕೊರೋನಾ ಮುಕ್ತ ದೇಶವಾಗಲಿ



**ಮೈಸೂರು:** ಹೊಸ ವರ್ಷದಲ್ಲಿ ಎಲ್ಲಾ ಜನರು ಆರೋಗ್ಯವಂತರಾಗಿದ್ದು, ಭಾರತ ಕೊರೋನಾ ಮುಕ್ತ ದೇಶವಾಗಲಿ ಎಂದು ಮೈಸೂರು ಜಯದೇವ ಹೃದ್ರೋಗ ಸಂಸ್ಥೆಯ ವೈದ್ಯಕೀಯ ಅಧೀಕ್ಷಕ ಡಾ. ಕೆ.ಎಸ್. ಸದಾನಂದ ತಿಳಿಸಿದರು. ಜಯದೇವ ಆಸ್ಪತ್ರೆಯಲ್ಲಿ ಹೊಸ ವರ್ಷದ ಅಭಿನಂದನೆ ಸ್ವೀಕರಿಸಿ ಮಾತನಾಡಿದ ಅವರು ಮನಷ್ಯನಿಗೆ ಎಷ್ಟೇ ಹಣ ಅಂತಸ್ತು ಇದ್ದರೂ ಸಹ ಆರೋಗ್ಯ ಕೊಂಡುಕೊಳ್ಳಲು ಸಾಧ್ಯವಿಲ್ಲ. ಆರೋಗ್ಯ ಚೆನ್ನಾಗಿದ್ದರೆ ಏನು ಬೇಕಾದರೂ ಮಾಡಬಹುದು, ಪ್ರತಿಯೊಬ್ಬರು ಪ್ರತಿದಿನ ಅರ್ಧಗಂಟೆ ವ್ಯಾಯಾಮ ಮಾಡಬೇಕು. 7 ಗಂಟೆ ನಿದ್ರೆ ಮಾಡಬೇಕು. ದುಶ್ಚಟಗಳಿಂದ ದೂರವಿದ್ದು ಸಾಮಾಜಿಕ ಜಾಲತಾಣವನ್ನು ಹಿತಮಿತವಾಗಿ ಬಳಸಬೇಕು. ಕೆಲಸದಲ್ಲಿ ಸಾಂಸಾರಿಕ ಜೀವನದಲ್ಲಿ ಒತ್ತಡಗಳನ್ನು ಕಡಿಮೆ ಮಾಡಿಕೊಳ್ಳಬೇಕು. ಗುಣಮಟ್ಟದ ಆಹಾರವನ್ನು ಸೇವಿಸಬೇಕು. ಜಂಕ್ ಫುಡ್‌ಗಳನ್ನು ಸೇವಿಸಬಾರದು. ವರ್ಷಕೊಮ್ಮೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಎಂದ ಅವರು ದೇಶದಲ್ಲಿ ಕೊರೋನಾ ಬರುವ ಲಕ್ಷಣಗಳಿದ್ದು ಸರ್ಕಾರ ಅಗತ್ಯ ಮುಂಜಾಗ್ರತೆ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ, ಜನರು ಭಯ ಪಡುವ ಅಗತ್ಯವಿಲ, ಎಚ್ಚರಿಕೆಯಿಂದ ಇರಬೇಕು. ವಯಸ್ಸಾದವರು ಕಡ್ಡಾಯವಾಗಿ ಮಾಸ್ಕ್ ಧರಿಸಬೇಕು ಎಂದರು. ಈ ಸಂದರ್ಭದಲ್ಲಿ ಡಾ ಹೇಮಾ.ಎಸ್, ಡಾ. ವಿಶ್ವನಾಥ್, ಡಾ. ದೇವರಾಜ್, ನರ್ಸಿಂಗ್ ಅಧೀಕ್ಷಕ ಹರೀಶ್ ಕುಮಾರ್ ಯೋಗಾನಂದ್, ರಮೇಶ್ ಹಾಜರಿದ್ದರು.

# ಸೂರ್ಯ ಚಂದ್ರ ಇರುವವರೆಗೂ ಶಿಲ್ಪಿ ಜಕಣಚಾರಿ ಅಮರ; ಶಾಸಕ

**ಮೈಸೂರು:** ನಾಡಿನ ಹೆಮ್ಮೆಯ ವಾಸ್ತುಶಿಲ್ಪಿ ಜಕಣಚಾರಿಯವರು ನಮ್ಮ ಪೀಳಿಗೆಗೆ ಮಾತ್ರವಲ್ಲದೇ, ಸೂರ್ಯ ಚಂದ್ರ ಇರುವವರೆಗೂ ಅಮರ ಎಂದು ಶಾಸಕರಾದ ಕೆ. ಹರೀಶ್ ಗೌಡ ತಿಳಿಸಿದರು.



ನಗರದ ಕಿರುರಂಗಮಂದಿರದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಜಯಂತೋತ್ಸವ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ, ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಂಬೇಡ್ಕರ್, ಕುವೆಂಪು, ಬಸವಣ್ಣ ಅವರ ಸಾಲಿಗೆ ಸೇರುವ ಜಕಣಚಾರಿಯವರು ವಾಸ್ತುಶಿಲ್ಪದಲ್ಲಿ ನಾಡಿಗೆ ತಮ್ಮದೇ ಆದ ಕೊಡುಗೆಯನ್ನು ನೀಡಿದ್ದಾರೆ. ಇಂತಹ ಮಹಾನ್ ವ್ಯಕ್ತಿಯ ಪ್ರತಿಮೆಯನ್ನು ನಿರ್ಮಿಸುವುದರ ಮೂಲಕ ಹಾಗೂ ರಸ್ತೆಗೆ ಅವರ ಹೆಸರಿಡುವ ಮೂಲಕ ಅವರ ಬಗ್ಗೆ ಮುಂದಿನ ಪೀಳಿಗೆಗಳು ತಿಳಿದುಕೊಳ್ಳುವಂತೆ ಮಾಡುವುದು ನಮ್ಮ ಕರ್ತವ್ಯ. ಇಂತಹ ಒಳ್ಳೆಯ ಕಾರ್ಯಕ್ಕೆ ಸಮುದಾಯದವರು ಒಗ್ಗಟಾಗಿ ನಮ್ಮೊಟ್ಟಿಗೆ ಕೈ ಜೋಡಿಸಬೇಕು. ಮೈಸೂರಿನಾದ್ಯಂತ 75 ರಿಂದ 80 ಸಾವಿರ ವಿಶ್ವಕರ್ಮ ಸಮುದಾಯಕ್ಕೆ ಸೇರಿದ ಜನರಿದ್ದಾರೆ. ನಿಮ್ಮಲ್ಲಿ ಒಗ್ಗಟ್ಟಿನ ಕೊರತೆಯಿದೆ. ಇದರಿಂದಲೇ ಸಮುದಾಯಕ್ಕೆ ಬೇಕಾದ ಸವಲತ್ತುಗಳನ್ನು ಪಡೆದುಕೊಳ್ಳುವಲ್ಲಿ ವಿಫಲರಾಗುತ್ತೀರಿ. ಮುಖ್ಯಮಂತ್ರಿಗಳು ಸಮಾಜದ ಎಲ್ಲಾ ತಳವರ್ಗದವರಿಗೆ ಸೌಲಭ್ಯಗಳನ್ನು ರೂಪಿಸುತ್ತಾರೆ. ಆದರೆ ನಿಮ್ಮ ಸಮುದಾಯಕ್ಕೆ ಸಿಗಬೇಕಾದ ಎಲ್ಲಾ ಸೌಲಭ್ಯಗಳನ್ನು ಪಡೆಯಬೇಕಾದರೆ ಒಗ್ಗಟ್ಟಾಗಿ ಇರುವುದು ಬಹಳ ಮುಖ್ಯ ಎಂದು ಕಿವಿಮಾತು ಹೇಳಿದರು.

ವಿಧಾನ ಪರಿಷತ್ತಿನ ಸದಸ್ಯರಾದ ಮಂಜೇಗೌಡ ಅವರು ಮಾತನಾಡಿ ಅಮರ ಶಿಲ್ಪಿ ಜಕಣಚಾರಿ ಅವರು ಇಲ್ಲದಿದ್ದರೆ ಸಮಾಜದಲ್ಲಿ ನಿಮ್ಮ ಸಮುದಾಯದ ಗುರುತಿಸುವಿಕೆ ಸಾಧ್ಯವಾಗುತ್ತಿರಲಿಲ್ಲ. ಜಕಣಚಾರಿಯವರ ಸಾಧನೆ, ಪ್ರತಿಭೆ ಶಿಲ್ಪವೈಶಿಷ್ಟ?ಯ ತಿಳಿಯಲು ಈ ಕಾರ್ಯಕ್ರಮ ಬಹಳ ಉಪಯೋಗಕಾರಿಯಾಗಿದೆ. ಇದು ಮುಂದಿನ ಪೀಳಿಗೆಗೂ ತಿಳಿಯಬೇಕು. ಎಲ್ಲರೂ ತಮಗೆ ಇಚ್ಛಿಸಿದ ಕೆಲಸವನ್ನು ಬಹಳ ಶ್ರದ್ಧೆಯಿಂದ ಮಾಡಬೇಕು. ಸಾಮಾಜಿಕವಾಗಿ, ಆರ್ಥಿಕವಾಗಿ ನಾವು ಬೆಳೆಯಬೇಕೆಂದರೆ ಸರ್ಕಾರದ ಜೊತೆಗೆ ಎಲ್ಲಾ ಸಮಾಜದ ಜನರು ಒಗ್ಗಟ್ಟಿನಲ್ಲಿರಬೇಕು ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿಗಳಾದ ಆರ್ ಲೋಕನಾಥ್ ಅವರು ಮಾತನಾಡಿ, ಸಾಹಿತ್ಯಕ್ಕೆ ಕುವೆಂಪುವಾದರೆ, ಶಿಲ್ಪಕಲೆಗೆ ಜಕಣಾಚಾರಿ ಮೆರುಗು. ವಿದ್ಯಾರ್ಥಿಗಳು ಹಾಗೂ ಪೋಷಕರು ವಾಸ್ತುಶಿಲ್ಪದ ಅಧ್ಯಯನ ಮಾಡಲು ಮನಸ್ಸು ಮಾಡಬೇಕು. ಈ ಕಲೆಯನ್ನು ಎತ್ತರಕ್ಕೆ ಬೆಳೆಸಿ, ಮುಂದಿನ ತಲೆಮಾರುಗಳು ತಿಳಿದುಕೊಳ್ಳುವಂತೆ ಮಾಡಬೇಕು. ಶಿಲ್ಪಕಲೆ ಎಂಬುದು ಎಲ್ಲರಿಗೂ ಬರುವಂತದಲ್ಲ. ಇದಕ್ಕೆ ಅದರದ್ದೇ ಆದಂತಹ ತಪಸ್ಸು, ಶ್ರದ್ದೆ ಇರಬೇಕು ಆಗ ಮಾತ್ರವೇ ಶಿಲ್ಪಕಲೆ ಒಲಿಯುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದ ಮುಖ್ಯ ಭಾಷಣಕಾರರಾಗಿ ಆಗಮಿಸಿದ್ದ ಟಿ.ಕೆ ಕೆಂಪೇಗೌಡ ಅವರು ಮಾತನಾಡಿ, ನಾಡಿನಲ್ಲಿ ಶತಮಾನದಿಂದಲೂ ಹಲವಾರು ಸಂಗೀತಗಾರರು, ಸಂತರು ಆಚಾರ್ಯರ ಕೊಡುಗೆಗಳು ದಾಖಲಾಗಿವೆ. ಜಗತ್ತಿಗೆ ನಮ್ಮ ತಲೆಮಾರುಗಳು ನಮ್ಮ ಸಂಸ್ಕೃತಿ ಹಾಗೂ ಪರಂಪರೆಯ ಬಗ್ಗೆ ತಿಳಿಸಿಕೊಡಬೇಕು. ಇಲ್ಲವಾದರೆ ನಾವು ನಮ್ಮ ಜ್ಞಾನದ ಅಸ್ತಿತ್ವ ಕಳೆದುಕೊಳ್ಳುತ್ತೇವೆ. ಇಂದಿನ ಯುವಕರಿಗೆ ಸೃಜನಾತ್ಮಕ ಸಂವಾದದ ಅಗತ್ಯವಿದೆ. ಸತ್ಯಂ ಶಿವಂ ಸುಂದರಂ ಎಂಬ ಜಪ ಮಾಡಿಕೊಂಡು ಒಂದು ಸಂಸ್ಕೃತಿಯನ್ನೇ ಸೃಷ್ಟಿಸಿ ಎಲ್ಲಾ ಕವಿ, ಕಲೆಗಾರರು ಹಾಗೂ ಶಿಲ್ಪಿಗಳಿಗೆ ಜಕಣಚಾರಿಯವರು ಸ್ಪೂರ್ತಿಯಾಗಿದ್ದಾರೆ ಎಂದರು.

ಶ್ರೀ ಗಣೇಶ್ವರ ಸ್ವಾಮೀಜಿ, ಮೈಸೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರಾದ ಜಿ. ಎಸ್ ಸೋಮಶೇಖರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮೈಸೂರು ವಿಭಾಗದ ಜಂಟಿ ನಿರ್ದೇಶಕರಾದ ವಿ ಎನ್ ಮಲ್ಲಿಕಾರ್ಜುನಸ್ವಾಮಿ, ಸಹಾಯಕ ನಿರ್ದೇಶಕರಾದ ಡಾ. ಎಂ ಡಿ ಸುದರ್ಶನ್ ಸೇರಿದಂತೆ ಅಮರಶಿಲ್ಪಿ ಜಕಣಾಚಾರಿ ಜಯಂತೋತ್ಸವ ಸಮಿತಿ ಪದಾಧಿಕಾರಿಗಳು ಭಾಗವಹಿಸಿದ್ದರು.

# ವಿದ್ಯಾರ್ಥಿನಿಯರಿಗೆ ಮನರಂಜನಾ ಆಟಗಳು

**ಹುಳಿಯಾರು:** ಹುಳಿಯಾರಿನ ಬಾಲಕೀಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿಯರಿಗೆ ಹೊಸ ವರ್ಷದ ಅಂಗವಾಗಿ ನೇಚರ್ ಬ್ಲೂಮ್ ಕಂಪನಿಯಿಂದ ಏಕ್ ಮಿನಿಟ್ ಮನರಂಜನಾ ಆಟಗಳನ್ನು ಆಡಿಸಿ ಬಹುಮಾನ ವಿತರಿಸಲಾಯಿತು. ಚಮುಚದಲ್ಲಿ ಅಕ್ಕಿ ಸಂಗ್ರಹ ಆಟದಲ್ಲಿ ಸಿ.ಎಲ್.ಚೈತ್ರಾ, ಬಿಂದುಶ್ರೀ, ಕವನ, ಸ್ಟ್ರಾನಲ್ಲಿ ವಾಟರ್ ಕಲೆಕ್ಟ್ ಗೇಮ್‌ನಲ್ಲಿ ಅನಿತಾ, ಆಶಾ, ಕುಸುಮಾಬಾಯಿ, ಬ್ಲೂಮ್ ಹ್ಯಾಂಡ್ ವಾಷ್ ಲಿಕ್ವಿಡ್ ಹಿಡಿಯುವ ಆಟದಲ್ಲಿ ಭವ್ಯ, ಭವಾನಿ, ದೀಪಿಕಾ, ಕಪ್‌ನಲ್ಲಿ ಗೋಲಿ ಹಾಕುವ ಸ್ಪರ್ಧೆಯಲ್ಲಿ ದಿವ್ಯ, ತಾರಾದೇವಿ, ನಳಿನ, ಭಾವನ ಬಹುಮಾನ ಪಡೆದುಕೊಂಡರು. ವಿಜೇತರಿಗೆ ಪ್ರಾಚಾರ್ಯರಾದ ಸಿ.ಬಿ.ಪರಮೇಶ್ವರ್, ಉಪನ್ಯಾಸಕರಾದ ಎಚ್.ಎಸ್.ನಾರಾಯಣ್, ಸಿ.ಜಿ.ಶೈಲಜಾ, ಸಿ.ಶಿವರುದ್ರಯ್ಯ, ಎಚ್.ಎನ್.ಮಂಜುನಾಥ್, ವಿ.ಲೋಕೇಶ್, ಬಿ.ಶಿಲ್ಪಾ, ಮಂಗಳಗೌರಮ್ಮ ಅವರುಗಳು ವಿಜೇತರಿಗೆ ಬಹುಮಾನ ವಿತರಿಸಿದರು.




**ಹುಳಿಯಾರಿನ ಬಾಲಕೀಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿಯರಿಗೆ ಹೊಸ ವರ್ಷದ ಅಂಗವಾಗಿ ನೇಚರ್ ಬ್ಲೂಮ್ ಕಂಪನಿಯಿಂದ ಏಕ್ ಮಿನಿಟ್ ಮನರಂಜನಾ ಆಟಗಳನ್ನು ಆಡಿಸಿ ಬಹುಮಾನ ವಿತರಿಸಲಾಯಿತು.**

# ಕವನಗಳು ''ಪದ್ಯ ಸಂತೆ'' ಕವನಸಂಕಲನಕ್ಕೆ ಆಯ್ಕೆ

**ಹುಳಿಯಾರು:** ಹುಳಿಯಾರು-ಕೆಂಕೆರೆ ಬಿ.ಎಂ.ಎಸ್. ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಮೂವರು ಯುವಕವಿಗಳ ಸ್ವರಚಿತ ಕವನಗಳು ಉತ್ತಮ ಕವಿತೆಗಳೆಂದು ''ಪದ್ಯ ಸಂತೆ'' ಕವನಸಂಕಲನಕ್ಕೆ ಆಯ್ಕೆಯಾಗಿವೆ. ಈ ಸ್ಪರ್ಧೆಗೆ ನಾಡಿನಾದ್ಯಂತ ಸಾವಿರಕ್ಕೂ ಹೆಚ್ಚು ಕವನಗಳು ಬಂದಿದ್ದು, ಅದರಲ್ಲಿ ಉತ್ತಮವಾದ 58 ಕವಿತೆಗಳನ್ನು ಪ್ರಕಟಣೆಗಾಗಿ ಆಯ್ಕೆ ಮಾಡಲಾಗಿದೆ ಅದರಲ್ಲಿ ಹುಳಿಯಾರು ಪದವಿ ಕಾಲೇಜಿನ ಮೂವರು ವಿದ್ಯಾರ್ಥಿಗಳ ಕವನಗಳೂ ಸೇರಿವೆ ಎಂದು ಪುಸ್ತಕದ ಸಂಪಾದಕ ಚನ್ನಬಸವ ಎಂ. ಕಿಟ್ಟದಾಳ್ ಅವರು ತಿಳಿಸಿರುತ್ತಾರೆ.




ಕಳೆದ ಶೈಕ್ಷಣಿಕ ವರ್ಷದ ಜುಲೈ ಮಾಸದಲ್ಲಿ ತುಮಕೂರಿನ 'ಚೆನ್ನುಡಿ ಪ್ರಕಾಶನ'ವು ಯುವ ಕವಿಗಳ ಉತ್ತಮ ಕವಿತೆಗಳಿಗೆ ಪ್ರಕಟಣೆಯ ಅವಕಾಶವನ್ನು ಒದಗಿಸುವ ಸಲುವಾಗಿ ಕವನಗಳನ್ನು ಆಹ್ವಾನಿಸಿತ್ತು. ಕಾಲೇಜಿನ ಸಾಂಸ್ಕೃತಿಕ ಸಮಿತಿಯ ಸಂಚಾಲಕರಾದ ಡಾ. ಮೋಹನ್ ಕುಮಾರ್ ಮಿರ್ಲೆ ಅವರ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳು ತಮ್ಮ ಸ್ವರಚಿತ ಕವನಗಳನ್ನು ಸ್ಪರ್ಧೆಗೆ ಕಳುಹಿಸಲಾಗಿತ್ತು.

ಕಾಲೇಜಿನ ಕಳೆದ ಸಾಲಿನ ದ್ವಿತೀಯ ಬಿ.ಎ. ವಿದ್ಯಾರ್ಥಿನಿ ರಂಜಿತ ಆರ್. ಅವರ 'ಎಲ್ಲರ ಐಕ್ಯತೆಯ ಮಂತ್ರ', 'ನಮ್ಮ ನಾಡು' ಮತ್ತು 'ಗಾಂಧಿ ಮಹಾ ಮಹಿಮ' ಎಂಬ ಒಟ್ಟು ಮೂರು ಕವಿತೆಗಳು, ಅಂತಿಮ ಬಿ.ಎ. ವಿದ್ಯಾರ್ಥಿ ಶ್ರೀರಂಗ ಕೆ.ಎಂ. ಅವರ 'ಕಲಿ ಪುರುಷ ಯಾರು?' ಎಂಬ ಒಂದು ಕವಿತೆ ಮತ್ತು ದ್ವಿತೀಯ ಬಿ.ಕಾಂ. ವಿದ್ಯಾರ್ಥಿನಿ ವೈಷ್ಣವಿ ವಿ.ಎನ್. ಅವರ 'ನನ್ನ ಮುದ್ದು ಗಿಳಿ' ಎಂಬ ಒಂದು ಕವಿತೆ, ಒಟ್ಟಾರೆ ಕಾಲೇಜಿನ ಐದು ಕವಿತೆಗಳು 'ಚೆನ್ನುಡಿ ಪ್ರಕಾಶನ' ಹೊರತಂದಿರುವ ''ಪದ್ಯ ಸಂತೆ'' ಎಂಬ ಕವನ ಸಂಕಲನದಲ್ಲಿ ಸ್ಥಾನ ಪಡೆದಿವೆ.



ಆಯ್ಕೆಯಾದ ಕವಿಗಳಿಗೆ ಸದರಿ ಕವನ ಸಂಕಲನದ ತಲಾ ಐದೈದು ಪ್ರತಿಗಳನ್ನು ನೀಡಿರುತ್ತಾರೆ. ಕಾಲೇಜಿನ ಯುವಕವಿಗಳ ಈ ಸಾಧನೆಯನ್ನು ಕಾಲೇಜಿನ ಪ್ರಾಂಶುಪಾಲ ಎಸ್.ಸಿ.ವೀರಣ್ಣ, ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಪ್ರಶಂಸಿಸಿ ಅಭಿನಂದಿಸಿರುತ್ತಾರೆ.

# ಶಿಲ್ಪ ಕಲೆಗಳ ಮೂಲಕ ಜಕಣಾಚಾರಿ ಜೀವಂತ

**ರಾಮನಗರ:** ಅಮರ ಶಿಲ್ಪಿ ಜಕಣಾಚಾರಿ ಅವರ ಕಲೆ ಮತ್ತು ಸಂಸ್ಕೃತಿಗೆ ತಮ್ಮದೆಯಾದ ವಿಶೇಷ ಕೊಡುಗೆಗಳನ್ನು ನಾವು ನೆನೆದುಕೊಳ್ಳಬೇಕು. ಅವರು ತಿಳಿಸಿರುವ ಕಲೆಯನ್ನು ಜನರು ನಂಬಿಕೆ ಮತ್ತು ಶ್ರದ್ದೆಯಿಂದ ವೃತ್ತಿಯಲ್ಲಿ ಬೆಳೆಸಿದಾಗ ದೇಶ ಮತ್ತು ರಾಜ್ಯಕ್ಕೆ ತಮ್ಮದೆಯಾದ ಕೊಡುಗೆ ನೀಡಬಹುದು ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಮೂರ್ತಿ ಅವರು ತಿಳಿಸಿದರು.



ಅವರು ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಯಲ್ಲಿ ದೀಪ ಬೆಳಗಿಸಿ ಅಮರ ಶಿಲ್ಪಿ ಜಕಣಾಚಾರಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ನಾಡಿನ ಐತಿಹಾಸಿಕ ವಾಸ್ತುಶಿಲ್ಪ, ಪರಂಪರೆಗೆ ಶಿಲ್ಪಗಳಿಗೆ ಅಮರಶಿಲ್ಪಿ ಜಕಣಾಚಾರಿ ಅವರ ಕೊಡುಗೆ ಅಪಾರವಾದುದು ಎಂದು ತಿಳಿಸಿದರು.

ಚನ್ನಪಟ್ಟಣ ತಾಲ್ಲೂಕು ತಹಶೀಲ್ದಾರ್ ಮಹೇಂದ್ರ ಎ.ಎಚ್ ಅವರು ಮಾತನಾಡಿ, ಅಮರಶಿಲ್ಪಿ ಜಕಣಾಚಾರಿ ಅವರ ಕೆತ್ತನೆಗಳನ್ನು ದಕ್ಷಿಣ ಭಾರತದ ಹಲವು ದೇವಾಲಯಗಳಲ್ಲಿ ನಾವು ಕಾಣಬಹುದು. ವಿಶ್ವಕರ್ಮರು ಸಮಾಜದಲ್ಲಿ ಕಬ್ಬಿಣ, ಚಿನ್ನ ಮತ್ತು ಬೆಳ್ಳಿ, ಶಿಲ್ಪಕಲೆ, ಮರಗೆಲಸ ಹೀಗೆ ಐದು ರೀತಿಯಲ್ಲಿ ಕುಲಕಸುಬುಗಳನ್ನು ನಿರ್ವಹಿಸುತ್ತಿದ್ದಾರೆ. ಈ ಕಲೆಗಳನ್ನು ಮುಂದಿನ ತಲೆಮಾರುಗಳಿಗೂ ಕೂಡ ಕಲಿಸಿ ಬೆಳಸುವಂತೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರಾದ ರಮೇಶ್ ಬಾಬು, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು, ವಿಶ್ವ ಕರ್ಮ ಸಮುದಾಯದ ರಾಜ್ಯಾಧ್ಯಕ್ಷರಾದ ಬಿ. ಉಮೇಶ್, ತಗಡಚಾರಿ, ಶ್ರೀನಿವಾಸ ಮೂರ್ತಿ ಸೇರಿದಂತೆ ಸಮುದಾಯದ ಮುಖಂಡರು ಹಾಗೂ ಇತರರು ಉಪಸ್ಥಿತರಿದ್ದರು.

# ಮಂಡ್ಯದಲ್ಲಿ ಇಂದು ಸಿರಿಧಾನ್ಯ ಹಬ್ಬ

**ಮಂಡ್ಯ:** ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾಡಳಿತ ಸಹಭಾಗಿತ್ವದಲ್ಲಿ ಅಂತರಾಷ್ಟ್ರೀಯ ಮಟ್ಟದ ಸಿರಿಧಾನ್ಯ ಸಾವಯುವ ಮೇಳ 2024ರ ಅಂಗವಾಗಿ ಜಿಲ್ಲಾ ಮಟ್ಟದ ಸಾವಯುವ ಸಂತೆ, ಸಿರಿಧಾನ್ಯ ಪಾಕ ಸ್ಪರ್ಧೆ, ರಾಗಿಮುದ್ದೆ ಊಟದ ಸ್ಪರ್ಧೆ ಮತ್ತು ಆಹಾರ ಮೇಳ ಒಳಗೊಂಡಂತೆ ಸಿರಿಧಾನ್ಯ ಹಬ್ಬ ವನ್ನು ಜನವರಿ 2 ಮಂಗಳವಾರ ಮಧ್ಯಾಹ್ನ 2:30 ಗಂಟೆಗೆ ಡಾ. ಬಿಆರ್ ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್ ಚೆಲುವರಾಯಸ್ವಾಮಿ ಅವರು ಉದ್ಘಾಟಿಸಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಂಡ್ಯ ವಿಧಾನಸಭಾ ಕ್ಷೇತ್ರ ಶಾಸಕ ಪಿ ರವಿಕುಮಾರ್ ಅವರು ವಹಿಸಲಿದ್ದಾರೆ.

ಲೋಕಸಭಾ ಸಂಸದರು ಸುಮಲತಾ ಅಂಬರೀಶ್, ವಿಧಾನ ಪರಿಷತ್ ಶಾಸಕರಾದ ಮರಿ ತಿಬ್ಬೇಗೌಡ, ಮಧು ಜಿ ಮಾದೇಗೌಡ, ದಿನೇಶ್ ಗೂಳಿಗೌಡ, ವಿಧಾನ ಸಭಾ ಶಾಸಕ ರಾದ ಪಿ ಎಂ ನರೇಂದ್ರಸ್ವಾಮಿ, ರಮೇಶ್ ಬಂಡಿಸಿದ್ದೇಗೌಡ, ದರ್ಶನ್ ಪುಟ್ಟಣ್ಣಯ್ಯ, ಎಚ್ ಟಿ ಮಂಜು, ಕೆ ಎಂ ಉದಯ, ಜಿಲ್ಲಾ ಕೃಷಿ ಸಮಾಜ ಅಧ್ಯಕ್ಷರು ಈಶ್ವರ್ ಪ್ರಸಾದ್ ಕೆ ಬಿ ಅವರನ್ನು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಸಹಜ ಸಮೃದ್ಧ ನಿರ್ದೇಶಕರಾದ ಜಿ ಕೃಷ್ಣ ಪ್ರಸಾದ್ ಸಿರಿಧಾನ್ಯ ಮೌಲ್ಯವರ್ಧನ ಮತ್ತು ಮಾರುಕಟ್ಟೆ ಅವಕಾಶಗಳು, ಆಯುಷ್ ಇಲಾಖೆಯ ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ. ಸೀತಾ ಲಕ್ಷ್ಮಿ ಉತ್ತಮ ಆರೋಗ್ಯಕ್ಕಾಗಿ ಸಿರಿಧಾನ್ಯ ನಿಮ್ಮ ತಾಂತ್ರಿಕ ಅಧಿವೇಶನವನ್ನು ನಡೆಸಲಿದ್ದಾರೆ.

ಕಾರ್ಯಕ್ರಮದಲ್ಲಿ ಪ್ರಮುಖ ಆಕರ್ಷಣೆಗಳಾಗಿ ಸೆಂಟ್ ಫಿಲೋಮಿನಾ ಕಾಲೇಜಿನ ನಿವೃತ್ತ ಪ್ರಾಂಶುಪಾಲರಾದ ಪ್ರೊ.ಎಂ ಕೃಷ್ಣೇಗೌಡರವರು ವಿಚಾರ ಮಂಡನೆ ಮಾಡಲಿದ್ದಾರೆ.

ಕನ್ನಡದ ಖ್ಯಾತ ಗೀತ ಸಂಯೋಜಕರು ಹಾಗೂ ಗಾಯಕರಾದ ವಾಸುಕಿ ವೈಭವ್ ರವರು ಹಾಡಿರುವ ಸಿರಿಧಾನ್ಯ ಗೀತೆ ಬಿಡುಗಡೆ ಮತ್ತು ವಾಸುಕಿ ಗಾಯನ ರಸ ಸಂಜೆ, ಸಿರಿಧಾನ್ಯಪಾಕ ಸ್ಪರ್ಧೆ, ರಾಗಿಮುದ್ದೆ ಊಟದ ಸ್ಪರ್ಧೆ, ಸಿರಿಧಾನ್ಯ ಆಹಾರ ಮೇಳ-ಹಳ್ಳಿ ಸೊಗಡಿನ ಆಹಾರ ಖಾದ್ಯ, ಸಾವಯವ ಸಿರಿಧಾನ್ಯ ಸಂತೆ, ಬೆಲ್ಲದ ಪರಿಷೆ ಕಾರ್ಯಕ್ರಮದಲ್ಲಿ ಪ್ರಮುಖ ಆಕರ್ಷಣೆ ಗಳಾಗಿವೆ.

# ಜಕಣಾಚಾರಿ ಸಾಧನೆ ಅಪಾರ

**ಮಂಡ್ಯ:** ನಮ್ಮ ನಾಡಿನ ಸಂಸ್ಕತಿ ಜೀವಂತವಾಗಿದೆ ಎಂದರೆ ಅದಕ್ಕೆ ಕಾರಣ ಕಲ್ಲು-ಶಿಲೆಯ ಮೇಲೆ ಕೆತ್ತನೆ ಮಾಡಿ ನಾಡಿನ ಸಂಸ್ಕೃತಿ ಮತ್ತು ಇತಿಹಾಸವನ್ನು ಬಿಂಬಿಸಿರುವುದು. ಕಲ್ಲು /ಶಿಲೆಗಳ ಮೇಲೆ ಕೆತ್ತನೆಯ ಮೂಲಕ ಸಂಸ್ಕತಿ ಮತ್ತು ಇತಿಹಾಸವನ್ನ ಜೀವಂತವಾಗಿಟ್ಟಿರುವ ಅಮರ ಶಿಲ್ಪಿ ಜಕ್ಕಣಾಚಾರಿಯವರ ಸಾಧನೆ, ಕೊಡುಗೆ ಅಪಾರವಾದದ್ದು ಎಂದು ಜಿಲ್ಲಾಧಿಕಾರಿ ಡಾ. ಕುಮಾರರವರು ತಿಳಿಸಿದರು.

ಮಂಡ್ಯ ಜಿಲ್ಲಾಡಳಿತ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ, ಮಂಡ್ಯ ಹಾಗೂ ವಿಶ್ವಕರ್ಮ ಸಮಾಜ, ಮಂಡ್ಯ ಇವರ ಸಹಯೋಗದೊಂದಿಗೆ ಕಲಾ ಮಂದಿರದಲ್ಲಿ ಆಯೋಜಿಸಲಾಗಿದ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಯನ್ನು ಅಂಗವಾಗಿ ಅವರು ಉದ್ಘಾಟಿಸಿ ಮಾತನಾಡಿದರು.



ಸಾಧನೆಗೆ ಸಾವಿಲ್ಲ ಜಕಣಾಚಾರಿ ಕೊಟ್ಟಿರುವಂತವ ಕೊಡುಗೆ, ಸಾಧನೆಗೆ ಸಾವಿಲ್ಲ ಅದು ಸೂರ್ಯ - ಚಂದ್ರ ಇರುವವರೆಗೂ ಜೀವಂತವಾಗಿರುತ್ತದೆ ಎಂದರು.

ಬೇಲೂರು ಮತ್ತು ಹಳೆಬೀಡು ವಿಶ್ವಪರಂಪರೆ ಸಾಧನೆಯ ಪಟ್ಟಿಯಲ್ಲಿದೆ ಇದಕ್ಕೆ ಕಾರಣ ಶಿಲೆಗಳ ಮೇಲಿರುವ ಇತಿಹಾಸ. ಅವುಗಳನ್ನು ಒಮ್ಮೆಯಾದರು ನೋಡಿ ಎಂದು ಕರೆ ಕೊಟ್ಟರು.

ಜೀವವಿಲ್ಲದ ಕಲ್ಲಿಗೆ ಜೀವವನ್ನು ತುಂಬಿ ಕೊಡುವ ಹಾಗೂ ಸಮಾಜಕ್ಕೆ ಕೊಡುಗೆ ನೀಡಿದ ಜಕಣಾಚಾರಿಯಂತಹ ಮಹಾನ್ ಕಲೆಗಾರರನ್ನು ಅಂತರಗದಲ್ಲಿ ಪೂಜಿಸಿ, ಗೌರವಿಸಬೇಕು ಎಂದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಡಾ ಎಚ್. ಎಲ್ ನಾಗರಾಜು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಎನ್ ಉದಯಕುಮಾರ್, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಹಾಗೂ ಶಿವಲಿಂಗಯ್ಯ, ವಿಶ್ವಕರ್ಮ ಸಮಾಜದ ವೇದಬ್ರಹ್ಮತಿಲಕೇಶ್ಮೂರ್ತಿ, ವಿಶ್ವಕರ್ಮ ಸಮಾಜದ ಮುಖಂಡರುಗಳಾದ ವೈ.ಡಿ ಶ್ರೀನಿವಾಸ ಮೂರ್ತಿ, ಹೆಚ್.ಪಿ ಸತೀಶ್, ನಾಗರಾಜ ಆಚಾರ್, ಎಲ್. ಆನಂದ ಸುದರ್ಶನ್, ಎಂ.ಬಿ ರಮೇಶ್, ದೇವರಾಜು ಇನ್ನಿತರಿದ್ದರು. ಇದೇ ಸಂದರ್ಭದಲ್ಲಿ ವಿಶ್ವಕರ್ಮ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದವರನ್ನು ಅಭಿನಂದಿಸಲಾಯಿತು.

## ಯುವಜನೋತ್ಸವ ಕಾರ್ಯಕ್ರಮದಲ್ಲಿ ಜಿಲ್ಲೆಯ ಸ್ಪರ್ಧಾಳುಗಳು ಭಾಗವಹಿಸಿ

ರಾಮನಗರ: 2023-24ನೇ ಸಾಲಿನ ರಾಜ್ಯ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಬಳ್ಳಾರಿ ಜಿಲ್ಲೆಯಲ್ಲಿ ಸಂಘಟಿಸಿದ್ದು, 2023ರ ನವೆಂಬರ್ 21ರಂದು ರಾಮನಗರ ಜಿಲ್ಲೆಯ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಥಮ ಸ್ಥಾನ ಪಡೆದ ತಂಡ ಹಾಗೂ ವೈಯಕ್ತಿಕ ಸ್ಪರ್ಧೆಗಳಲ್ಲಿ ಭಾಗವಹಿಸಿದ ಸ್ಪರ್ಧಾಳುಗಳು ಬಳ್ಳಾರಿ ಜಿಲ್ಲೆಯಲ್ಲಿ ನಡೆಯುವ ರಾಜ್ಯಮಟ್ಟದ ಯುವ ಜನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲು ಅರ್ಹರಿದ್ದು, ಈ ಕಾರ್ಯಕ್ರಮದಲ್ಲಿ ಅರ್ಹ ಸ್ಪರ್ಧಾಳುಗಳು ಭಾಗವಹಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರನ್ನು ಖುದ್ದಾಗಿ ಅಥವಾ ಕಚೇರಿ ಅಧೀಕ್ಷಕರು, ದೂ. ಸಂಖ್ಯೆ: 9448153308 ಇವರನ್ನು ಸಂಪರ್ಕಿಸಬಹುದಾಗಿದೆ.

## ಐದು ದಿನಗಳ ಕಾರ್ಯಾಗಾರ

ಬೆಂಗಳೂರು: ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು 'Statistical Data Analysis for Research Work" ಎಂಬ ವಿಷಯದ ಕುರಿತು ಐದು ದಿನಗಳ ಕಾರ್ಯಾಗಾರವನ್ನು ಪ್ರೊ.ಯು.ಆರ್.ರಾವ್, ವಿಜ್ಞಾನ ಭವನ, ಮೇ. ಸಂದೀಪ್ ಉನ್ನಿಕೃಷ್ಣನ್ ರಸ್ತೆ, ತೋಟಗಾರಿಕಾ ವಿಜ್ಞಾನಗಳ ಕಾಲೇಜು ಆವರಣ, ಜಿಕೆವಿಕೆ, ದೊಡ್ಡಬೆಟ್ಟಹಳ್ಳಿ ಲೇಔಟ್, ವಿದ್ಯಾರಣ್ಯಪುರ ಅಂಚೆ, ಬೆಂಗಳೂರು ಇಲ್ಲಿ ಆಯೋಜಿಸಿದೆ. ಕಾರ್ಯಾಗಾರದಲ್ಲಿ ಬೆಂಗಳೂರಿನ ಪ್ರತಿಷ್ಠಿತ ಸಂಶೋಧನಾ ಸಂಸ್ಥೆಗಳ ವಿಜ್ಞಾನಿಗಳು ಉಪನ್ಯಾಸಗಳನ್ನು ನೀಡಲಿದ್ದಾರೆ. ಈ ಕಾರ್ಯಾಗಾರದಲ್ಲಿ ಪ್ರತಿನಿಧಿಗಳಾಗಿ ರಾಜ್ಯಾದ್ಯಂತ ಸ್ನಾತಕೋತ್ತರ ವಿಜ್ಞಾನ ಪದವಿ ಮತ್ತು ಇಂಜಿನಿಯರಿಂಗ್ ಕಾಲೇಜು ಅಧ್ಯಾಪಕರು ಹಾಗೂ ಯುವ ಸಂಶೋಧನಾ ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದೆ. ಈ ಕಾರ್ಯಾಗಾರಕ್ಕೆ ನೋಂದಾಯಿಸಿಕೊಳ್ಳಲು ಅಕಾಡೆಮಿಯ ಜಾಲತಾಣ http://www.kstacademy.in ದಿಂದ ಪಡೆಯಬಹುದಾಗಿದೆ. ಮೊದಲು ನೋಂದಾಯಿಸಿಕೊಂಡವರಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು. ಕಾರ್ಯಾಗಾರದಲ್ಲಿ ಪ್ರತಿನಿಧಿಗಳಾಗಿ ನೋಂದಾಯಿಸಿಕೊಳ್ಳಲು 2024ರ ಜನವರಿ 16 ಕೊನೆಯ ದಿನವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ವೈಜ್ಞಾನಿಕಾಧಿಕಾರಿ ವಿ.ಕೆ. ಶ್ರೀನಿವಾಸು ಮೊ.ಸಂ. 9620767819 ಕ್ಕೆ ಸಂಪರ್ಕಿಬಹುದಾಗಿದೆ ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಎ.ಎಂ.ರಮೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಕ್ತದಾನ ಶಿಬಿರ

**ರಾಮನಗರ:** ರಾಮನಗರ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ನಾರಾಯಣ ಆಸ್ಪತ್ರೆಯಲ್ಲಿ ವಿಶ್ವಮಾನವ ರಾಷ್ಟ್ರಕವಿ ಕುವೆಂಪುರವರ 119ನೇ ಜಯಂತೋತ್ಸವದ ಪ್ರಯುಕ್ತ ರಕ್ತ ದಾನ ಶಿಬಿರವನ್ನು ಡಿ. 28ರ ಗುರುವಾರ ಆಯೋಜಿಸಲಾಗಿತ್ತು. ರಾಮನಗರ ತಾಲ್ಲೂಕು ಪಂಚಾಯತ್‌ನ ಮಾಜಿ ಅಧ್ಯಕ್ಷರಾದ ನಟರಾಜ್ ಅವರು ಶಿಬಿರಕ್ಕೆ ಚಾಲನೆ ನೀಡಿದರು. ನಾರಾಯಣ ಆಸ್ಪತ್ರೆಯ ಮಾಲೀಕರಾದ ಡಾ. ಮಧುಸೂದನ್ ಅವರು ಅಧ್ಯಕ್ಷತೆವಹಿಸಿದ್ದರು. ಕನ್ನಡ ಸಾಹಿತ್ಯ ಪರಿಷತ್ತಿನ ತಾಲ್ಲೂಕು ಅಧ್ಯಕ್ಷರಾದ ಬಿ.ಟಿ. ದಿನೇಶ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಅತಿಹೆಚ್ಚಿನ ಸಂಖ್ಯೆಯಲ್ಲಿ ರಕ್ತದಾನಿ ಆರ್.ಎಸ್.ಗಿರೀಶ್ ಅವರಿಗೆ ಸನ್ಮಾನಿಸಲಾಯಿತು. ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಅಧ್ಯಕ್ಷರಾದ ಬಿ.ಟಿ.ನಾಗೇಶ್, ಸ್ಪಂದನ ಚಾರಿಟಬಲ್ ಟ್ರಸ್ಟ್ನ ಅಧ್ಯಕ್ಷರಾದ ಡಾ.ಮುತ್ತಣ್ಣ, ಎಸ್.ಎಲ್.ಎನ್ ಆರ್ಕೇಡ್ ಮಾಲೀಕರಾದ ಎಸ್.ಟಿ. ನಂದೀಶ್, ಮಯಗಾನಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರಾದ ಪ್ರಕಾಶ್, ಜಿಲ್ಲಾ ರಂಗಭೂಮಿ ಕಲಾ ಬಳಗಗಳ ಒಕ್ಕೂಟದ ಪ್ರದಾನ ಕಾರ್ಯದರ್ಶಿ ಎ.ಆರ್. ರವಿಕುಮಾರ್, ಜೀವಾಮೃತ ರಕ್ತ ಕೇಂದ್ರದ ವಿ.ಸಿ. ಚಂದ್ರೇಗೌಡ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ವಿವಿಧ ರಾಜಕೀಯ ಪಕ್ಷಗಳ ಸಭೆ

**ರಾಮನಗರ:** ರಾಮನಗರ ಉಪವಿಭಾಗದ ಉಪವಿಭಾಗಾಧಿಕಾರಿ ಬಿನೋಯ್ ಅವರ ಅಧ್ಯಕ್ಷತೆಯಲ್ಲಿ ಶಿಕ್ಷಕರ ಕ್ಷೇತ್ರ ಹಾಗೂ ಪದವೀಧರ ಕ್ಷೇತ್ರ ಬೆಂಗಳೂರ (ರಾಮನಗರ ಜಿಲ್ಲೆ) 01-11-2023ಕ್ಕೆ ಅನ್ವಯವಾಗುವಂತೆ ಡಿ. 12ರಂದು ಅಂತಿಮ ಮತದಾರರ ಪಟ್ಟಿ ಪ್ರಚುರ ಪಡಿಸಿದ್ದು, ಈ ಬಗ್ಗೆ ವಿವಿಧ ರಾಜಕೀಯ ಪಕ್ಷಗಳ ಸಭೆ ನಡೆಸಲಾಯಿತು.

## ಮಂತ್ರಾಕ್ಷತೆ, ಭಾವಚಿತ್ರ ವಿತರಣೆ

**ಮೈಸೂರು:** ಅಯೋಧ್ಯ ರಾಮ ಮಂದಿರದಿಂದ ಬಂದ ಶ್ರೀರಾಮ ದೇವರ ಮಂತ್ರಕ್ಷತೆ ಹಾಗೂ ಭಾವಚಿತ್ರಗಳನ್ನು ಕ್ಯಾತನಹಳ್ಳಿ ಸಂಘ ಸಂಚಾಲಕರಾದ ಚಂದ್ರಶೇಖರ್ ರವರು ಮನೆ ಮನೆಗೆ ಹೋಗಿ ತಲುಪಿಸಿ ದೇವರ ದರ್ಶನಕ್ಕೆ ಆಹ್ವಾನಿಸಿದರು ನಗರದ ಕ್ಯಾತನಹಳ್ಳಿ ವಿಭಾಗದ ರಾಮ ದಾಮದಲ್ಲಿ ಅಯೋಧ್ಯ ರಾಮಮಂದಿರದಿಂದ ಬಂದ ಶ್ರೀ ರಾಮ ದೇವರ ಮಂತ್ರಾಕ್ಷತೆ ಹಾಗೂ ಭಾವಚಿತ್ರಕ್ಕೆ ಸೋಮವಾರ ವಿಶೇಷ ಪೂಜೆ ಸಲ್ಲಿಸಿ ನೆರೆದ ಭಕ್ತರಿಗೆ ಭಕ್ತಿ ಪೂರಕವಾಗಿ ಮಂತ್ರಾಕ್ಷತೆ ನೀಡಿ ಅಯೋಧ್ಯೆಯಲ್ಲಿ ಜನವರಿ 22ರಂದು ನಡೆಯುವ ಶ್ರೀರಾಮದೇವರ ಪ್ರತಿಷ್ಠಾಪನೆ ದಿನದಂದು ಪ್ರತಿಯೊಬ್ಬರೂ ಮನೆಗಳಲ್ಲಿ ಪೂರ್ವಾಭಿಮುಖವಾಗಿ ಐದು ದೀಪಗಳನ್ನು ಹಚ್ಚಿ ಪೂಜಿಸಲ್ಲಿಸಲು ಮನವಿ ಮಾಡಿದರು, ಖ್ಯಾತ್ನಳ್ಳಿ ನಗರದ ಸಂಘ ಚಾಲಕರ ಚಂದ್ರಶೇಖರ್ , ಅಭಿಯಾನದ ಸಂಚಾಲಕರು ಲೋಕೇಶ್ ಸಹ ಸಂಚಾಲಕರು ಬಿ ಆನಂದ್, ಪದ್ಮನಾಥ್, ಮಣಿರತ್ನಂ, ಪ್ರತಿಜ್ಞ ಭಾಗವಹಿಸಿದ್ದರು.



## ಅತಿಥಿ ಉಪನ್ಯಾಸಕರನ್ನು ಶೀಘ್ರವೇ ಖಾಯಂ ಗೊಳಿಸಿ

**ಪಿರಿಯಾಪಟ್ಟಣ:** ಕಳೆದ 20 ವರ್ಷಗಳಿಂದಲೂ ಶೇಕಡ 75 ರಷ್ಟು ಸರ್ಕಾರಿ ಹುದ್ದೆಗಳು ಖಾಲಿ ಉಳಿದಿದ್ದು ಇದರಿಂದಾಗಿ ಹಿಂದುಳಿದ ವರ್ಗಗಳಿಗೆ ಮತ್ತು ಎಸ್ ಸಿ ಮತ್ತು ಎಸ್ ಟಿ ಸಮುದಾಯಗಳಿಗೆ ಅನ್ಯಾಯವಾಗುತ್ತಿದೆ ಎಂದು ಕರ್ನಾಟಕ ರಾಜ್ಯ ಕಾಯಕ ಸಮಾಜದ ಒಕ್ಕೂಟದ ರಾಜ್ಯಾಧ್ಯಕ್ಷ ಕೆ.ಸಿ ಪುಟ್ಟಸಿದ್ದಶೆಟ್ಟಿ ಆರೋಪಿಸಿದರು ಪಟ್ಟಣದ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತಾ ಸರ್ಕಾರದ ಖಾಲಿ ಹುದ್ದೆಗಳು ಭರ್ತಿ ಆಗಿಲ್ಲದೆ ಇರುವುದು ಸಿದ್ದರಾಮಯ್ಯನವರಿಗೆ ಗೊತ್ತಿದ್ದರೂ ಜಾಣಕೂಡರಂತೆ ವರ್ತಿಸುತಿದ್ದಾರೆ. ಶಿಕ್ಷಣ ಇಲಾಖೆಯಲ್ಲಿರುವ ಖಾಲಿ ಹುದ್ದೆಗಳಿಗೆ ಶಿಕ್ಷಕರನ್ನು ನೇಮಕ ಮಾಡಿಕೊಳ್ಳದೆ ಅತಿಥಿ ಉಪನ್ಯಾಸಕರಿಂದ ದುಡಿಸಿಕೊಳ್ಳುತ್ತಾ ಅವರಿಗೂ ಮೋಸ ಮಾಡುತ್ತಿದ್ದಾರೆ ಇದು ಗುಲಾಮಗಿರಿಯ ಸಂಕೇತವಾಗಿದ್ದು ಸರ್ಕಾರ ಶೀಘ್ರವೇ ಶಿಕ್ಷಕರಾಗಿ ನೇಮಕ ಮಾಡಿಕೊಳ್ಳಬೇಕು.

ಅತಿಥಿ ಉಪನ್ಯಾಸಕರ ಮುಷ್ಕರದಿಂದಾಗಿ 15 ಲಕ್ಷ ವಿದ್ಯಾರ್ಥಿಗಳಿಗೆ ಬೋಧನೆ ಇಲ್ಲದೆ ಅತಂತ್ರ ಸ್ಥಿತಿಯಲ್ಲಿದ್ದಾರೆ 4000 ಶಿಕ್ಷಕರು ಓಇಖಿ ಪಾಸು ಮಾಡಿದ್ದರು ಸರ್ಕಾರ ಇವರನ್ನು ಶಿಕ್ಷಕರಾಗಿ ನೇಮಕ ಮಾಡಿಕೊಳ್ಳದೆ ಮೋಸ ಮಾಡುತ್ತಿದೆ ಮುಂದಿನ ದಿನದಲ್ಲಿ ನಡೆಯುವ ಪದವಿದರ, ಶಿಕ್ಷಕರ ಕ್ಷೇತ್ರ, ಲೋಕಸಭಾ ಚುನಾವಣೆಗಳಲ್ಲಿ ಸರಕಾರದ ವಿರುದ್ಧ ಮತ ಚಲಾಯಿಸಿ ಅಭ್ಯರ್ಥಿಗಳನ್ನು ಸೋಲಿಸುವುದಾಗಿ ಎಚ್ಚರಿಕೆ ನೀಡಿದರು. ಈ ವೇಳೆ ಕಾಯಕ ಸಮಾಜದ ಸದಸ್ಯರಾದ ಅಬ್ಬೂರು ಚಂದ್ರು , ಕೋಣಸೂರು ಶಿವರಾಜು ಹಾಜರಿದ್ದರು.

## ಮಹಿಪಾಲರೆಡ್ಡಿ ರಚಿತ ಚಂದ್ರಶಿಕಾರಿಗೆ ಗುಲ್ಬರ್ಗ ವಿವಿ ಗರಿ

**ಸೇಡಂ:** ಗುಲಬರ್ಗಾ ವಿಶ್ವವಿದ್ಯಾಲಯದ ಕೊಡಮಾಡುವ 2022ನೇ ಸಾಲಿನ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗೆ ಪತ್ರಕರ್ತ-ಸಾಹಿತಿ ಮಹಿಪಾಲರೆಡ್ಡಿ ಮುನ್ನೂರ್ ಸೇಡಂ ಅವರು ಬರೆದ 'ಚಂದ್ರಶಿಕಾರಿ' ಪುಸ್ತಕವು ಆಯ್ಕೆಯಾಗಿದೆ. ಗುಲ್ಬರ್ಗ ವಿವಿ ವ್ಯಾಪ್ತಿಗೆ ಬರುವ ಲೇಖಕರಿಗೆ, ಕಲಾವಿದರಿಗೆ ಕಥೆಗಾರರಿಗೆ ಕೊಡಮಾಡುವ 2022ನೇ ಸಾಲಿನ ಗುಲಬರ್ಗಾ ವಿಶ್ವವಿದ್ಯಾಲಯ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗೆ 'ಜೀವನ ಕಥನ' ವಿಭಾಗದಲ್ಲಿ 'ಚಂದ್ರಶಿಕಾರಿ'



ಎಂಬ ಗ್ರಂಥದ ಲೇಖಕ ಮಹಿಪಾಲರೆಡ್ಡಿ ಮುನ್ನೂರ್ ಅವರು ಆಯ್ಕೆಯಾಗಿದ್ದಾರೆ. ಈ ಪ್ರಶಸ್ತಿಯು 5000 ರೂ. ಗೌರವಧನ, ಪ್ರಮಾಣ ಪತ್ರ ಹಾಗೂ ಸ್ಮರಣಿಕೆ ಒಳಗೊಂಡಿದೆ. ಜನವರಿ ತಿಂಗಳಲ್ಲಿ ವಿಶ್ವವಿದ್ಯಾಲಯದ ಕಾರ್ಯಸೌಧದ 'ಮಹಾತ್ಮಾಗಾಂಧಿ ಸಭಾಂಗಣದಲ್ಲಿ' ಆಚರಿಸಲಿರುವ ಕರ್ನಾಟಕ ರಾಜ್ಯೋತ್ಸವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಕುಲಪತಿಗಳಾದ ಪ್ರೊ. ದಯಾನಂದ ಅಗಸರ ಅವರು ಸಮಾರಂಭದ ಅಧ್ಯಕ್ಷತೆ ವಹಿಸುವರು ಎಂದು ಕನ್ನಡ ಅಧ್ಯಯನ ಸಂಸ್ಥೆಯ ಪ್ರಸಾರಾಂಗ ನಿರ್ದೇಶಕರಾದ ಪ್ರೊ.ಎಚ್.ಟಿ.ಪೋತೆ ತಿಳಿಸಿದ್ದಾರೆ.

## ಅಂತಿಮ ಮತದಾರರ ಪಟ್ಟಿ

**ಚಾಮರಾಜನಗರ:** ದಕ್ಷಿಣ ಶಿಕ್ಷಕರ ಕ್ಷೇತ್ರದ ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಜಿಲ್ಲೆಯಲ್ಲಿ 2084 ಮತದಾರರು ಪಟ್ಟಿಯಲ್ಲಿದ್ದಾರೆ ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಗೀತಾ ಹುಡೇದ ಅವರು ತಿಳಿಸಿದರು. ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರದ ಅಂತಿಮ ಮತದಾರರ ಪಟ್ಟಿ ಪ್ರಕಟಿಸುವ ಸಂಬಂಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ ಈ ವಿಷಯ ತಿಳಿಸಿದರು. ಕರಡು ಮತದಾರರ ಪಟ್ಟಿಯಲ್ಲಿ 1812 ಮತದಾರರಿದ್ದು, ಕರಡು ಮತದಾರರ ಪಟ್ಟಿಯ ನಂತರ 302 ಅರ್ಜಿಗಳನ್ನು ಇತ್ಯರ್ಥಗೊಳಿಸಿದ್ದು, 281 ಅರ್ಜಿಗಳನ್ನು ಅಂಗೀಕರಿಸಲಾಗಿದೆ. 9 ಅರ್ಜಿಗಳು ತಿರಸ್ಕೃತಗೊಂಡಿವೆ. ಅಂತಿಮ ಮತದಾರರ ಪಟ್ಟಿಯಲ್ಲಿ 2084 ಮತದಾರರಿದ್ದಾರೆ. ಮತದಾರರ ಪಟ್ಟಿಯನ್ನು ಆಯಾ ತಾಲೂಕು ಕಚೇರಿಗಳಲ್ಲಿ ಪ್ರಕಟಿಸಲಾಗಿದೆ ಎಂದರು. ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರದ ಅಂತಿಮ ಮತದಾರರ ಪಟ್ಟಿಯನ್ನು ಶೇ. 100ರಷ್ಟು ದೋಷರಹಿತ ಹಾಗೂ ಪಾರದರ್ಶಕವಾಗಿ ತಯಾರಿಸಲಾಗಿದ್ದು, ದಿನಾಂಕ: 23-11-2023ರಿಂದ 09-12-2023ರವರೆಗೆ ಸ್ವೀಕರಿಸಲಾಗಿರುವ ಹಕ್ಕು ಹಾಗೂ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ ಇತ್ಯರ್ಥಪಡಿಸಿ ಅಂತಿಮ ಮತದಾರರ ಪಟ್ಟಿ ತಯಾರಿಸಿ ಪ್ರಕಟಿಸಲಾಗಿದೆ ಎಂದು ಹೆಚ್ಚುವರಿ ಜಿಲ್ಲಾಧಿಕಾರಿಯವರು ತಿಳಿಸಿದರು. ಅಂತಿಮ ಮತದಾರರ ಪಟ್ಟಿ ಪ್ರಕಟಿಸಲು 2023ರ ನವೆಂಬರ್ 23 ರಿಂದ ಡಿಸೆಂಬರ್ 09ರವರೆಗೆ ಗುಂಡ್ಲುಪೇಟೆ ತಾಲೂಕಿನಲ್ಲಿ 57, ಚಾಮರಾಜನಗರ 106, ಯಳಂದೂರು 37, ಕೊಳ್ಳೇಗಾಲ 72 ಹಾಗೂ ಹನೂರು ತಾಲೂಕಿನ 30 ಅರ್ಜಿಗಳು ಸೇರಿದಂತೆ ಒಟ್ಟು 302 ಅರ್ಜಿಗಳನ್ನು ಸ್ವೀಕರಿಸಲಾಗಿತ್ತು. ಈ ಪೈಕಿ 281 ಅರ್ಜಿಗಳನ್ನು ಅಂಗೀಕರಿಸಲಾಗಿದೆ. 19 ಅರ್ಜಿಗಳನ್ನು ತಿರಸ್ಕರಿಸಲಾಗಿದ್ದು, ಉಳಿದ 2 ಅರ್ಜಿಗಳನ್ನು ಮೈಸೂರು ಜಿಲ್ಲೆಗೆ ವರ್ಗಾಯಿಸಲಾಗಿದೆ ಎಂದರು. ಕರ್ನಾಟಕ ದಕ್ಷಿಣ ಶಿಕ್ಷಕರ ಕ್ಷೇತ್ರದ ವ್ಯಾಪ್ತಿಗೆ ಮೈಸೂರು, ಮಂಡ್ಯ, ಹಾಸನ ಹಾಗೂ ಚಾಮರಾಜನಗರ ಜಿಲ್ಲೆಗಳು ಒಳಪಡಲಿದ್ದು, ಚಾಮರಾಜನಗರ ಜಿಲ್ಲೆಗೆ ಸಂಬಂಧಿಸಿದಂತೆ 2023ರ ಡಿಸೆಂಬರ್ ಅಂತ್ಯಕ್ಕೆ ಅಂತಿಮ ಮತದಾರರ ಪಟ್ಟಿಯಲ್ಲಿ ಗುಂಡ್ಲುಪೇಟೆ ತಾಲೂಕಿನಲ್ಲಿ 379, ಚಾಮರಾಜನಗರ 575, ಯಳಂದೂರು 191, ಕೊಳ್ಳೇಗಾಲ 702 ಹಾಗೂ ಹನೂರು ತಾಲೂಕಿನಲ್ಲಿ 237 ಮತದಾರರು ಸೇರಿ ಜಿಲ್ಲೆಯಲ್ಲಿ ಒಟ್ಟು 2084 ಮತದಾರರಿದ್ದಾರೆ ಎಂದರು.

# 2 ಲಕ್ಷ ಹೂವು ವಿತರಿಸಿ ಕೃತಕ ಹೂವು ಬಳಸದಂತೆ ಜಾಗೃತಿ

**ಬೆಂಗಳೂರು:** ರಾಜ್ಯದಲ್ಲಿ ದಿನೇ ದಿನೇ ಹೆಚ್ಚಾಗುತ್ತಿರುವ ಕೃತಕ ಹೂಗಳ ಬಳಕೆ ರಾಜ್ಯದ ಹೂವು ಬೆಳೆಗಾರರ ಜೀವನವನ್ನ ತೊಂದರೆಗೀಡಾಗುವುಂತೆ ಮಾಡಿದೆ. ಹೂವು ಬೆಳೆಗಾರರನ್ನ ಬೀದಿಗೆ ತಳ್ಳಿರುವ ಕೃತಕ ಹೂವುಗಳ ಬಳಕೆಗೆ ಕಡಿವಾಣ ಹಾಕುವಂತೆ ಜನರಲ್ಲಿ ಜಾಗೃತಿಯನ್ನು ಮೂಡಿಸುವ ಉದ್ದೇಶದಿಂದ ರಾಜ್ಯದ ಹೂವು ಬೆಳೆಗಾರರಿಂದ ಲಾಲ್‌ಬಾಗ್ ಉದ್ಯಾನವನದಲ್ಲಿ ವಿನೂತನ ಜನಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.



ಸುಮಾರು2 ಲಕ್ಷ ಹೂವುಗಳನ್ನ ಜನರಿಗೆ ಉಚಿತವಾಗಿ ವಿತರಿಸುವ ಮೂಲಕ ಜನರಲ್ಲಿ ಪ್ಲಾಸ್ಟಿಕ್ ಹಾಗೂ ಸಿಂಥಟಿಕ್ ಹೂವುಗಳ ಬಳಕೆಯಿಂದ ಪರಿಸರದ ಮೇಲೆ ಆಗುವ ದುಷ್ಪರಿಣಾಮಗಳು ಹಾಗೂ ರೈತರಿಗೆ ಆಗುವ ಅನ್ಯಾಯದ ಬಗ್ಗೆ ಅರಿವು ಮೂಡಿಸುವ ಪ್ರಯತ್ನ ಮಾಡಲಾಯಿತು.

ತೋಟಗಾರಿಕೆಇಲಾಖೆ-ಕರ್ನಾಟಕಸರ್ಕಾರ,ಅಂತರಾಷ್ಟ್ರೀಯ ಪುಷ್ಪ ಹರಾಜು ಬೆಂಗಳೂರು ನಿ.,ಹೆಬ್ಬಾಳ,ಜಿ.ಎಫ್.ಸಿ.ಐ.,ಅಗ್ರಿ ಪ್ಲಾಸ್ಟ್,ರಾಜ್ಯದ ಹೂ ಬೆಳೆಗಾರರು/ ಖರೀದಾರರ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಜನಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರಾಜ್ಯದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರಾದ ಶಾಲಿನಿ ರಜನೀಶ್ ಅವರು ಮಾತನಾಡಿ,ರಾಜ್ಯದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ವಾಣಿಜ್ಯ ಬೆಳೆಯಾಗಿ ಹೂವುಗಳನ್ನು ಬೆಳೆಯಲಾಗುತ್ತಿದೆ. ವಿಶ್ವದ ಹಲವಾರು ರಾಷ್ಟ್ರಗಳಿಗೆ ಇಲ್ಲಿನಿಂದಲೇ ಹೂವುಗಳನ್ನು ರಫ್ತು ಮಾಡಲಾಗುತ್ತಿದೆ. ಕೃತಕ ಹೂಗಳನ್ನ ಬಿಟ್ಟು ಜನರು ಹೆಚ್ಚಿನ ಪ್ರಮಾಣದಲ್ಲಿ ನೈಸರ್ಗಿಕ ಹೂವುಗಳನ್ನ ಬಳಸಬೇಕು ಎಂದು ಕರೆ ನೀಡಿದ ಅವರು,ಕೃತಕ ಹೂವುಗಳ ಬಳಕೆಯಿಂದ ಪರಿಸರದ ಮೇಲೆ ಅಷ್ಟೇ ಅಲ್ಲದೇ ರಾಜ್ಯದ ಹೂವು ಬೆಳೆಗಾರರಿಗೂ ತೊಂದರೆ ಆಗುತ್ತಿದೆ. ಈ ಬಗ್ಗೆ ಅಗತ್ಯ ಕ್ರಮದ ಕೈಗೊಳ್ಳುವಂತೆ ಬೆಳೆಗಾರರು ಮನವಿ ಸಲ್ಲಿಸಿದ್ದಾರೆ. ಈ ಬಗ್ಗೆ ಸರಕಾರದ ಗಮನ ಸೆಳೆಯುವುದಾಗಿ ಭರವಸೆ ನೀಡಿದರು.

ದಕ್ಷಿಣ ಭಾರತ ಹೂ ಬೆಳೆಗಾರರ ಸಂಘದ ಅಧ್ಯಕ್ಷರಾದ ಟಿ ಎಂ ಅರವಿಂದ್ ಮಾತನಾಡಿ,ಕರ್ನಾಟಕ ರಾಜ್ಯದಲ್ಲಿ ಪುಷ್ಪ ಬೆಳೆಗಳನ್ನು ಸುಮಾರು38000ಹೆ ಪ್ರದೇಶದಲ್ಲಿ ಬೆಳೆಯಲಾಗುತ್ತಿದೆ ಹಾಗೂ ವಾಣಿಜ್ಯ ಬೆಳೆಗಳನ್ನು ಸುಮಾರು1500ಹೆಕ್ಟೇರ್ ಗಿಂತಲೂ ಹೆಚ್ಚು ಪ್ರದೇಶದಲ್ಲಿ ಬೆಳೆಯಲಾಗುತ್ತಿದೆ. ರಾಜ್ಯದಲ್ಲಿ ಗುಲಾಭಿ,ಸೇವಂತಿಗೆ,ಚೆಂಡು ಹೂ,ಸುಗಂಧರಾಜ,ಕನಕಾಂಬರ ಇತ್ಯಾದಿ ಬಿಡಿ ಹೂಗಳನ್ನು ಹಾಗೂ ಕಟ್ ಗುಲಾಬಿ,ಕಟ್ ಸೇವಂತಿಗೆ,ಜೆರ್ಬೆರ,ಆಂತುರಿಯಮ್ಸ,ಆರ್ಕಿಡ್ಸ್ ಇತ್ಯಾದಿ ವಾಣಿಜ್ಯ ಬೆಳೆಗಳನ್ನು ಹಸಿರು ಮನೆ/ ಪಾಲಿಮನೆಯಲ್ಲಿ ಬೆಳೆಲಾಗುತ್ತಿದೆ. ಇದರಿಂದ ನೇರ ಹಾಗೂ ಪರೋಕ್ಷವಾಗಿ11ಲಕ್ಷ ಜನರ ಜೀವನ ಇದರ ಮೇಲೆ ಅವಲಂಬಿತವಾಗಿದೆ. ಅಲ್ಲದೆ,ರಾಜ್ಯದಲ್ಲಿ2.8ಲಕ್ಷ ಏಕರೆ ಪ್ರದೇಶದಲ್ಲಿ ಕಾಕಡ,ಮಲ್ಲಿಗೆ,ಮ್ಯಾರಿಗೋಲ್ಡ,ಸಂಪಂಗಿ,ಕನಕಾಂಬರ ಸೇರಿದಂತೆ40ಬಗೆಯ ಹೂಗಳನ್ನು ಬೆಳೆಯಲಾಗುತ್ತದೆ. ಇದರ ಮೇಲೆ ಅವಲಂಬಿತರಾಗಿರುವ ಜನರ ಸಂಖ್ಯೆ52ಲಕ್ಷಕ್ಕೂ ಹೆಚ್ಚು. ಕೃತಕ ಹೂವುಗಳ ಬಳಕೆಯಿಂದ ರೈತರುಗಳು ಉತ್ತಮ ದರ ದೊರಕದೆ ತೊಂದರೆಗೆ ಸಿಲುಕಿಕೊಂಡಿದ್ದಾರೆ. ಜನರು ಕೃತಕ ಹೂವುಗಳನ್ನ ಬಿಟ್ಟು ನೈಸರ್ಗಿಕ ಹೂವುಗಳ ಬಳಕೆಯನ್ನು ಹೆಚ್ಚಿಸಬೇಕು ಎಂದು ಕರೆ ನೀಡಿದರು.

**ಕೃತಕ ಹೂಗಳಿಂದಾಗುತ್ತಿರುವ ದುಷ್ಪರಿಣಾಮಗಳು:** ರೈತರ ಆದಾಯದಲ್ಲಿ ಕುಸಿತ: ಪ್ರತಿ ಏಕರೆಗೆ50ಲಕ್ಷ ರೂಪಾಯಿಗಳ ಬಂಡವಾಳವನ್ನು ಹೂಡುವ ಮೂಲಕ ಪಾಲಿ ಹೌಸ್ ಸೇರಿದಂತೆ ಹಲವಾರು ಉಪಕರಣಗಳ ಖರೀದಿಗೆ ರೈತರು ಮುಂದಾಗಿದ್ದಾರೆ. ಸರಿಯಾದ ಪ್ರಮಾಣದ ಬೆಲೆ ದೊರೆಕದೆ ಇದ್ದಲ್ಲಿ ರೈತರ ಶ್ರಮಕ್ಕೆ ತಕ್ಕ ಪ್ರತಿಫಲ ದೊರೆಯುವುದಿಲ್ಲ. ಅಲ್ಲದೆ ರೈತರ ಆದಾಯ ಕುಸಿತದಿಂದಾಗಿ ಮಾಡಿರುವ ಸಾಲ ತೀರಿಸಲಾಗದೆ ರೈತರು ಸಂಕಷ್ಟದಲ್ಲಿದ್ದಾರೆ.

ಪ್ರತಿವರ್ಷ ಹಬ್ಬಗಳಲ್ಲಿ,ಮದುವೆ ಹಾಗೂ ಇನ್ನಿತರೆ ಸಮಾರಂಭಗಳಲ್ಲಿ ಕೃತಕ ಹೂಗಳ ಬಳಕೆ ಹೆಚ್ಚಾಗುತ್ತಿದ್ದು,ನೈಸರ್ಗಿಕ ಹೂಗಳನ್ನು ಕೊಳ್ಳುವರಿಲ್ಲದಂತಾಗಿದೆ. ಇದೇ ರೀತಿಯ ಬಳಕೆ ಹೆಚ್ಚಾದಲ್ಲಿ ನೈಸರ್ಗಿಕ ಹೂಗಳ ಬಳಕೆ ಸಂಪೂರ್ಣ ಕಡಿಮೆಯಾಗಲಿದ್ದು ಹೂ ಬೆಳೆಗಾರರು ಸಂಕಷ್ಟಕ್ಕೀಡಾಗುವ ಪರಿಸ್ಥಿತಿ ಎದುರಾಗಲಿದೆ. ಹೊಸ ವರ್ಷದ ಈ ಶುಭ ಸಂಧರ್ಭದಲ್ಲಿ ಜನರು ನೈಸರ್ಗಿಕ ಹೂವುಗಳನ್ನ ಹೆಚ್ಚಿನ ಪ್ರಮಾಣದಲ್ಲಿ ಬಳಸಲು ಮುಂದಾಗಬೇಕು ಎಂದರು. ರಾಜ್ಯದ ರೈತರು ಬೆಳೆದಿರುವಂತ ವಿವಿಧ ತಳಿಯ ಕಟ್ ಗುಲಾಬಿ ಮಾರಾಟನ್ನು ಲಾಲ್ ಬಾಗ್ನ4ಕ್ಕೂ ದ್ವಾರಗಳಲ್ಲಿ ಆಯೋಜಿಸಲಾಗಿತ್ತು. ನೈಸರ್ಗಿಕ ಹೂಗಳನ್ನು ಬಳಸುವ ಬಗ್ಗೆ ಅಳವಡಿಸಲಾಗಿದ್ದ ''ಖಜಟಜಿಜ ಕಠಟಣ ''ಜನರು ಚಿತ್ರಗಳನ್ನು ತಗೆದುಕೊಂಡರು. ಕಾರ್ಯಕ್ರಮದಲ್ಲಿ ತೋಟಗಾರಿಕೆ ಮತ್ತು ರೇಷ್ಮೇ ಇಲಾಖೆಯ ಕಾರ್ಯದರ್ಶಿಗಳಾದ ಡಾ. ಶಾಮ್ಲಾ ಇಕ್ಬಾಲ್,ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕರು ಹಾಗೂ ಅಂತಾರಾಷ್ಟ್ರೀಯ ಪುಷ್ಪ ಹರಾಜು ಕೇಂದ್ರದ ವ್ಯವಸ್ಥಾಪಕ ನಿರ್ದೇಶಕ ರಾದ ವಿಶ್ವನಾಥ್ ಮುನಿಯಪ್ಪ ದಕ್ಷಿಣ ಭಾರತ ಹೂ ಬೆಳೆಗಾರರ ಸಂಘದ ನಿರ್ದೇಶಕರಾದ ಶ್ರೀಕಾಂತ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಕೆಯುಡಬ್ಲ್ಯುಜೆ ಕ್ಯಾಲೆಂಡರ್ ಬಿಡುಗಡೆ | ರಾಷ್ಟ್ರ ಪ್ರಶಸ್ತಿ ಪುರಸ್ಕೃತರಿಗೆ ಅಭಿನಂದನೆ

# ವಿಮರ್ಶೆಗೆ ಅಧ್ಯಯನ ಮುಖ್ಯ

**ಬೆಂಗಳೂರು:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ(ಕೆಯುಡಬ್ಲ್ಯುಜೆ ) ವತಿಯಿಂದ 2024 ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ, ಹಾಗೂ ಅತ್ಯುತ್ತಮ ಚಲನಚಿತ್ರ ವಿಮರ್ಶಕರಾಗಿ ರಾಷ್ಟ್ರ ಪ್ರಶಸ್ತಿ ಪಡೆದ ಬಾ.ನಾ. ಸುಬ್ರಹ್ಮಣ್ಯ(ಸುಬ್ಬಣ್ಣ) ಮತ್ತು ಅತ್ಯುತ್ತಮ ಚಲನಚಿತ್ರ ನಿರ್ದೇಶನಕ್ಕಾಗಿ ರಾಷ್ಟ್ರ ಪ್ರಶಸ್ತಿ ಪುರಸ್ಕೃತರಕ್ಕೆ ಭಾಜನರಾದ ಎನ್. ಆರ್.ನಂಜುಂಡೇಗೌಡ ಅವರನ್ನು ಸಂಘದ ಸಭಾಂಗಣದಲ್ಲಿ ಸನ್ಮಾನಿಸಲಾಯಿತು.



ರಾಷ್ಟ್ರ ಚಲನಚಿತ್ರ ಪ್ರಶಸ್ತಿ ಪುರಸ್ಕೃತ ನಿರ್ದೇಶಕರಾದ ಎನ್.ಆರ್.ನಂಜುಂಡೇಗೌಡ ಮಾತನಾಡಿ, ಚಲನಚಿತ್ರವನ್ನು ವಿಮರ್ಶಿಸಿ ಬರೆಯಬೇಕಾದರೆ ಅದರ ಸರ್ವಾಂಗೀಣ ಮಾಹಿತಿಯನ್ನು ತಿಳಿದಿರಬೇಕು. ಬದ್ದತೆಯಿಂದ ವೃತ್ತಿ ಧರ್ಮ ಪಾಲನೆ ಮಾಡಬೇಕು. ಆ ನಿಟ್ಟಿನಲ್ಲಿ ಪ್ರಾಶಸ್ತಿ ಪುರಸ್ಕೃತರಾದ ಬಾನಸು ಉತ್ತಮ ಕೆಲಸ ಮಾಡಿದ್ದಾರೆ. ಅಷ್ಟೆ ಅಲ್ಲ, ಕನ್ನಡ ಚಿತ್ರೋದ್ಯಮದ ಕಾವಲುಗಾರನಾಗಿಯೂ ಜವಾಬ್ದಾರಿ ನಿಭಾಯಿಸಿದ್ದಾರೆ ಎಂದರು. ಯಾವುದೇ ಪೂರ್ವಾಗ್ರಹ ಪೀಡಿತರಾಗದೆ, ಪ್ರೇಕ್ಷಕರಿಗೆ ಚಿತ್ರದ ಸಾರವನ್ನು ತಲುಪಿಸುವ ಜವಾಬ್ದಾರಿಯನ್ನು ವಿಮರ್ಶಕ ಮಾಡಬೇಕು. ಅದಕ್ಕಾಗಿ ವಿಮರ್ಶಕರಿಗೆ ತರಬೇತಿ ಶಿಬಿರಗಳನ್ನು ನಡೆಸಿ ಚಿತ್ರದ ಸಾರವನ್ನು ಸಾರ್ವಜನಿಕರ ಮುಂದೆ ಹೇಗಿಡಬೇಕೆಂದು ತಿಳಿಸಿಕೊಡುವ ಕೆಲಸವಾಗಬೇಕಾಗಿದೆ ಎಂದು ಅಭಿಪ್ರಾಯ ಪಟ್ಟರು.

**ಓಲೈಕೆ ಪತ್ರಕರ್ತನಾಗಲಿಲ್ಲ:** ಅತ್ಯುತ್ತಮ ಚಿತ್ರ ವಿಮರ್ಶಕ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಬಾ.ನಾ.ಸುಬ್ರಮಣ್ಯ ಮಾತನಾಡಿ, ವೃತ್ತಿಗೆ ಬಂದಾಗ ಮೊದಲ ಸಂದರ್ಶನ ವನ್ನು ಶಂಕರನಾಗ್ ಮತ್ತು ಅನಂತನಾಗ್ ಅವರೊಂದಿಗೆ ನಡೆಸಿದ್ದು ಮರೆಯಲಾಗದ ಅನುಭವ. ಅರವತ್ತರ ದಶಕದಲ್ಲಿ ರಾಜ್ಯದಲ್ಲಿ ಬರಗಾಲ ಉಂಟಾದ ಸಂದರ್ಭದಲ್ಲಿ ನಿಧಿ ಸಂಗ್ರಹಣೆಯಲ್ಲಿ ವರನಟ ಡಾ.ರಾಜ್ ಕುಮಾರ್ ಅವರೊಂದಿಗಿನ ಒಡನಾಟವನ್ನೂ ಮರೆಯಲಾರೆ ಎಂದು ಹೇಳಿದರು. ವೈಯುಕ್ತಿಕ ಬದುಕಿನಲ್ಲಿ ನಾನೆಂದೂ ಓಲೈಕೆ ಪತ್ರಕರ್ತನಾಗಲಿಲ್ಲ. ಸಮಷ್ಠಿ ದೃಷ್ಟಿಯಿಂದ ಕೆಲಸ ಮಾಡಿಕೊಂಡು ಬಂದಿರುವುದಕ್ಕೆ ಈ ಗೌರವ ಸಿಕ್ಕಿದೆ. ಈ ಸಂದರ್ಭದಲ್ಲಿ ನೈಜ ಪತ್ರಕರ್ತರ ವೃತ್ತಿಪರವಾದ ಸಂಘಟನೆಯಾಗಿರುವ ಕೆಯುಡಬ್ಲ್ಯುಜೆ ನನ್ನನ್ನು ಗೌರವಿರುವುದು ತವರಿನಲ್ಲಿ ಸಿಕ್ಕ ಸನ್ಮಾನವಾಗಿದೆ. ಅದಕ್ಕಾಗಿ ಧನ್ಯವಾದಗಳನ್ನು ತಿಳಿಸುವುದಾಗಿ ಹೇಳಿದರು.

**ಕೆಯುಡಬ್ಲ್ಯುಜೆ ಕ್ಯಾಲೆಂಡರ್ ಬಿಡುಗಡೆ ಸತತ ಹೊಸ ಪ್ರಯತ್ನಕ್ಕೆ ಶ್ಲಾಘನೆ:** ನೂತನ ಕ್ಯಾಲೆಂಡರ್ (2024) ಬಿಡುಗಡೆಗೊಳಿಸಿ ಮಾತನಾಡಿದ, ಖಈಊಎ ಅಧ್ಯಕ್ಷ ಬಿ.ವಿ ಮಲ್ಲಿಕಾರ್ಜುನಯ್ಯ ಮಾತನಾಡಿ, ಹೊಸ ಪ್ರಯತ್ನಗಳನ್ನು ಮಾಡುವ ಮೂಲಕ ಶಿವಾನಂದ ನೇತೃತ್ವದಲ್ಲಿ ಸಂಘ ಉತ್ತಮ ಕೆಲಸವನ್ನು ಮಾಡುತ್ತಿದೆ. ಸದಸ್ಯರಿಗಾಗಿ ಕೆಯುಡಬ್ಲೂ?ಜೆ ಕ್ಯಾಲೆಂಡರ್ ಮಾಡುತ್ತಿರುವುದು ಅಭಿನಂದನೀಯ ಎಂದರು.

**ವೃತ್ತಿ ಬಾಂಧವರಿಗೆ ಸಂಘದ ಗೌರವ:** ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಕೆಯುಡಬ್ಲ್ಯುಜೆ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಮಾತನಾಡಿ, ವೃತ್ತಿ ಬಾಂಧವರ ಸಾಧನೆಗಳನ್ನು ಗುರುತಿಸಿ ಗೌರವಿಸುವ ಕೆಲಸವನ್ನು ಸಂಘ ನಿರಂತರವಾಗಿ ಮಾಡಿಕೊಂಡು ಬರುತ್ತಿದೆ. ರಾಷ್ಟ್ರ ಪ್ರಶಸ್ತಿ ಪುರಸ್ಕೃತರಾಗಿರುವ ಬಾನಾಸು ಮತ್ತು ನಂಜುಂಡೇಗೌಡ ಅವರಿಬ್ಬರದು ತುಂಬಿದ ವ್ಯಕ್ತಿತ್ವ. ಅವರನ್ನು ಸಂಘದ ವೇದಿಕೆಯಲ್ಲಿ ಗುರುತಿಸಿ ಸನ್ಮಾನಿಸುತ್ತಿರುವುದು ಅಭಿಮಾನದ ಸಂಗತಿಯಾಗಿದೆ ಎಂದರು.

75ನೇ ವರ್ಷದ ಸ್ವಾತಂತ್ರ್ಯೋತ್ಸವ ಸಂದರ್ಭದಿಂದ ಸಂಘವು ಹಿರಿಯ ಪತ್ರಕರ್ತರ ಮನೆಗೆ ತೆರಳಿ ಅವರನ್ನು ಗೌರವಿಸುವ ಮನೆಯಂಗಳದಲ್ಲಿ ಮನಃತುಂಬಿ ನಮನ ಕಾರ್ಯಕ್ರಮ ನಡೆಸಿಕೊಂಡು ಬರಲಾಗುತ್ತಿದೆ. ಅದು ಹಿರಿಯ ಪತ್ರಕರ್ತರಿಗೂ ಧನ್ಯತಾಭಾವ ಮೂಡಿಸಿದೆ ಎಂದರು. ಕರ್ನಾಟಕ ಪತ್ರಕರ್ತೆಯರ ಸಂಘದ ಅಧ್ಯಕ್ಷೆ ಪದ್ಮ ಶಿವಮೊಗ್ಗ, ಹಿರಿಯ ಪತ್ರಕರ್ತರಾದ ಸಾವಿತ್ರಿ ಸುರೇಶ್ ಕುಮಾರ್, ತುಂಗ ರೇಣುಕಾ ಅವರು ಸುಬ್ಬಣ್ಣ ಅವರನ್ನು ಗೌರವಿಸುವ ಮೂಲಕ ಕೆಯುಡಬ್ಲೂಜೆ ತನಗೆ ತಾನೆ ಅಭಿಮಾನದಿಂದ ಗೌರವಿಸಿಕೊಂಡಂತಾಗಿದೆ ಎಂದು ಶ್ಲಾಸಿದರು. ಶಿವಾನಂದ ತಗಡೂರು ನೇತೃತ್ವದಲ್ಲಿ ಸಂಘ ಕ್ರೀಯಾಶೀಲವಾಗಿ ಕೆಲಸ ಮಾಡುತ್ತಿದೆ ಎಂದರು. ಹಿರಿಯ ಪತ್ರಕರ್ತ ಚೇತನ್ ನಾಡಿಗೇರ್, ಕೆಯುಡಬ್ಲೂಜೆ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಖಜಾಂಚಿ ವಾಸುದೇವ ಹೊಳ್ಳ ಅವರು ವೇದಿಕೆಯಲ್ಲಿದ್ದರು. ಇದೇ ಸಂದರ್ಭದಲ್ಲಿ ಸಚಿವ ಭೈರತಿ ಸುರೇಶ್ ಅವರ ಮಾಧ್ಯಮ ಸಂಯೋಜಕರಾಗಿ ನೇಮಕಗೊಂಡಿರುವ ಡಿ.ಎಲ್.ಹರೀಶ್ ಅವರನ್ನು ಸನ್ಮಾನಿಸಲಾಯಿತು.

## ಅರ್ಹರಿಗೆ ಅನುದಾನದ ಮಂಜುರಾತಿ ಪತ್ರ ವಿತರಣೆ



**ತಿಪಟೂರು:** ತಾಲ್ಲೂಕು ಬಿದರೆಗುಡಿ ವಲಯದ ಗುರುಗದಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಶ್ರೀ ಕ್ಷೇತ್ರ ಧರ್ಮಸ್ಥಳದ ಗ್ರಾಮಾಭಿವೃದ್ಧಿ ಯೋಜನೆಯ ಸಮುದಾಯ ಅಭಿವೃದ್ಧಿ ವಿಭಾಗದ ವತಿಯಿಂದ 2ಲಕ್ಷ ರೂ ಅನುದಾನದ ಮಂಜುರಾತಿ ಪತ್ರವನ್ನು ತಾಲೂಕಿನ ಯೋಜನಾಧಿಕಾರಿ ಉದಯ್ ಕೆ. ವಿತರಣೆಯ ಮಾಡಿದರು.

ಸಂಧರ್ಭದಲ್ಲಿ ಮಾಹಿತಿ ನೀಡುತ್ತಾ ತಾಲೂಕಿನಲ್ಲಿ ಹೈನುಗಾರಿಕೆಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಇದುವರೆಗೆ 32ಹಾಲಿನ ಸಹಕಾರ ಸಂಘಕ್ಕೆ ಒಟ್ಟು 48 ಲಕ್ಷದ ಅನುದಾನವನ್ನು ಮಂಜೂರಾತಿ ನೀಡಿದ್ದು ಪೂಜ್ಯರ ಸಾಮಾಜಿಕ ಕಾರ್ಯಕ್ಕೆ ಕೈ ಕನ್ನಡಿಯಾಗಿದೆ. ರೈತರು ನಮ್ಮ ಅನ್ನದಾತರು ಎನ್ನುವ ದೃಷ್ಠಿಯಿಂದ ಹೈನುಗಾರಿಕೆಯನ್ನು ಪ್ರೋತ್ಸಾಹಿಸುವ ಸಲುವಾಗಿ ಪೂಜ್ಯ ವೀರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಬ್ಯಾಂಕಿನ ಮುಂಖಾತರವಾಗಿ ಪಾಲುದಾರ ಬಂಧುಗಳಿಗೆ ಹಸು ಖರೀದಿಗೆ ಹಾಗೂ ಕೊಟ್ಟಿಗೆ ರಚನೆಗೆ ಆರ್ಥಿಕ ಸಹಾಯ ಧನ ನೀಡುತ್ತಿದ್ದೇವೆ, ಅಲ್ಲದೆ ಮಾದರಿ ಹೈನುಗಾರಿಕೆಗೆ ಮಾಡುವ ಹಾಗೂ ನೂತನ ಕೊಟ್ಟಿಗೆ ರಚನೆ ಮಾಡುವ ಸದಸ್ಯರಿಗೆ ಸಹಾಯಧನವನ್ನು ಸದ್ಬಳಕೆ ಮಾಡುವಂತೆ ಮನವಿ ಮಾಡಿದರು. ಹೈನುಗಾರಿಕೆಯಿಂದ ಪ್ರತಿ ದಿನ ಡೈರಿಗೆ ಹಾಲು ಹಾಕುವ ಮೂಲಕ ಆರ್ಥಿಕ ಸಬಲತೆಯನ್ನು ಹಾಗೂ ಕೃಷಿಗೆ ಪೂರಕವಾಗಿ ಅಲ್ಲದೇ ಜಾನುವಾರಗಳ ಗೊಬ್ಬರದಿಂದ ಮಾದರಿ ಕೃಷಿ ಮಾಡುವುದರ ಮೂಲಕ ನೆಮ್ಮದಿ ಜೀವನ ಸಾಧ್ಯ ಎಂದರು, ಹಾಗೂ ನಮ್ಮೂರು ನಮ್ಮ ಕೆರೆ ಕಾರ್ಯಕ್ರಮದಡಿಯಲ್ಲಿ ತಾಲೂಕಿನಲ್ಲಿ 6 ಕೆರೆಗಳನ್ನು ಹೊಳೆತ್ತುವುದರ ಮೂಲಕ ಮುಂದಿನ ಪೀಳಿಗೆಗೆ ಅಂತರ್ಜಲ ವೃದ್ಧಿ ಮಾಡುವ ಶ್ರೇಷ್ಠ ಕಾಯಕದಲ್ಲಿ ಪೂಜ್ಯರು ತಮ್ಮನ್ನು ತಾವೇ ತೊಡಗಿಸಿಕೊಂಡಿಸಿದ್ದಾರೆಂದು ಮಾಹಿತಿ ನೀಡಿದರು. ಈ ಸಂಧರ್ಭದಲ್ಲಿ ವಲಯ ಮೇಲ್ವಿಚಾರಕರಾದ ಅನಿತಾ, ಸೇವಾಪ್ರತಿನಿಧಿ ಜ್ಯೋತಿ ,ಹಾಲಿನ ಡೈರಿ ಅಧ್ಯಕ್ಷ ಕರಿಸಿದ್ದಪ್ಪ, ಉಪಾಧ್ಯಕ್ಷ ಮಂಜುಳ, ಪೂಜಾ ಕಾರ್ಯದರ್ಶಿ, ಊರಿನ ಗ್ರಾಮಸ್ಥರು ಹಾಜರಿದ್ದರು.

## ನಾಮಫಲಕ ಕಡ್ಡಾಯ ಮಾಡುವಂತೆ ಆಗ್ರಹ

**ಚನ್ನಪಟ್ಟಣ:** ಸರ್ಕಾರವು ಕಾವೇರಿ ನದಿ ನೀರು ಹಂಚಿಕೆ ವಿಚಾರದಲ್ಲಿ ಮಳೆ ಆಧಾರಿತ ಸಂಕಷ್ಟ ಸೂತ್ರ ರಚಿಸುವ ನಿಟ್ಟಿನಲ್ಲಿ ಶೀಘ್ರವೇ ಗಮನ ನೀಡಬೇಕು ಎಂದು ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷ ರಮೇಶ್‌ಗೌಡ ಆಗ್ರಹಿಸಿದರು.



ಕನ್ನಡ ನಾಮಫಲಕಗಳನ್ನು ಕಡ್ಡಾಯ ಮಾಡುವಂತೆ ಆಗ್ರಹಿಸಿ ಇಂಗ್ಲಿಷ್ ನಾಮಫಲಕಗಳನ್ನು ತೆರವು ಮಾಡಿದ ಕನ್ನಡಕ ಪರ ಹೋರಾಟಗಾರರನ್ನು ಬಂಧನದಿಂದ ಬಿಡುಗಡೆ ಮಾಡಿ ಅವರ ಮೇಲಿನ ಮೊಕದ್ದಮೆಗಳನ್ನು ವಾಪಸ್ ಪಡೆಯುವಂತೆ ಹಾಗೂ ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಆಗ್ರಹಿಸಿ ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್ ಗೌಡರ ನೇತೃತ್ವದಲ್ಲಿ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಭಾನುವಾರ ನಡೆದ 88 ನೇ ದಿನದ ಹೋರಾಟದಲ್ಲಿ ಅವರು ಮಾತನಾಡಿದರು.

ಕಳೆದ ಮೂರು ತಿಂಗಳಿಂದ ನೀರಿಲ್ಲದೆ ಕಾವೇರಿ ಕೊಳ್ಳದ ಕೆರೆಕಟ್ಟೆಗಳು ನೀರಿಲ್ಲದೆ ಬರಿದಾಗಿದ್ದು, ಬೆಳೆ ಸಂಪೂರ್ಣವಾಗಿ ನಷ್ಟವಾಗಿದೆ. ಜೊತೆಗೆ ಇದೀಗ ಅಲ್ಪಸ್ವಲ್ಪ ಇರುವ ಬೆಳೆ ಕಟಾವು ಆರಂಭವಾಗಿ ಒಕ್ಕಣೆ ನಡೆಯುತ್ತಿದೆ. ಈ ನಿಟ್ಟಿನಲ್ಲಿ ರೈತರು ಸಹ ಮುಂಗಾರು ಆರಂಭವಾಗುವವರೆಗೆ ಬೆಳೆಗೆ ನೀರನ್ನು ಕೇಳುವುದಿಲ್ಲ. ಆದರೆ ಕುಡಿಯುವ ನೀರಿನ ಅವಶ್ಯಕತೆ ಇದೆ. ಈ ನಿಟ್ಟಿನಲ್ಲಿ ಕಾವೇರಿ ಜಲಾಶಯದಲ್ಲಿ ಉಳಿದಿರುವ ನೀರನ್ನು ಕುಡಿಯುವ ನೀರಿಗೆ ಸದ್ಬಳಕೆ ಮಾಡಿಕೊಳ್ಳಬೇಕು ಜೊತೆಗೆ ಮುಂಗಾರು ಆರಂಭವಾಗುವ ವೇಳೆಗೆ ಕಾವೇರಿ ನದಿ ನೀರು ಹಂಚಿಕೆ ಪ್ರಾಧಿಕಾರದ ಮುಂದೆ ಮಳೆ ಆಧಾರಿತ ನೀರು ಹಂಚಿಕೆ ಬಗ್ಗೆ ಸಮಗ್ರವಾಗಿ ಮಾಹಿತಿ ಮಂಡಿಸಲು ಸರ್ಕಾರ ಸಿದ್ದತೆ ಮಾಡಿಕೊಳ್ಳಬೇಕು ಎಂದು ರಮೇಶ್‌ಗೌಡ ಆಗ್ರಹಿಸಿದರು.

ರಾಜ್ಯದಲ್ಲಿ ಐದಾರು ತಿಂಗಳು ಮಳೆ ಇರುವುದಿಲ್ಲ. ಈ ನಿಟ್ಟಿನಲ್ಲಿ ಈ ಸಂದರ್ಭದಲ್ಲೇ ಮೇಕೆದಾಟು ಯೋಜನೆಗೆ ಅಡಿಕಲ್ಲು ಹಾಕಿದರೆ ಮಳೆಗಾಲ ಆರಂಭ ಆಗುವ ವೇಳೆಗೆ ಜಲಾಶಯದ ಕಾಮಗಾರಿ ಪೂರ್ಣವಾಗುತ್ತದೆ. ಈ ನಿಟ್ಟಿನಲ್ಲಿ ಮೇಕೆದಾಟು ಯೋಜನೆಯ ಕಾಮಗಾರಿಗೆ ಇರುವ ಅಡ್ಡಿಯನ್ನು ಸರಿ ಮಾಡಲು ಕೇಂದ್ರ ಸರ್ಕಾರವು ಎರಡು ರಾಜ್ಯಗಳ ನಡುವೆ ಮಧ್ಯಸ್ಥಿಕೆ ವಹಿಸಿ ಯೋಜನೆ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳಬೇಕು ಎಂದು ರಮೇಶ್‌ಗೌಡ ಆಗ್ರಹಿಸಿದರು.

## ಮಂಗಲ ಸಹಕಾರ ಸಂಘಕ್ಕೆ ಆಯ್ಕೆ

**ಚಾಮರಾಜನಗರ:** ತಾಲೂಕಿನ ಮಂಗಲ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಎಂ. ಮಹೇಶ್, ಉಪಾಧ್ಯಕ್ಷರಾಗಿ ಪುಟ್ಟಬುದ್ದಿ ಆಯ್ಕೆಯಾದರು.

ಸಂಘದ ಕಚೇರಿಯಲ್ಲಿ ನಡೆದ ಅಧ್ಯಕ್ಷ ?ಉಪಾಧ್ಯಕ್ಷರ ಆಯ್ಕೆ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಎಂ. ಮಹೇಶ್ ಹಾಗೂ ಕ್ಯಾತಶೆಟ್ಟಿ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಪುಟ್ಟಬುದ್ದಿ ಮತ್ತು ಎಸ್. ಮಲ್ಲೇಶ್ ನಾಮ ಪತ್ರ ಸಲ್ಲಿಸಿದ್ದರು. ನಂತರ ಮತದಾನ ನಡೆದು, 13 ನಿರ್ದೇಶಕರ ಬಲದ ಸಂಘದಲ್ಲಿ ತಲಾ 9 ಮತಗಳನ್ನು ಪಡೆದು ಎಂ. ಮಹೇಶ್ ಅಧ್ಯಕ್ಷರಾಗಿ, ಪುಟ್ಟಬುದ್ದಿ ಉಪಾಧ್ಯಕ್ಷರಾಗಿ ಆಯ್ಕೆಯಾದರೆ ಪ್ರತಿಸ್ಪರ್ಧಿಗಳಾದ ಕ್ಯಾತಶೆಟ್ಟಿ ಮತ್ತು ಎಸ್. ಮಲ್ಲೇಶ್ ತಲಾ 4 ಮತಗಳನ್ನು ಪಡೆದುಕೊಂಡರು. ಚುನಾವಣಾಧಿಕಾರಿ ವಿ. ಹೇಮಂತಕುಮಾರ್ ಅಂತಿಮವಾಗಿ ಘೋಷಣೆ ಮಾಡಿದರು. ಸಹಾಯಕ ಚುನಾವಣಾಧಿಕಾರಿಯಾಗಿ ಸಿಇಓ ಗುರುಸ್ವಾಮಿ ಇದ್ದರು.

ಸಭೆಯಲ್ಲಿ ನೂತನ ನಿರ್ದೇಶಕರಾದ ಮಹದೇವಶೆಟ್ಟಿ, ಎಂ.ಕೆ. ಮಹದೇವಶೆಟ್ಟಿ, ಎಂ. ಕೃಷ್ಣ, ಪುಷ್ಪಾವತಿ, ಶಿವಮ್ಮ, ಕುಮಾರ್, ಎಸ್. ನಾಗೇಶ್, ಎಂ.ಸಿ. ಶಿವಶಂಕರ್ ಇದ್ದರು.

ನೂತನ ಅಧ್ಯಕ್ಷ ಎಂ. ಮಹೇಶ್ ಮಾತನಾಡಿ, ಮಂಗಲ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರನ್ನಾಗಿ ನಿರ್ದೇಶಕರು ವಿಶ್ವಾಸ ಇಟ್ಟು ಆಯ್ಕೆ ಮಾಡಿರುವುದಕ್ಕೆ ಅಭಿನಂದಿಸುತ್ತೇನೆ. ಸಂಘದ ಅಭಿವೃದ್ದಿ ಜೊತೆಗೆ ರೈತರಿಗೆ ಸರ್ಕಾರ ರಿಯಾಯಿತಿ ಬಡ್ಡಿ ದರದಲ್ಲಿ ಸಾಲ ಸೌಲಭ್ಯವನ್ನು ಕಲ್ಪಿಸಿಕೊಡುವ ಮೂಲಕ ಮಾದರಿ ಸಂಘವನ್ನಾಗಿ ಮಾಡಲು ಎಲ್ಲರು ಸಹಕಾರ ನೀಡಬೇಕೆಂದು ಮನವಿ ಮಾಡಿದರು.



# ಸಿದ್ದರಾಮಯ್ಯ ಇರುವ ತನಕ ದಲಿತರಿಗೆ ಉಳಿಗಾಲ ಇಲ್ಲ

**ಚಾಮರಾಜನಗರ:** ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಿಜವಾದ ಸಂವಿಧಾನ, ಮೀಸಲಾತಿ, ದಲಿತ ವಿರೋಧಿಯಾಗಿದ್ದಾರೆ ಎಂದು ಬಿಜೆಪಿ ಎಸ್‌ಸಿ ಮೋರ್ಚಾದ ಜಿಲ್ಲಾಧ್ಯಕ್ಷ ಮೂಡ್ನಾಕೂಡು ಪ್ರಕಾಶ್ ನೇರವಾಗಿ ಆರೋಪಿಸಿದರು.



ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ವೇದಿಕೆಗಳಲ್ಲಿ ಮಾತ್ರ ಸಂವಿಧಾನ, ಪ್ರಜಾಪ್ರಭುತ್ವ, ಮೀಸಲಾತಿ ಪರ ದೊಡ್ಡದೊಡ್ಡ ಭಾಷಣ ಮಾಡುತ್ತಿದ್ದೀರಿ. ಇದೇನಾ ಇವತ್ತು ದಲಿತರಿಗೆ ಕೊಡುವ ನ್ಯಾಯ ಎಂದು ಪ್ರಶ್ನಿಸಿದರು. ದಲಿತರು ಎಚ್ಚೆತ್ತುಕೊಂಡು ಸಿದ್ದರಾಮಯ್ಯ ಇಳಿಸಿ ದಲಿತರನ್ನು ಬೆಳೆಸಿ ಅಭಿಯಾನ ಪ್ರಾರಂಭಿಸದಿದ್ದರೆ ಸಿದ್ದರಾಮಯ್ಯ ಇರುವ ತನಕ ದಲಿತರಿಗೆ, ದಲಿತ ನಾಯಕರಿಗೆ ಉಳಿಗಾಲ ಇಲ್ಲ ಎಂದರು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ರಚನೆಯಾಗಿರುವುದು ಬಹುಪಾಲು ದಲಿತ ಮತಗಳಿಂದಲ್ಲೇ ಇದು ಎಲ್ಲರಿಗೂ ಗೊತ್ತಿರುವ ವಿಷಯವಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಂಬಿದ ದಲಿತರಿಗೆ, ದಲಿತ ನಾಯಕರಿಗೆ ಮೊಕ್ಕಲ್ ಟೋಫಿ ಹಾಕಿರುವುದಲ್ಲಿ ನಂಬರ್ ಒನ್ ಆಗಿದ್ದಾರೆ ಏಕೆಂದರೆ ಇವತ್ತು ರಾಜ್ಯದ ನಾಲ್ಕೈದು ಮೊರಾರ್ಜಿ ದೇಸಾಯಿ ಶಾಲೆಗಳಲ್ಲಿ ದಲಿತ ವಿದ್ಯಾರ್ಥಿಗಳಿಂದ ಶೌಚಾಲಯ ಸ್ವಚ್ಛಗೊಳಿಸಿರುವುದು ಮಾಧ್ಯಮಗಳಲ್ಲಿ, ಪತ್ರಿಕೆಗಳ ವರದಿಯಾಗಿದೆ. ಈ ವಿಚಾರ ದೇಶದಲ್ಲಿ ದೊಡ್ಡ ಸುದ್ದಿಯಾಗಿದೆ. ನಾನು ದಲಿತ ಎಂದು ಹೇಳುವ ಸಿದ್ದರಾಮಯ್ಯನವರೇ ದಲಿತ ಮಕ್ಕಳ ಕೈಯಲ್ಲಿ ಶೌಚಾಲಯವನ್ನು ಏಕೆ ಸ್ವಚ್ಛಗೊಳಿಸುತ್ತಿದ್ದೀರಿ, ನಿಮ್ಮ ಮಕ್ಕಳು ಕೈಯಲ್ಲಿ ಮಾಡಿಸಿ. ರಾಜ್ಯದ ಮೊರಾರ್ಜಿ ಶಾಲೆಗಳಲ್ಲಿ ಶೇ. 80 ರಷ್ಟು ಭಾಗ ದಲಿತ ಮಕ್ಕಳೇ ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಇವತ್ತು ದಲಿತ ಮಕ್ಕಳು ಶೌಚಾಲಯ ಸ್ವಚ್ಛ ಮಾಡಲು ಮೂಲ ಕಾರಣ ಎಂದರೆ ಎಸ್‌ಸಿಪಿ, ಟಿಎಸ್‌ಪಿ ಅನುದಾನಗಳಲ್ಲಿ 11, 500 ಕೋಟಿ ಸಾಮಾನ್ಯ ಯೋಜನೆಗಳಿಗೆ ಬಳಕೆ ಮಾಡಿಕೊಂಡಿರುವುದರಿಂದ ಸರ್ಕಾರದಲ್ಲಿ ಶೌಚಾಲಯ ಸ್ವಚ್ಛಗೊಳಿಸಲು ಹಣವಿಲ್ಲದೆ ಕಾರಣ ಶಿಕ್ಷಕರು ಮಕ್ಕಳ ಕೈಯಲ್ಲಿ ಶೌಚಾಲಯ ಸ್ವಚ್ಛಗೊಳಿಸುತ್ತಿದ್ದಾರೆ ಇದು ಅಮಾನವೀಯ ಎಂದರು. ಸಿದ್ದರಾಮಯ್ಯನವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ವರ ಋಣತೀರಿಸಲು ಸಾಧ್ಯವೇ ಇಲ್ಲ, ಮಲ್ಲಿಕಾರ್ಜುನ ಖರ್ಗೆ ಅವರು ಡಿ.ಕೆ.ಶಿವಕುಮಾರ್ ಅವರನ್ನು ಮನವೊಲಿಸಿ ಸಿದ್ದರಾಮಯ್ಯ ಅವರನ್ನು ರಾಜ್ಯದ ಮುಖ್ಯಮಂತ್ರಿಯನ್ನಾಗಿ ಮಾಡಿದ್ದಾರೆ. ಐಎನ್‌ಡಿಐಎ ಕೂಟದ ಪ್ರಧಾನಿ ಅಭ್ಯರ್ಥಿಯಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಹೆಸರು ಚಲಾವಣೆಗೆ ಬಂದು ದೇಶಾದ್ಯಂತ ವ್ಯಾಪಕ ಚರ್ಚೆಯಾಗುತ್ತಿರುವ ಸಂದರ್ಭದಲ್ಲಿಯೇ ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಹುಲ್‌ಗಾಂಧಿ ಪ್ರಧಾನಿಯಾಗಬೇಕು ಎಂದು ಅಭಿಪ್ರಾಯ ಹೊರ ಹಾಕಿರುವುದು ಇವರ ದಲಿತ ವಿರೋಧಿ ನೀತಿಯನ್ನು ಎತ್ತಿ ತೋರಿಸುತ್ತದೆ ಎಂದರು. ಸಿದ್ದರಾಮಯ್ಯನವರೇ ಹಿಂದೆ ಮುಖ್ಯಮಂತ್ರಿ ರೈಸ್‌ನಲ್ಲಿದ್ದ ಜಿ.ಪರಮೇಶ್ವರನ್ನು ಸೋಲಿಸಿದ್ದೀರಿ. ಮತ್ತೆ ಮಲಿಕಾರ್ಜುಣ ಖರ್ಗೆ ಅವರನ್ನು ಸೋಲಿಸಿದ್ರೆ. ಮತ್ತೆ ಪ್ರಧಾನಿ ಅಭ್ಯರ್ಥಿಯಾಗಿ ಮಲ್ಲಿಕಾರ್ಜುನ ಖರ್ಗೆ ಹೆಸರು ಚರ್ಚೆಯಾಗುತ್ತಿರುವ ಸಂದರ್ಭದಲ್ಲಿ ರಾಹುಲ್ ಗಾಂಧಿ ಪ್ರಧಾನಿಯಾಗಲಿ ಎಂದು ಅಭಿಪ್ರಾಯವನ್ನು ಹೊರಹಾಕಿ ಅದನ್ನು ಮುರಿಯುವ ಕೆಲಸ ಮಾಡುತ್ತೀದ್ದೀರಿ. ಇದೇನಾ ದಲಿತರಿಗೆ ಕೊಡುವ ನ್ಯಾಯ, ಗೌರವ ಎಂದರು. ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ನಿರ್ವಹಿಸುವಲ್ಲಿ ವಿಫಲರಾಗಿದ್ದು, ಗೃಹಲಕ್ಷ್ಮಿ ಯೋಜನೆಯಲ್ಲಿ ಬಿಲ್ ಕೊಡುವುದನ್ನು ನಿಧನ ಮಾಡುತ್ತಿದ್ದು, ಯುನಿಟ್ ಹೆಚ್ಚಳ ಮಾಡಿ ಸಂಪರ್ಕವನ್ನು ಕಡಿತ ಮಾಡುತ್ತಿರುವುದು ಹಳ್ಳಿಗಳಲ್ಲಿ ನೋಡಲಾಗುತ್ತಿದೆ. ಇದರಿಂದ ಎಸ್ ಸಿ, ಎಸ್ ಟಿ ಮನೆಗಳು ಕತ್ತಲಾಗುತ್ತಿವೆ ಇದನ್ನು ಉದ್ದೇಶಪೂರ್ವಕವಾಗಿ ಸರ್ಕಾರ ಮಾಡುತ್ತಿದೆ ಇದು ನಿಲ್ಲಬೇಕು ಎಂದರು.

# ಬಿಸಲವಾಡಿ ಡೇರಿ ಬಿಜೆಪಿ ತೆಕ್ಕೆಗೆ



**ಚಾಮರಾಜನಗರ:** ತಾಲೂಕಿನ ಬಿಸಲವಾಡಿ ಹಾಲು ಉತ್ಪಾದಕರ ಸಹಕಾರ ಸಂಘದ ಆಢಳಿತ ಮಂಡಲಿ ನಿರ್ದೇಶಕ ಸ್ಥಾನ ಕ್ಕೆ ನಡೆದ ಚುನಾವಣೆಯಲ್ಲಿ ಬಿಜೆಪಿ ಬೆಂಬಲಿಗರು ಎಲ್ಲಾ ಸ್ಥಾನಗಳನ್ನು ಗೆಲ್ಲುವ ಮುಲಕ ದಾಖಲೆ ನಿರ್ಮಿಸಿದ್ದಾರೆ.

ಗ್ರಾಮದ ಡೇರಿ ಆಡಳಿತ ಮಂಡಳಿಯ 13 ಸ್ಥಾನಗಳಿಗೆ ಚುನಾವಣೆ ನಡೆದು ಬಿಜೆಪಿ ಹಾಗೂ ಕಾಂಗ್ರೆಸ್ ಬೆಂಬಲಿಗರು ಸ್ಪರ್ಧೆ ಮಾಡಿದ್ದರು. ಬಳಿಕ ಮತದಾನ ನಡೆದು ಬಿಜೆಪಿಯ 13 ಮಂದಿ ಹೆಚ್ಚು ಮತಗಳನ್ನು ಪಡೆದು ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ. ಕೈ ಬೆಂಬಲಿಗರು ಸೋಲು ಕಂಡಿದ್ದಾರೆ.

ಸಂಘದ ಐದು ವರ್ಷಗಳ ಅವಧಿಗೆ ನಿರ್ದೇಶಕರಾಗಿ ಬಿ.ಬಿ. ನಾಗರಾಜು, ಸಿ. ರಾಜಶೇಖರ್, ಬಿ. ಶಿವಬಸಪ್ಪ, ಎನ್. ಬಸವಣ್ಣ, ಶಿವಬಸಪ್ಪ, ಮಹೇಶ್, ಮಹದೇವಸ್ವಾಮಿ, ರಾಚಶೆಟ್ಟಿ, ನಾಗರಾಜು, ರಾಚನಾಯಕ,ರವಿ, ರೂಪಶಾಂತಮಲ್ಲಪ್ಪ, ಮಂಜುಳರಾಜು ಅವರುಗಳು ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿಯಾಗಿದ್ದ ಸಹಕಾರ ಸಂಘಗಳ ಅಭಿವೃದ್ಧಿ ಅಧಿಕಾರಿ ಸುಭಾಷಿನಿ ಘೋಷಣೆ ಮಾಡಿದರು.

ಬಿಜೆಪಿ ಬೆಂಬಲಿಗರು ಹೆಚ್ಚು ಮಂದಿ ನಿರ್ದೇಶಕರಾಗಿ ಆಯ್ಕೆಯಾಗುತ್ತಿದ್ದಂತೆ ಬಿಜೆಪಿ ಕಾರ್ಯ ಕರ್ತರು, ಮುಖಂಡರು ಬಿಜೆಪಿ ಬಾವುಟ ಹಿಡಿದು, ಪಟಾಕಿ ಸಿಡಿಸಿ, ಸಿಹಿ ಹಂಚಿ ವಿಜಯೋತ್ಸವ ಆಚರಿಸಿದರು.

ಬಿಜೆಪಿ ಮುಖಂಡ ಬಿ. ನಂಜಪ್ಪ ಮಾತನಾಡಿ, ಗ್ರಾಮದ ಇತಿಹಾಸದಲ್ಲಿಯೇ ಇದೊಂದು ಅಭೂತಪೂರ್ವ ಗೆಲುವು. ಮಾಜಿ ಶಾಸಕ ದಿ. ಎಸ್ ಪುಟ್ಟಸ್ವಾಮಿ ಅವರ ಕಾಲದಿಂದಲೂ ಗ್ರಾಮ ಕಾಂಗ್ರೆಸ್ ಭದ್ರಕೋಟೆ ಯಾಗಿತ್ತು. ಇದನ್ನು ಪಕ್ಷದ ಕಾರ್ಯಕರ್ತರು ಪರಿಶ್ರಮ ಪಟ್ಟು ಡೇರಿ ಆಡಳಿತವನ್ನು ಹಿಡಿಯುವ ಜೊತೆಗೆ ಕಾಂಗ್ರೆಸ್ ಅಭ್ಯರ್ಥಿಗಳನ್ನು ಸೋಲಿಸಿರುವುದು ಮುಂಬರುವ ಚುನಾವಣೆ ಗಳಿಗೆ ದಿಕ್ಸೂಚಿಯಾಗಿದೆ. ಮುಂದೆ ಬರುವ ಲೋಕಸಭೆ, ಸಹಕಾರ ಸಂಘ, ಜಿ.ಪಂ. ತಾ.ಪಂ. ಚುನಾವಣೆಗಳಲ್ಲಿ ನಮ್ಮ ಶಕ್ತಿ ಪ್ರದರ್ಶನಕ್ಕೆ ಹುಮ್ಮಸ್ಸು ಹೆಚ್ಚಿಸಿದೆ ಎಂದರು.

## ಅಣ್ಣಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ನೂತನ ಕಾರ್ಯ ದರ್ಶಿ ನೇಮಕ ಮಾಡಿರುವ ಕ್ರಮಕ್ಕೆ ಖಂಡಿಸಿ

# ರಸ್ತೆಗೆ ಹಾಲು ಚೆಲ್ಲಿ ಹಾಲು ಉತ್ಪಾದಕರಿಂದ ಪ್ರತಿಭಟನೆ

**ರಾಮನಗರ:** ತಾಲೂಕಿನ ಅಣ್ಣಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ನೂತನ ಕಾರ್ಯ ದರ್ಶಿ ನೇಮಕ ಮಾಡಿರುವ ಕ್ರಮವನ್ನು ಖಂಡಿಸಿ ಗ್ರಾಮದ ಹಾಲು ಉತ್ಪಾದಕರು ನಗರದಲ್ಲಿ ಜಾನುವಾರುಗಳ ಮೆರವಣಿಗೆ ನಡೆಸಿ ರಸ್ತೆಗೆ ಹಾಲು ಸುರಿದು ಪ್ರತಿಭಟನೆ ನಡೆಸಿದರು.

ನಗರದ ಐಜೂರು ವೃತ್ತದಲ್ಲಿ ಜಾನುವಾರುಗ ಳೊಂದಿಗೆ ಜಮಾಯಿಸಿದ ಗ್ರಾಮದ ರೈತರು, ಮುಖಂಡರು ಹಾಗೂ ಹಾಲು ಉತ್ಪಾದಕರು ಬೆಂಗಳೂರು-ಮೈಸೂರು ಹೆದ್ದಾರಿಯಲ್ಲಿ ವಾಹನ ತಡೆದು, ದೊಡ್ಡ ಕ್ಯಾನ್‌ಗಳಲ್ಲಿ ಶೇಖರಿಸಿ ತಂದಿದ್ದ ಹಾಲನ್ನು ರಸ್ತೆಗೆ ಸುರಿದು ಪ್ರತಿಭಟಿಸಿದರು. ಕೆಎಂ ಎಫ್ ಮಾಜಿ ಅಧ್ಯಕ್ಷರು ಹಾಲಿ ಬಮೂಲ್ ನಿರ್ದೇಶಕ ಪಿ.ನಾಗರಾಜು ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಸಂಘದಲ್ಲಿ ಪ್ರಭಾರ ಕಾರ್ಯದರ್ಶಿ ಉತ್ತಮ ವಾಗಿ ಕೆಲಸ ಮಾಡುತ್ತಿದ್ದರೂ ಸಹ ಪಿ.ನಾಗರಾಜು ಅವರು ಹಿಂದೆ ಭ್ರಷ್ಟಾಚಾರ ಮಾಡಿದ್ದ ಸಂಬಂಧಿಯನ್ನು ಸಂಘದ ಕಾರ್ಯದರ್ಶಿಯನ್ನಾಗಿ ನೇಮಕ ಮಾಡಲು ನೇರ ಕಾರಣರಾಗಿದ್ದಾರೆ. ನಮಗೆ ಪ್ರಭಾರ ಕಾರ್ಯದರ್ಶಿಯೇ ನಿರ್ವಹಣೆ ಮಾಡಲಿ, ಸಂಘದ ಆಡಳಿತದಲ್ಲಿ ಮೂಗು ತೂರಿಸುವುದು ಬೇಡವೆಂದು ಪ್ರತಿಭಟನಾಕಾರರು ಪಿ.ನಾಗರಾಜ್ ಭಾವಚಿತ್ರಕ್ಕೆ ಪೊರಕೆ ಮತ್ತು ಚಪ್ಪಲಿ ಯಿಂದ ಹೊಡೆದು ರೋಷ ಹೊರಹಾಕಿದರು.

ಹೊಸ ಕಾರ್ಯದರ್ಶಿ ನೇಮಕವನ್ನು ಕೂಡಲೇ ರದ್ದುಪಡಿಸಬೇಕು, ಸಂಘದ ಪ್ರಭಾರ ಕಾರ್ಯ ದರ್ಶಿ ರಾಜಕುಮಾರ್ ಅವರನ್ನೇ ಮುಂದುವರಿ ಸಬೇಕು, ಕೂಡಲೇ ಸಂಘಕ್ಕೆ ಚುನಾವಣೆ ಘೋಷಿಸಬೇಕು. ಹೊಸದಾಗಿ ಅಸ್ತಿತ್ವಕ್ಕೆ ಬರಲಿರುವ ಆಡಳಿತ ಮಂಡಳಿಯೇ ಹೊಸ ಕಾರ್ಯದರ್ಶಿ ಯನ್ನು ನೇಮಕ ಮಾಡಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು. ಹಿಂದೆ ಸಂಘದಲ್ಲಿ ಲಕ್ಷಾಂತರ ರೂಪಾಯಿ ಹಣ ದುರುಪಯೋಗ ಮಾಡಿದ್ದ ವ್ಯಕ್ತಿಯ ಸಂಬಂಧಿಯನ್ನೇ ಕಾರ್ಯದರ್ಶಿಯಾಗಿ ನೇಮಿಸಿರುವ ಹಿಂದೆ ಅಕ್ರಮಗಳನ್ನು ಮುಚ್ಚಿ ಹಾಕುವ ಸಂಚಿದೆ. ಇದರಿಂದ ಸಂಘದ ಆಡಳಿತ ಹಾದಿ ತಪ್ಪಲಿದೆ ಎಂದು ದೂರಿದರು. ಪ್ರತಿಭಟನೆಯಲ್ಲಿ ಗ್ರಾಮದ ಶಿವರಾಜು, ನಾಗರಾಜು, ರಮೇಶ್, ಮಹೇಶ್, ಜಯರಾಮಯ್ಯ, ನಾಗೇಶ್, ಪುಟ್ಟಬೈರಯ್ಯ, ಅರ್ಜುನ್, ಲಕ್ಷ್ಮಮ್ಮ, ಚಂದ್ರ ಜೆಡಿಎಸ್ ಮುಖಂಡರಾದ ರಾಜಶೇಖರ್, ಸಬ್ಬಕೆರೆ ಶಿವಲಿಂಗಯ್ಯ, ರೈಡ್ ನಾಗರಾಜು, ರವಿ, ಜಯಕುಮಾರ್, ಕೆಂಪ ರಾಜು, ಕಿರಣ್ ಉಪಸ್ಥಿತರಿದ್ದರು.



### ಪ್ರತಿಭಟನಾ ಮೆರವಣಿಗೆ

**ಐಜೂರು ಸರ್ಕಲ್‌ನಲ್ಲಿ ರಸ್ತೆತಡೆ ನಡೆಸಿ ಜಿಲ್ಲಾಧಿಕಾರಿ ಕಚೇರಿವರೆಗೆ ಮೆರವಣಿಗೆಯಲ್ಲಿ ಸಾಗಿದ ಪ್ರತಿಭಟನಾಕಾರರು ಅಪರ ಜಿಲ್ಲಾಧಿಕಾರಿ ಬಿ.ಸಿ.ಶಿವಾನಂದಮೂರ್ತಿ ಅವರನ್ನು ಭೇಟಿ ಮಾಡಿ, ಕಾರ್ಯದರ್ಶಿ ನೇಮಕಾತಿಯನ್ನು ರದ್ದು ಗೊಳಿಸಬೇಕು, ಸಂಘಕ್ಕೆ ಚುನಾವಣೆ ಘೋಷಿಸ ಬೇಕು ಎಂಬ ಬೇಡಿಕೆಯನ್ನು ಸಲ್ಲಿಸಿದರು. ಗ್ರಾಮಸ್ಥರು ಮನವಿ ಸಲ್ಲಿಸಿದ ಬೆನ್ನಲ್ಲೇ ಹೆಚ್ಚುವರಿ ಜಿಲ್ಲಾಧಿಕಾರಿ ಬಿ.ಸಿ.ಶಿವಾನಂದಮೂರ್ತಿ ಅವರು, ಬಿಗುವಿನ ವಾತಾವರಣವಿರುವ ಗ್ರಾಮ ದಲ್ಲಿ ಎರಡೂ ಗುಂಪುಗಳ ನಡುವೆ ಶಾಂತಿಸಭೆ ನಡೆಸುವಂತೆ ರಾಮನಗರ ತಹಶೀಲ್ದಾರ್ ಮತ್ತು ಸಹಕಾರ ಸಂಘಗಳ ಅಧಿಕಾರಿಗಳಿಗೆ ಸೂಚನೆ ನೀಡಿದರು.**

## ಗ್ರಂಥಾಲಯ ಕಂ ಮಾಹಿತಿ ಸಹಾಯಕರ ಹುದ್ದೆಗೆ ಅರ್ಜಿ ಆಹ್ವಾನ

**ರಾಮನಗರ:** ಕನಕಪುರ ತಾಲ್ಲೂಕಿನ ಚಿಕ್ಕಮುದವಾಡಿ ಗ್ರಾಮ ಪಂಚಾಯಿತಿ ಗ್ರಂಥಾಲಯದಲ್ಲಿ ಗ್ರಂಥಾಲಯ ಕಂ ಮಾಹಿತಿ ಸಹಾಯಕರ ಹುದ್ದೆಗೆ ಕನಿಷ್ಠ ವೇತನದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತಿವುಳ್ಳ ಅಭ್ಯರ್ಥಿಗಳು ನಿಗದಿಪಡಿಸಿದ ಅರ್ಜಿಯನ್ನು ಮುಖ್ಯ ಗ್ರಂಥಾಲಯಾಧಿಕಾರಿಗಳ ಕಚೇರಿಯಿಂದ ಪಡೆದು ಭರ್ತಿಮಾಡಿ ಜ. 19ರ ಸಂಜೆ 4 ಗಂಟೆಯೊಳಗೆ ನೇರವಾಗಿ ಕಚೇರಿ ವೇಳೆಯಲ್ಲಿ ಮುಖ್ಯ ಗ್ರಂಥಾಲಯಾಧಿಕಾರಿಗಳು, ಜಿಲ್ಲಾ ಕೇಂದ್ರ ಗ್ರಂಥಾಲಯ, ರಾಮನಗರ ರವರ ಕಚೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಮುಖ್ಯ ಗ್ರಂಥಾಲಯಾಧಿಕಾರಿಗಳು, ಜಿಲ್ಲಾ ಕೇಂದ್ರ ಗ್ರಂಥಾಲಯ, ರಾಮನಗರ ಇವರನ್ನು ಕೆಲಸದ ವೇಳೆಯಲ್ಲಿ ಸಂಪರ್ಕಿಸುವಂತೆ ಗ್ರಾಮ ಪಂಚಾಯಿತಿ ಗ್ರಂಥಾಲಯ ಕಂ ಮಾಹಿತಿ ಸಹಾಯಕರ ಆಯ್ಕೆ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಪಂಚಾಯತ್‌ನ ಉಪಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ರಾಮನಗರ:** ಕೃಷಿ ಇಲಾಖೆ ವತಿಯಿಂದ 2023-24ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ ಸೂಕ್ಷ್ಮ ನೀರಾವರಿ ಕಾರ್ಯಕ್ರಮದಡಿ ಶೇ 90 ರಷ್ಟು ಸಹಾಯಧನದಲ್ಲಿ ತುಂತುರು ನೀರಾವರಿ ಘಟಕಗಳಿಗೆ ವಿತರಣೆ ಮಾಡಲು ಸರ್ಕಾರದಿಂದ ಅನುಮೋದನೆ ನೀಡಲಾಗಿದೆ ಹಾಗೂ ಕೃಷಿ ಭಾಗ್ಯ ಯೋಜನೆಯನ್ನು ಸರ್ಕಾರವು ಪುನಾರಂಭಿಸಿರುವುದರಿಂದ ಈ ಯೋಜನೆಯಡಿ ಪ್ಯಾಕೇಜ್ ರೂಪದಲ್ಲಿ ಕೃಷಿ ಹೊಂಡದೊಂದಿಗೆ ಕಡ್ಡಾಯವಾಗಿ ಪಾಲಿಥೀನ್ ಹೊದಿಕೆ ಹಾಗೂ ತಂತಿ ಬೇಲಿ ಘಟಕಗಳನ್ನು ರೈತರು ಅಳವಡಿಸಿಕೊಳ್ಳಲು ಆಸಕ್ತ ಸಾಮಾನ್ಯ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ವರ್ಗದ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ರೈತರು ದಾಖಲಾತಿಗಳೊಂದಿಗೆ ತಮ್ಮ ವ್ಯಾಪ್ತಿಯ ರೈತ ಸಂಪರ್ಕ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಸಹಾಯಕ ಕೃಷಿ ನಿರ್ದೇಶಕರು, ಚನ್ನಪಟ್ಟಣ, ರೈತ ಸಂಪರ್ಕ ಕೇಂದ್ರ, ಅಥವಾ ದೂ.ಸಂಖ್ಯೆ: 8277932403, 8277932459, 8277932447, 8277932431 ಅನ್ನು ಸಂಪರ್ಕಿಸುವಂತೆ ಚನ್ನಪಟ್ಟಣ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇ-ಕೆವೈಸಿ ವದಂತಿಗಳಿಗೆ ಕಿವಿ ಕೊಡಬೇಡಿ

**ಮಂಡ್ಯ:** ಅಡುಗೆ ಅನಿಲ ಸಂಪರ್ಕ ಇರುವವರು ಡಿಸೆಂಬರ್ 31 ರೊಳಗೆ ಗ್ಯಾಸ್ ಏಜೆನ್ಸಿ ಗಳಿಗೆ ಹೋಗಿ ಇ-ಕೆವೈಸಿ ಮಾಡಿಸಿದರೆ ಮಾತ್ರ ಸಬ್ಸಿಡಿ ಸಿಗುತ್ತದೆ ಮತ್ತು ಸಿಲಿಂಡರ್ ಸರಬರಾಜು ಮಾಡಲಾಗುತ್ತದೆ ಹಾಗೂ ಇ-ಕೆವೈಸಿ ಕಾರ್ಯಕ್ರಮ ನೀಡಬೇಕೆಂಬ ವದಂತಿ ಸಾರ್ವಜನಿಕ ವಲಯದಲ್ಲಿ ಗೊಂದಲ ಸೃಷ್ಟಿಗೆ ಕಾರಣವಾಗಿದೆ. ಈ ವದಂತಿಗೆ ಸಾರ್ವಜನಿಕರು ಕಿವಿ ಕೊಡಬಾರದು ಅಡುಗೆ ಅನಿಲ ಗ್ರಾಹಕರು ತಮ್ಮ ಗ್ಯಾಸ್ ಏಜೆನ್ಸಿಗಳಿಗೆ ತೆರಳಿ ಉಚಿತವಾಗಿ ಇ-ಕೆವೈಸಿ ಮಾಡಿಸಬಹುದಾಗಿದ್ದು ಇದಕ್ಕೆ ಕೇಂದ್ರ ಸರ್ಕಾರವು ಯಾವುದೇ ಕೊನೆಯ ದಿನಾಂಕವನ್ನು ನಿಗಧಿಪಡಿರುವುದಿಲ್ಲ. ಮೊದಲ ಆದ್ಯತೆಯಾಗಿ ಉಜ್ವಲ ಯೋಜನೆಯಡಿ ಗ್ಯಾಸ್ ಸಂಪರ್ಕ ಪಡೆದಿರುವವರು ಇ-ಕೆವೈಸಿ ನೀಡಬೇಕಾಗಿದು, ಉಳಿದಂತೆ ಗ್ಯಾಸ್ ಸಂಪರ್ಕ ಹೊಂದಿರುವವರು ತಮ್ಮ ಆಧಾರ್ ದಾಖಲೆಯೊಂದಿಗೆ ಗ್ಯಾಸ್ ಏಜೆನ್ಸಿಗೆ ತೆರಳಿ ಇ-ಕೆವೈಸಿ ನೀಡಬಹುದಾಗಿದೆ. ಸಾರ್ವಜನಿಕರು ಸದರಿ ಕಾರ್ಯದ ಸದುಪಯೋಗ ಪಡೆದುಕೊಳ್ಳಬೇಕೆಂದು ಮಂಡ್ಯ ತಾಲ್ಲೂಕು ತಹಶೀಲ್ದಾರರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ರಾಜ್ಯ ಮಟ್ಟದ ಯುವಜನೋತ್ಸವಕ್ಕೆ ಅರ್ಜಿ

**ಮಂಡ್ಯ:** ರಾಜ್ಯ ಮಟ್ಟದ ಯುವಜನೋತ್ಸವ ಕಾರ್ಯಕ್ರಮವನ್ನು ಜನವರಿ 06 ಹಾಗೂ 07ರಂದು ಬಳ್ಳಾರಿ ಜಿಲ್ಲೆಯ ಜಿಲ್ಲಾ ಕ್ರೀಡಾಂಗಣದಲ್ಲಿ ಸಂಘಟಿಸಲಾಗುತ್ತಿದೆ. ಮಂಡ್ಯ ಜಿಲ್ಲೆಯಲ್ಲಿ ಏರ್ಪಡಿಸಲಾಗಿದ್ದ 2023-24ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ವೈಯಕ್ತಿಕ ಹಾಗೂ ಗುಂಪು ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದ ತಂಡ/ಸ್ಪರ್ಧಿಗಳು ರಾಜ್ಯ ಮಟ್ಟದ ಯುವಜನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಬಹುದಾಗಿರುತ್ತದೆ. ರಾಜ್ಯ ಮಟ್ಟದ ಯುವಜನೋತ್ಸವದಲ್ಲಿ ಭಾಗವಹಿಸುವ ಕಲಾ ಬಂಧುಗಳು ಜನವರಿ 06ರಂದು ಬಳ್ಳಾರಿ ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಿಗ್ಗೆ 10.00 ಗಂಟೆಯಿಂದ ಮಧ್ಯಾಹ್ನ 3.00 ಗಂಟೆಯೊಳಗೆ ಮೂಲ ಆಧಾರ್ ಕಾರ್ಡ್ ಮತ್ತು ಎಸ್.ಎಸ್.ಎಲ್.ಸಿ ಅಂಕಪಟ್ಟಿಯೊಂದಿಗೆ ಸಂಘಟಕರಲ್ಲಿ ನೊಂದಣಿ ಮಾಡಿಕೊಳ್ಳಲು ಮಂಡ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂ. ಸಂ. 08232-224725 ಅನ್ನು ಸಂಪರ್ಕಿಸಬಹುದಾಗಿದೆ.

## 4ರಂದು ಸಾರಿಗೆ ಅದಾಲತ್

**ಬೆಂಗಳೂರು:** ಜನವರಿ 04 ರ ಗುರುವಾರ ಸಂಜೆ 4.00 ಗಂಟೆಗೆ ಬೆಂಗಳೂರು (ದಕ್ಷಿಣ) ಜಯನಗರದ ಸಾರಿಗೆ ಅಧಿಕಾರಿಗಳ ಕಚೇರಿಯ 2ನೇ ಮಹಡಿ ಆಡಿಟೋರಿಯಂನಲ್ಲಿ ಸಾರಿಗೆ ಅದಾಲತ್‌ನ್ನು ಏರ್ಪಡಿಸಲಾಗಿದೆ. ಅದಾಲತ್ ನಲ್ಲಿ ಸಾರಿಗೆ ಇಲಾಖೆಯ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದು, ಸಾರ್ವಜಿಕರು ಸಾರಿಗೆ ಇಲಾಖೆಗೆ ಸಂಬಂಧಿಸಿದ ಅಹವಾಲು ಮತ್ತು ಕುಂದುಕೊರತೆಗಳ ಬಗ್ಗೆ ಅಹವಾಲುಗಳನ್ನು ಸಲ್ಲಿಸುವ ಮೂಲಕ ಈ ಅವಕಾಶವನ್ನು ಉಪಯೋಗಿಸಿಕೊಳ್ಳುವಂತೆ ಬೆಂಗಳೂರು (ದಕ್ಷಿಣ) ಜಯನಗರದ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಾದ ಬಿ.ಎಂ. ಸುರೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 28ರಂದು ಅಲೆಮಾರಿ ಮತ್ತು ಅರೆ ಅಲೆಮಾರಿ ಸಾಹಿತ್ಯ ಸಾಂಸ್ಕೃತಿಕ ಕಲೋತ್ಸವ



**ರಾಮನಗರ:** ಅಲೆಮಾರಿ ಜನಾಂಗದ ರಾಜ್ಯ ಮಟ್ಟದ ಅಲೆಮಾರಿ ಮತ್ತು ಅರೆ ಅಲೆಮಾರಿ ಸಾಹಿತ್ಯ ಸಾಂಸ್ಕೃತಿಕ ಕಲೋತ್ಸ ವನ್ನು ಇದೇ ಜ. 28ರಂದು ಮೈಸೂರಿನಲ್ಲಿ ಆಯೋಜಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಅಲೆಮಾರಿ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಕೆ.ರವೀಂದ್ರಶೆಟ್ಟಿ ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಅರೆಅಲೆಮಾರಿ(ಹಿಂದುಳಿದ ವರ್ಗಗಳ ಪ್ರ.ವರ್ಗ-1) ಜನಾಂಗಗಳ ಒಕ್ಕೂಟದ ಸಂಘಟನೆ ಸ್ಥಾಪನೆಯಾಗಿ ಎರಡು ವರ್ಷ ಪೂರೈಸಿದ ಹಿನ್ನಲೆಯಲ್ಲಿ ಬೃಹತ್ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ.

ಕಾರ್ಯಕ್ರಮ ದಲ್ಲಿ ಸಾಹಿತ್ಯ-ಸಾಂಸ್ಕೃತಿಕ ಮತ್ತು ಕಲೋತ್ಸವ ಆಯೋಜಿಸಲಾಗುತ್ತಿದ್ದು ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಸಾಧರಿಗೆ ಸನ್ಮಾನ, ವಿಚಾರ ಸಂಕಿರ್ಣವನ್ನು ಆಯೋಜಿಸ ಲಾಗಿದ್ದು, ಅಲೆಮಾರಿ ಬದುಕು (ಅಂದು-ಇಂದು-ಮುಂದು), ಅಲೆಮಾರಿ ಜನರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಚರ್ಚಿಸಿ ನಿರ್ಣಯ ಮಂಡಿಸಲಾಗುತ್ತದೆ ಎಂದರು.

ಸರ್ಕಾರಿ ಜಾಗದಲ್ಲಿ ಕಳೆದ 10 ವರ್ಷಕ್ಕೂ ಮೇಲ್ಪಟ್ಟು,ಒಂದೇಕಡೆ ಡೇರೆ,ಗುಡಿಸಲು, ಟೆಂಟ್ ಹಾಕಿ ಜೀವನ ನಡೆಸುತ್ತಿರುವ ಅಲೆಮಾರಿ ಜನಾಂಗದವರಿಗೆ ಅದೇ ಸ್ಥಳವನ್ನು ಅವರಿಗೆ ನೀಡಬೇಕು. ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಅಲೆಮಾರಿ ಹಾಗೂ ಅಲೆಮಾರಿಗಳ ಸಮೀಕ್ಷೆ ನಡೆಸಬೇಕು ಎಂದು ಹೇಳಿದರು.

ರಾಜ್ಯಾದ್ಯಂತ ಹಿಂದುಳಿದ ಪ್ರವರ್ಗ-1ಕ್ಕೆ ಸೇರಿದ ಹಲವಾರು ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗದ 46 ಜಾತಿಗಳ ಕುಟುಂಬಗಳು ಸುಮಾರು ವರ್ಷದಿಂದ ಬೀದಿಬದಿಯಲ್ಲಿ ಸರ್ಕಾರಿ, ಹಾಗೂ ಖಾಸಗಿಯವರ ಖಾಲಿ ನಿವೇಶನಗಳಲ್ಲಿ ಗುಡಿಸಲು ನಿರ್ಮಿಸಿ ಜೀವನ ಸಾಗಿಸುತ್ತಿದ್ದಾರೆ. ಅವರಿಗೆ ನಿವೇಶನ, ರಾಜೀವ್ ಗಾಂಧಿ ವಸತಿ ನಿಗಮದಿಂದ 5 ಲಕ್ಷ ಮನೆಕಟ್ಟಲು ಸಹಾಯಧನ ಸೇರಿದಂತೆ ಅಲೆಮಾರಿ ಸಮುದಾಯದ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತರಲಾಗುತ್ತದೆ.

ಸಂಘಟನೆ ಬಲಗೊಳಿಸಲು ಎಲ್ಲಾ ಜಿಲ್ಲೆ ಮತ್ತು ತಾಲ್ಲೂಕು ಘಟಕಗಳನ್ನು ಸ್ಥಾಪನೆ ಮಾಡಲಾಗುವುದು. ಈಗಾಗಲೇ ರಾಜ್ಯದಲ್ಲಿ 14 ಜಿಲ್ಲೆಗಳಲ್ಲಿ ಸಂಘಟನೆ ಸಂಘಟನೆಗಳನ್ನು ಸ್ಥಾಪನೆ ಮಾಡಲಾಗಿದೆ ಎಂದು ತಿಳಿಸಿದರು.

ಸಂಘಟನೆ ರಾಜ್ಯಾಧ್ಯಕ್ಷ ಪ್ರಕಾಶ್, ಮುಖಂಡರಾದ ಬಿ.ಸಿ. ಚಂದ್ರಯ್ಯ, ರಂಗನಾಥ್, ಮಾರಪ್ಪ, ರಂಗಸ್ವಾಮಿ, ವೆಂಕಟೇಶ್, ದೇವರದೊಡ್ಡಿ ಜಗದೀಶ್, ಬಾಲರಾಜು ಮತ್ತಿತರರು ಉಪಸ್ಥಿತರಿದ್ದರು

# ಅಖಿಲ ಭಾರತ ಸರ್ವೋದಯ ಮಂಡಲದ ರಾಷ್ಟ್ರೀಯ ಸದಸ್ಯರಾಗಿ ಡಾ.ವಿ.ಪ್ರಶಾಂತ ಆಯ್ಕೆ

**ವಿಜಯಪುರ:** ಸರ್ವ ಸೇವಾ ಸಂಘ ಹಾಗೂ ಅಖಿಲ ಭಾರತ ಸರ್ವೋದಯ ಮಂಡಳದ ರಾಷ್ಟ್ರೀಯ ಕಾರ್ಯಕಾರಿ ಸಮಿತಿಯ ಸದಸ್ಯರಾಗಿ ಹಾಗೂ ರಾಷ್ಟ್ರೀಯ ಯುವ ಕೋಶದ ಜಂಟಿ ಸಂಯೋಜಕರಾಗಿ ಇದೆ ಪ್ರಪ್ರಥಮ ಬಾರಿಗೆ ದಕ್ಷಿಣ ರಾಜ್ಯಗಳ ಕರ್ನಾಟಕದ ದೇವನಹಳ್ಳಿ ತಾಲ್ಲೂಕಿನ ವಿಜಯಪುರ ಪಟ್ಟಣದ ಬೆಂಗಳೂರು ಗ್ರಾಮಾಂತರ ಜಿಲ್ಲಾ ಸರ್ವೋದಯ ಮಂಡಳಿಯ ಅಧ್ಯಕ್ಷ ಡಾ.ವಿ.ಪ್ರಶಾಂತ ರವರನ್ನ ಆಯ್ಕೆ ಮಾಡಲಾಗಿದೆ ಎಂದು ಮಹಾರಾಷ್ಟ್ರ ರಾಜ್ಯದ ವರ್ದಾ ಜಿಲ್ಲೆಯ ಸೇವಾ ಗ್ರಾಮದಲ್ಲಿರುವ ಅಖಿಲ ಭಾರತ ಸರ್ವೋದಯ ಮಂಡಲದ ರಾಷ್ಟ್ರೀಯ ಅಧ್ಯಕ್ಷ ಚಂದನ್ ಪಾಲ್ ಪ್ರಕಟಣೆಯಲ್ಲಿ ತಿಳಿಸಿದರು.

ಡಾ.ವಿ.ಪ್ರಶಾಂತ ಇವರು ಕಳೆದ 20 ವರ್ಷಗಳಿಂದ ಸ್ಪಂದನ ಯುವಜನ ಸೇವಾ ಸಂಘದ ಕಾರ್ಯದರ್ಶಿ ಯಾಗಿ, ರಾಷ್ಟ್ರೀಯ ಸೇವಾ ಯೋಜನೆಯ ಸ್ವಯಂ ಸೇವಕರಾಗಿ, ನೆಹರು ಯುವ ಕೇಂದ್ರ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾ ಸಲಹಾ ಸಮಿತಿ ಸದಸ್ಯರಾಗಿ, ಎನ್.ಎಸ್.ಎಸ್ ರಾಜ್ಯ ಕೋಶದ ಸಲಹಾ ಮಂಡಳಿ ಸದಸ್ಯರಾಗಿ ಹಾಗೂ ಸರ್ವಿಸ್ ಸಿವಿಲ್ ಇಂಡಿಯಾ ಇಂಟರ್ನ್ಯಾಷನಲ್ ಕರ್ನಾಟಕ ಗ್ರೂಪ್ ನ ರಾಜ್ಯ ಕಾರ್ಯದರ್ಶಿ ಯಾಗಿ ಸೇವೆ ಸಲ್ಲಿಸಿರುತ್ತಾರೆ ಮತ್ತು ಪ್ರಸ್ತುತ ರಾಷ್ಟ್ರೀಯ ಯುವ ಯೋಜನೆಯ ರಾಜ್ಯ ಸಂಯೋಜಕ ರಾಗಿ ಹಾಗೂ ಬೆಂಗಳೂರಿನ ಗಾಂಧಿ ಭವನದ ಸಂಯೋಜಕರಾಗಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿದ್ದಾರೆ.

ಇವರಿಗೆ ಬೆಂಗಳೂರು ವಿಶ್ವ ವಿದ್ಯಾನಿಲಯ ರಾಷ್ಟ್ರೀಯ ಸೇವಾ ಯೋಜನೆ ವತಿಯಿಂದ ಉತ್ತಮ ವಿಶ್ವವಿದ್ಯಾನಿಲಯ ಮಟ್ಟದ ಎನ್.ಎಸ್.ಎಸ್ ಸ್ವಯಂ ಸೇವಕ ಪ್ರಶಸ್ತಿ, ನೆಹರು ಯುವ ಕೇಂದ್ರ ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರಿಂದ ಜಿಲ್ಲಾ ಯುವ ಪ್ರಶಸ್ತಿ, ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ ಕರ್ನಾಟಕ ಸರ್ಕಾರ ಇವರಿಂದ ಸ್ವಾಮಿ ವಿವೇಕಾನಂದ ರಾಜ್ಯ ಯುವ ಪ್ರಶಸ್ತಿ , ಬೆಂಗಳೂರಿನ ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಇವರಿಂದ ಕರೋನ ವಾರಿಯರ್ ಪ್ರಶಸ್ತಿ ಹಾಗೂ ರಾಷ್ಟ್ರೀಯ ಯುವ ಯೋಜನೆ ಗಾಂಧಿ ಶಾಂತಿ ಪ್ರತಿಷ್ಠಾನ ನವದೆಹಲಿ ಇವರಿಂದ ರಾಷ್ಟ್ರೀಯ ಯುವ ಪ್ರಶಸ್ತಿಗಳಿಗೆ ಪಾತ್ರರಾಗಿದ್ದಾರೆ. ಹಾಗೂ ಪದ್ಮಭೂಷಣ ದಿ.ಡಾ.ಎಚ್. ನರಸಿಂಹಯ್ಯ, ದೇಶದ ಹಿರಿಯ ಗಾಂಧಿವಾದಿ ಡಾ.ಎಸ್.ಎನ್. ಸುಬ್ಬರಾವ್, ಅಣ್ಣಾ ಹಜಾರೆ, ಕರ್ನಾಟಕದ ಗಾಂಧೀ ಡಾ.ಎಚ್. ಶ್ರೀನಿವಾಸಯ್ಯ, ಡಾ.ಎಚ್.ಎಸ್ ದೊರೆಸ್ವಾಮಿ ಮೊದಲಾದವರ ಮಾರ್ಗದರ್ಶನದಡಿ ಇವರು ತಮ್ಮ ವಿದ್ಯಾರ್ಥಿ ದಿನಗಳಲ್ಲೇ ಇವರ ಸಂಪರ್ಕ ಪಡೆದು ದೇಶ ಮತ್ತು ವಿದೇಶಗಳಲ್ಲಿ ನಡೆದ ರಾಷ್ಟ್ರೀಯ ಯುವ ಶಿಬಿರಗಳಲ್ಲಿ ಭಾಗವಹಿಸಿದ್ದರು. ಮತ್ತು ಕರ್ನಾಟಕ ರಾಜ್ಯ ಸರ್ವೋದಯ ಮಂಡಳಿ ಯಲ್ಲಿ ಕಳೆದ ಅದಿನೈದು ವರ್ಷಗಳಿಂದ ಯುವಜನ ಸೇವಾ ಕ್ಷೇತ್ರಗಳಲ್ಲಿ ಉತ್ತಮ ಕಾರ್ಯ ನಿರ್ವಹಿಸಿದ್ದು ಸರ್ವೋದಯ ಮಂಡಳಿಯ ತತ್ವ ಸಿದ್ಧಾಂತ ಗಳಿಗನುಗುಣವಾಗಿ ಇವರಿಗೆ ಎಲ್ಲಾ ಅರ್ಹತೆಗಳು ಇರುವ ಕಾರಣ ಈ ಮಹತ್ವದ ಜವಾಬ್ದಾರಿಯನ್ನು ನೀಡಲಾಗಿದೆ ಎಂದು ಬೆಂಗಳೂರಿನ ವಲ್ಲಭನಿಕೇತನದ ಕರ್ನಾಟಕ ಸರ್ವೋದಯ ಮಂಡಲದ ರಾಜ್ಯಾಧ್ಯಕ್ಷ ಡಾ.ಎಚ್.ಎಸ್.ಸುರೇಶ್ ತಿಳಿಸಿದರು.

ರಾಜ್ಯಕ್ಕೆ ದೊರೆತ ಈ ಉತ್ತಮ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳುವಂತೆ ಗಾಂಧಿ ಪರಿವಾರದ ಸಂಘ ಸಂಸ್ಥೆಗಳ ಪದಾಧಿಕಾರಿಗಳಾದ ಬೆಂಗಳೂರಿನ ಕರ್ನಾಟಕ ಗಾಂಧಿ ಸ್ಮಾರಕ ನಿಧಿಯ ಅಧ್ಯಕ್ಷ ನಾಡೋಜ ಡಾ.ವೂಡೇ ಪಿ. ಕೃಷ್ಣ, ಕರ್ನಾಟಕ ರಾಜ್ಯ ಸರ್ವೋದಯ ಮಂಡಲದ ಗೌರವಾಧ್ಯಕ್ಷ ಹಾಗೂ ಕರ್ನಾಟಕ ಗಾಂಧಿ ಸ್ಮಾರಕ ನಿಧಿಯ ಗೌರವ ಕಾರ್ಯದರ್ಶಿ ಎಂ.ಸಿ.ನರೇಂದ್ರ,

ರಾಜ್ಯ ಸರ್ವೋದಯ ಮಂಡಲದ ಕಾರ್ಯದರ್ಶಿ ಡಾ.ಯಾ.ಚಿ. ದೊಡ್ಡಯ್ಯ, ಭಾರತ ಸರ್ಕಾರದ ಯುವಜನ ಸೇವಾ ಮತ್ತು ಕ್ರೀಡಾ ಸಚಿವಾಲಯದ ದಕ್ಷಿಣ ರಾಜ್ಯಗಳ ಪ್ರಾದೇಶಿಕ ನಿರ್ದೇಶಕ ಎಂ.ಎನ್. ನಟರಾಜ್, ನವದೆಹಲಿ ಯ ಎಸ್.ಸಿ.ಐ ಸಂಸ್ಥೆಯ ರಾಷ್ಟ್ರೀಯ ಖಜಾಂಚಿ ಜಿ.ಅಭಿನಾಶ್ ಗಣೇಶ್, ನವದೆಹಲಿಯ ರಾಷ್ಟ್ರೀಯ ಯುವ ಯೋಜನೆಯ ಮ್ಯಾನೇಜಿಂಗ್ ಟ್ರಸ್ಟಿ ರಂಜಿನಿ ಈ ಜೋಯಿಶ್, ಟ್ರಸ್ಟಿಗಳಾದ ಮಧ್ಯಪ್ರದೇಶದ ರಣಸೀಂಗ್ ಫಾರ್ಮ್, ಕೇರಳದ ಡಾ. ಕಾರಿಯನ್ ಸುಕುಮಾರನ್ ಮತ್ತು ಒರಿಸ್ಸಾ ರಾಜ್ಯದ ಮಧುಸೂಧನ್ ದಾಸ್ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲಾ ಸರ್ವೋದಯ ಮಂಡಳಿಯ ಕಾರ್ಯದರ್ಶಿ, ವಿ.ಎನ್. ಸೂರ್ಯ ಪ್ರಕಾಶ್ ಮೊದಲಾದವರು ಶುಭ ಕೋರಿದರು.

ಮಹಾರಾಷ್ಟ್ರ ರಾಜ್ಯದ ವರ್ದಾ ಜಿಲ್ಲೆಯ ಸೇವಾ ಗ್ರಾಮದ ಸರ್ವ ಸೇವಾ ಸಂಘ ಹಾಗೂ ಅಖಿಲ ಭಾರತ ಸರ್ವೋದಯ ಮಂಡಳದ ರಾಷ್ಟ್ರೀಯ ಕಾರ್ಯಕಾರಿ ಸಮಿತಿಯ ಸದಸ್ಯರಾಗಿ ಹಾಗೂ ರಾಷ್ಟ್ರೀಯ ಯುವ ಕೋಶದ ಜಂಟಿ ಸಂಯೋಜಕರಾಗಿ ಇದೆ ಪ್ರಪ್ರಥಮ ಬಾರಿಗೆ ದಕ್ಷಿಣ ರಾಜ್ಯಗಳ ಕರ್ನಾಟಕ ದ ದೇವನಹಳ್ಳಿ ತಾಲ್ಲೂಕಿನ ವಿಜಯಪುರ ಪಟ್ಟಣದ ಬೆಂಗಳೂರು ಗ್ರಾಮಾಂತರ ಜಿಲ್ಲಾ ಸರ್ವೋದಯ ಮಂಡಳಿಯ ಅಧ್ಯಕ್ಷ ಡಾ.ವಿ.ಪ್ರಶಾಂತ ಆಯ್ಕೆಯಾದ ಸಂದರ್ಭದಲ್ಲಿ ಇವರನ್ನ ಬೆಂಗಳೂರಿನ ಕರ್ನಾಟಕ ಗಾಂಧಿ ಸ್ಮಾರಕ ನಿಧಿಯ ಅಧ್ಯಕ್ಷ ನಾಡೋಜ ಡಾ. ವೂಡೇ ಪಿ. ಕೃಷ್ಣ ಅಭಿನಂದಿಸಿದರು.




**ಸರ್ವ ಸೇವಾ ಸಂಘ ಹಾಗೂ ಅಖಿಲ ಭಾರತ ಸರ್ವೋದಯ ಮಂಡಳದ ರಾಷ್ಟ್ರೀಯ ಕಾರ್ಯಕಾರಿ ಸಮಿತಿಯ ಸದಸ್ಯರಾಗಿ ಹಾಗೂ ರಾಷ್ಟ್ರೀಯ ಯುವ ಕೋಶದ ಜಂಟಿ ಸಂಯೋಜಕರಾಗಿ ಆಯ್ಕೆಯಾಗಿರುವ ವಿಜಯಪುರ ಪಟ್ಟಣದ ಬೆಂಗಳೂರು ಗ್ರಾಮಾಂತರ ಜಿಲ್ಲಾ ಸರ್ವೋದಯ ಮಂಡಳಿಯ ಅಧ್ಯಕ್ಷ ಡಾ.ವಿ.ಪ್ರಶಾಂತ್.**



**ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತು ರಾಯಚೂರು ಜಿಲ್ಲೆಯ ಲಿಂಗಸುಗೂರಿನ ಕಾಲೇಜು ಮೈದಾನದಲ್ಲಿ ಸತೀಶ್ ಜಾರಕಿಹೊಳಿಯವರ ಸರ್ವಾಧ್ಯಕ್ಷತೆಯಲ್ಲಿ ಆಯೋಜಿಸದ್ದ ವೈಜ್ಞಾನಿಕ ಸಮ್ಮೇಳನದಲ್ಲಿ ಚಿಕ್ಕನಾಯಕನಹಳ್ಳಿಯ ಜಗದೀಶ್ ಅವರನ್ನು ಸಮಾಜ ಸೇವಾ ವಿಭಾಗದಲ್ಲಿ ಗುರುತಿಸಿ ವಿಶಿಷ್ಟ ಸೇವಾ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು. ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ಡಾ.ಹುಲಿಕಲ್ ನಟರಾಜ್, ದೊಡ್ಡಎಣ್ಣೇಗೆರೆಯ ಜ್ಞಾನಭಾರತಿ ವಿದ್ಯಾಸಂಸ್ಥೆಯ ಕಾರ್ಯದರ್ಶಿ ಡಿ.ಎಸ್.ಪ್ರಶಾಂತ್ ಮತ್ತಿತರರು ಇದ್ದರು.**

# ಮಲೆ ಮಹದೇಶ್ವರ ಸನ್ನದಿಗೆ ಲಕ್ಷಾಂತರ ಭಕ್ತರ ಭೇಟಿ

**ಚಾಮರಾಜನಗರ :** ಕರ್ನಾಟಕ ತಮಿಳುನಾಡು ಗಡಿಯಲ್ಲಿ ನೆಲೆಸಿರುವ ಪವಾಡ ಪುರುಷ ಮಲೆ ಮಹದೇಶ್ವರ ಸನ್ನದಿಯಲ್ಲಿ 2023 ರ ಡಿಸೆಂಬರ್ 31 ರಂದು ಲಕ್ಷಾಂತರ ಭಕ್ತರು ಜಮಾಯಿಸಿ ದೇವರ ದರ್ಶನ ಪಡೆಯುವ ಜೊತೆಗೆ 2024 ರ ಹೊಸ ವರ್ಷ ಆಚರಣೆ ಮಾಡಿದರು.

ಚಾಮರಾಜನಗರ ಜಿಲ್ಲೆಯ ಹನೂರು ತಾಲ್ಲೂಕಿನ ಶ್ರೀ ಮಲೆ ಮಹದೇಶ್ವರ ಬೆಟ್ಟದಲ್ಲಿ 2023 ರ ಡಿಸೆಂಬರ್ 31 ರ ಭಾನುವಾರ ರಾತ್ರಿ ಚಿನ್ನದ ರಥ ಸೇವೆ ನಿರಂತರವಾಗಿ ಸಾವಿರಾರು ಭಕ್ತರ ಸಮ್ಮುಖದಲ್ಲಿ ಹಲವಾರು ಭಾರಿ ನಡೆಯಿತು. ಶ್ರೀ ಮಲೆ ಮಹದೇಶ್ವರ ಬೆಟ್ಟದಲ್ಲಿ ಲಕ್ಷಾಂತರ ಭಕ್ತರು ಜಮಾಯಿಸಿದ್ದರಿಂದ ಶ್ರೀ ಮಲೆ ಮಹದೇಶ್ವರ ಸ್ವಾಮಿ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರದಿಂದ ಸೂಕ್ತವಾದ ಬಂದೂಬಸ್ತ್ ಮಾಡಲಾಗಿತ್ತು. ಪ್ರಾಧಿಕಾರದ ಕಾರ್ಯದರ್ಶಿ ಸರಸ್ವತಿರವರು ಸೇರಿದಂತೆ ಪ್ರಾಧಿಕಾರದ ಸಿಬ್ಬಂದಿಗಳು ಪೊಲೀಸ್ ಇಲಾಖೆಯ ಸಿಬ್ಬಂದಿಗಳೊಂದಿಗೆ ಬಂದೂಬಸ್ತ್ ಮಾಡಲಾಗಿತ್ತು.



# ಅಪಘಾತದಲ್ಲಿ ಮೃತಪಟ್ಟ ಸಿಬ್ಬಂದಿಯ ಕುಟುಂಬದವರಿಗೆ ಪರಿಹಾರ

**ಬೆಂಗಳೂರು:** ಕಳೆದ ಒಂದು ವರ್ಷದಲ್ಲಿ ಅಪಘಾತದಲ್ಲಿ ಮೃತಪಟ್ಟಿದ್ದ ಎಲ್ಲಾ ಸಿಬ್ಬಂದಿಗಳ ಕುಟುಂಬದ ಸದಸ್ಯರನ್ನು ಗೌರವಿಸಿದ ಸಾರಿಗೆ ಸಚಿವರು, ಅಪಘಾತದಲ್ಲಿ ಮೃತಪಟ್ಟ ಒಟ್ಟು 12 ಕೆ.ಎಸ್.ಆರ್.ಟಿ.ಸಿ. ಸಿಬ್ಬಂದಿಗಳ ಅವಲಂಬಿತರಿಗೆ ತಲಾ 1 ಕೋಟಿ ರೂ.ಗಳ ಪರಿಹಾರ ಮೊತ್ತವನ್ನು ವಿತರಿಸಲಾಗಿದೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಸಾರಿಗೆ ನಿಗಮದ ಕೇಂದ್ರ ಕಚೇರಿಯಲ್ಲಿ ಸಾಂಕೇತಿಕ ಅಪಘಾತದಲ್ಲಿ ಮೃತ ಪಟ್ಟ ಸಿಬ್ಬಂದಿಗಳ ಅವಲಂಬಿತರಿಗೆ ತಲಾ ರೂ 1 ಕೋಟಿಯ ಪರಿಹಾರ ಮೊತ್ತವನ್ನು ವಿತರಿಸಿದರು ಅಲ್ಲದೆ ಸೀರೆ ಮತ್ತು ಸಿಹಿಯನ್ನು ನೀಡಿ ಗೌರವಿಸಿದರು.

ಮೃತರನ್ನು ಕಳೆದುಕೊಂಡ ಕುಟುಂಬದವರಿಗೆ ಯಾವ ರೀತಿಯಿಂದಲೂ ನಷ್ಟ ಭರಿಸಲು ಸಾಧ್ಯವಿಲ್ಲ. ಆದರೆ ಆರ್ಥಿಕವಾಗಿ ಅವರಿಗೆ ಶಕ್ತಿ ಮತ್ತು ಭದ್ರತೆಯನ್ನು ಒದಗಿಸುವ ಜವಾಬ್ದಾರಿಯನ್ನು ನಾವು ಮಾಡುತ್ತಿದ್ದೇವೆ. ಪರಿಹಾರದ ಮೊತ್ತದಿಂದ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ, ಮನೆ ಮಾಡಿಕೊಂಡು ಯಾರನ್ನು ಅವಲಂಬಿಸದೆ ಬದುಕು ನಡೆಸಬಹುದಾಗಿದೆ ಎಂದರು.

ಈ ಹಿಂದೆ ಅಪಘಾತ ಸೇರಿದಂತೆ ಇತರ ಕಾರಣಗಳಿಂದ ಮೃತಪಟ್ಟ ಕುಟುಂಬದವರಿಗೆ ರೂ. 3 ಲಕ್ಷ ಗಳನ್ನು ಮಾತ್ರ ನೀಡಲಾಗುತ್ತಿತ್ತು. ಸಾರಿಗೆ ಸುರಕ್ಷಾ ಅಪಘಾತ ವಿಮಾ ಪರಿಹಾರ ಯೋಜನೆಯಡಿ ನಿಗಮದಲ್ಲಿ ಸೇವೆಯಲ್ಲಿರುವಾಗ ಸಿಬ್ಬಂದಿಗಳು ಖಾಸಗಿ ಅಥವಾ ಕರ್ತವ್ಯ ನಿರತ ಅಪಘಾತದಲ್ಲಿ ಮೃತಪಟ್ಟಲ್ಲಿ ಅವರ ಅವಲಂಬಿತರಿಗೆ, ಅದೇರೀತಿ, ಖಾಸಗಿ ಅಥವಾ ಕರ್ತವ್ಯ ನಿರತ ಅಪಘಾತದಲ್ಲಿ ಅಂಗನ್ಯೂನ್ಯತೆಗೆ ಒಳಗಾದಲ್ಲಿ ಸಿಬ್ಬಂದಿಗಳಿಗೆ ಹೆಚ್ಚಿನ ಮೊತ್ತದ ಆರ್ಥಿಕ ಪರಿಹಾರ ಒದಗಿಸುವ ಮೂಲಕ ಅವರ ಜೀವನಕ್ಕೆ ಭದ್ರತೆ ಒದಗಿಸುವ ಉದ್ದೇಶದಿಂದ ಯುನೈಟೆಡ್ ಇಂಡಿಯಾ ಇನ್ಸುರೆನ್ಸ್ ರವರೊಂದಿಗೆ ರೂ.50 ಲಕ್ಷ ಹಾಗೂ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ರವರ ಕಾರ್ಪೊರೇಟ್ ವೇತನ ಪ್ಯಾಕೇಜ್‌ನಡಿ ರೂ.50 ಲಕ್ಷದಂತೆ ಒಟ್ಟು ರೂ 1 ಕೋಟಿ ಪರಿಹಾರ ನೀಡಲಾಗುತ್ತಿದೆ.

ಸಾರಿಗೆ ನಿಗಮಗಳಲ್ಲಿ ದೇಶದಲ್ಲಿಯೇ ಈ ಯೋಜನೆಯನ್ನು ಪ್ರಥಮ ಬಾರಿಗೆ ಕರಾರಸಾ ನಿಗಮದಲ್ಲಿ ಜಾರಿಗೊಳಿಸಲಾಗಿತ್ತು, ತದನಂತರ ಇತರೆ ನಿಗಮಗಳಲ್ಲಿಯೂ ಜಾರಿಗೊಳಿಸಲಾಗಿದೆ. ಈ ಯೋಜನೆ ಜಾರಿ ನಂತರದಲ್ಲಿ 17 ಜನ ನೌಕರರು ವೈಯಕ್ತಿಕ ಅಥವಾ ಕರ್ತವ್ಯ ನಿರತ ಅಪಘಾತದಲ್ಲಿ ಮೃತಪಟ್ಟಿರುತ್ತಾರೆ. ಇದುವರೆವಿಗೂ 09 ಜನ ನೌಕರರ ಕುಟುಂಬದವರಿಗೆ ತಲಾ ರೂ. 1 ಕೋಟಿಗಳ ಅಪಘಾತ ವಿಮಾ ಮೊತ್ತವನ್ನು ಈಗಾಗಲೇ ವಿತರಿಸಲಾಗಿದೆ ಎಂದು ತಿಳಿಸಿದರು.

ಸಮಾರಂಭದಲ್ಲಿ ವ್ಯವಸ್ಥಾಪಕ ನಿರ್ದೇಶಕರಾದ ವಿ.ಅನ್ಬುಕುಮಾರ್, ಭಾ.ಆ.ಸೇ, ನಿರ್ದೇಶಕರು(ಸಿ ಮತ್ತು ಜಾ), ಡಾ. ನಂದಿನಿ ದೇವಿ ಕೆ, ಭಾ.ಆ.ಸೇ, ಸೇರಿದಂತೆ ಅಪಘಾತದಲ್ಲಿ ಮೃತಪಟ್ಟ ಸಿಬ್ಬಂದಿಗಳ ಕುಟುಂಬ ವರ್ಗ, ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.



# ಜಿಲ್ಲಾಮಟ್ಟದ ಪ್ರತಿಭಾ ಕಾರಂಜಿ, ಕಲೊತ್ಸವ

**ವಿಜಯಪುರ:** 2023-24ನೇ ಸಾಲಿನ ಜಿಲ್ಲಾಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೊತ್ಸವ ಕಾರ್ಯಕ್ರಮ ವಿಜಯಪುರದ ಸರ್ಕಾರಿ ಪದವಿ ಪೂರ್ವ ಕಾಲೇಜು, ಪ್ರೌಢಶಾಲಾ ವಿಭಾಗದ ಆವರಣದಲ್ಲಿ ದಿನಾಂಕ 2.1.2024ನೇ ಮಂಗಳವಾರ ನಡೆಯಲಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಪ ನಿರ್ದೇಶಕರಾದ ಕೃಷ್ಣಮೂರ್ತಿ ಹೇಳಿದರು.

ವಿಜಯಪುರ ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದ ಶಾಲೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮವನ್ನು ಜಿಲ್ಲೆಯ ನಾಲ್ಕು ತಾಲೂಕುಗಳಿಂದ ವಿಜೇತರಾದ ಮಕ್ಕಳು ರಾಜ್ಯಮಟ್ಟಕ್ಕೆ ಆಯ್ಕೆಯಾಗುತ್ತಾರೆ ಇವರಿಗೆ ನಗದು ಬಹುಮಾನ ನೀಡಲಾಗುವುದು ಹಾಗೂ ಸುಮಾರು 200 ಜನ ಕಾರ್ಯಕ್ರಮದಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ತಮ್ಮ ಪ್ರತಿಭೆಯನ್ನು ತೋರಿಸಲಿದ್ದು ಆಯ್ಕೆಯಾದ ಮಕ್ಕಳನ್ನು ರಾಜ್ಯಮಟ್ಟಕ್ಕೆ ಕಳಿಸಲಾಗುವುದು ಜಿಲ್ಲಾ ಉಸ್ತುವಾರಿ ಸಚಿವರು ಜಿಲ್ಲಾಧಿಕಾರಿಗಳು ಹಾಗೂ ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿ ವರ್ಗ ನಾಲ್ಕು ತಾಲೂಕುಗಳ ಶಾಲಾ ಮಕ್ಕಳು ಭಾಗವಹಿಸುತ್ತಾರೆ, ಕಾರ್ಯಕ್ರಮದ ಸಿದ್ಧತೆಯನ್ನು ಮಾಡಿಕೊಳ್ಳಲಾಗುತ್ತಿದ್ದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಪ ನಿರ್ದೇಶಕರಾದ ಕೃಷ್ಣಮೂರ್ತಿ ಪರಿಶೀಲನೆ ನಡೆಸಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ವ್ಯವಸ್ಥಾಪಕೆ ಪದ್ಮಾವತಮ್ಮ ಸರ್ಕಾರಿ ಪದವಿ ಪೂರ್ವ ಕಾಲೇಜು ಉಪ ಪ್ರಾಂಶುಲರಾದ ವೆಂಕಟೇಶ್ ಜಿಲ್ಲಾ ಶಿಕ್ಷಣ ಇಲಾಖೆಯ ಅಧಿಕಾರಿ ವರ್ಗ ಶಾಲೆಯ ಶಿಕ್ಷಕರು ಮುಂತಾದವರು ಹಾಜರಿದ್ದರು.



**2023-24ನೇ ಸಾಲಿನ ಜಿಲ್ಲಾಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೊತ್ಸವ ಕಾರ್ಯಕ್ರಮದ ಸಿದ್ಧತೆಯನ್ನು ವೀಕ್ಷಿಸುತ್ತಿರುವ ಜಿಲ್ಲಾ ಉಪ ನಿರ್ದೇಶಕರಾದ ಕೃಷ್ಣಮೂರ್ತಿ ಜಿಲ್ಲಾ ವ್ಯವಸ್ಥಾಪಕೆ ಪದ್ಮಾವತಮ್ಮ ಸರ್ಕಾರಿ ಪದವಿ ಪೂರ್ವ ಕಾಲೇಜು ಉಪ ಪ್ರಾಂಶುಲರಾದ ವೆಂಕಟೇಶ್ ಜಿಲ್ಲಾ ಶಿಕ್ಷಣ ಇಲಾಖೆಯ ಅಧಿಕಾರಿ ವರ್ಗ ಶಾಲೆಯ ಶಿಕ್ಷಕರು.**

# ಸಂಜೆ ಟಿಪ್ಸ್



## ಐಟೆಲ್ 5ಜಿ ಮೊಬೈಲ್ ಬೆಲೆಯಲ್ಲಿ ಇಳಿಕೆ!

ದೇಶಿಯ ಸ್ಮಾರ್ಟ್‌ಫೋನ್ ಮಾರುಕಟ್ಟೆಯಲ್ಲಿ ಐಟೆಲ್ ಸಂಸ್ಥೆಯು ಕಡಿಮೆ ಬೆಲೆಯ ಮೊಬೈಲ್ ಅನ್ನು ಪರಿಚಯಿಸಿ ಗ್ರಾಹಕರಿಗೆ ತಲುಪಿದೆ. ಹಾಗೆಯೇ ಐಟೆಲ್ ಕಂಪನಿಯು ಇತ್ತೀಚಿಗೆ ಕಡಿಮೆ ಬೆಲೆಯಲ್ಲಿ ಐಟೆಲ್ P55 5Gಸ್ಮಾರ್ಟ್‌ಫೋನ್ ಪರಿಚಯಿಸಿದ್ದು, ಮತ್ತಷ್ಟು ಗ್ರಾಹಕರನ್ನು ಆಕರ್ಷಿಸಿದೆ. ಸದ್ಯ ಈ ಮೊಬೈಲ್ ಜನಪ್ರಿಯ ಅಮೆಜಾನ್ ವೆಬ್‌ಸೈಟ್‌ನಲ್ಲಿ ಭಾರೀ ರಿಯಾಯಿತಿ ಪ್ರೈಸ್ಟ್ಯಾಗ್ ನಲ್ಲಿ ಕಾಣಿಸಿಕೊಂಡಿದೆ. ಹೌದು, ಇ ಕಾಮರ್ಸ್ ದೈತ್ಯ ಅಮೆಜಾನ್ ತಾಣದಲ್ಲಿ ಐಟೆಲ್ P55 5G ಮೊಬೈಲ್ ಶೇ. 26% ರಷ್ಟು ರಿಯಾಯಿತಿ ಪಡೆದಿದೆ. ಈ ಫೋನ್ 128GB ವೇರಿಯಂಟ್ ಆಯ್ಕೆಯ ಬೆಲೆಯು 13,499ರೂ. ಆಗಿದ್ದು, ಸದ್ಯ ಗ್ರಾಹಕರು ಅಮೆಜಾನ್ ಪ್ಲಾಟ್‌ಫಾರ್ಮ್ ನಲ್ಲಿ 9,999 ರೂ. ಗಳಿಗೆ ಖರೀದಿ ಮಾಡಬಹುದು. ಇದರ ಜೊತೆಗೆ ಇತರೆ ಕೆಲವು ಡಿಸ್ಕೌಂಟ್ ಸಹ ದೊರೆಯುತ್ತವೆ. ಅಲ್ಲದೇ ಈ ಮೊಬೈಲ್ 5000mAh ಸಾಮರ್ಥ್ಯದ ಬ್ಯಾಟರಿ ಬ್ಯಾಕ್‌ಅಪ್ ಸೌಲಭ್ಯ ಸಹ ಹೊಂದಿದ್ದು, ಇದರ ಮೊದಲ ಕ್ಯಾಮೆರಾವು 50 ಮೆಗಾ ಪಿಕ್ಸಲ್ ಸೆನ್ಸಾರ್ ಪಡೆದುಕೊಂಡಿದೆ. ಇನ್ನು ಈ ಮೊಬೈಲ್ ಮಿಂಟ್ ಗ್ರೀನ್ ಮತ್ತು ಗ್ಯಾಲಕ್ಸಿ ಬ್ಲೂ ಬಣ್ಣದ ಆಯ್ಕೆಯಲ್ಲಿ ಖರೀದಿ ಮಾಡಬಹುದಾಗಿದೆ. ಐಟೆಲ್ ಕ55 5ಜಿ ಮೊಬೈಲ್ 1612 x 720 ಪಿಕ್ಸೆಲ್ ಸ್ಕ್ರೀನ್ ರೆಸಲ್ಯೂಶನ್ ಸಾಮರ್ಥ್ಯದ 6.6 ಇಂಚಿನ ಹೆಚ್ಡಿ ಡಿಸ್ಪ್ಲೇ ಅನ್ನು ಪಡೆದಿದೆ. ಇನ್ನು ಈ ಡಿಸ್ಪ್ಲೇ ವಾಟರ್ ಡ್ರಾಪ್ ನಾಚ್ ಶೈಲಿಯನ್ನು ಪಡೆದಿದ್ದು, ಈ ಡಿಸ್ಪ್ಲೇ ಪ್ರತಿ ಇಂಚಿನ ಪಿಕ್ಸಲ್ ಸಾಂದ್ರತೆಯು 267 PPIಸಾಮರ್ಥ್ಯದಲ್ಲಿ ಇದೆ.

ಐಟೆಲ್ ಸಂಸ್ಥೆಯ ಈ ಮೊಬೈಲ್ ಆಕ್ಟಾ ಕೋರ್ ಮೀಡಿಯಾ ಟೆಕ್ ಡೈಮೆನ್ಸಿಟಿ 6080 6nm ಪ್ರೊಸೆಸರ್ ಪಡೆದಿದ್ದು, ಇದಕ್ಕೆ ಪೂರಕವಾಗಿ ಆಂಡ್ರಾಯ್ಡ್ 13 ಓಎಸ್ ಸಪೋರ್ಟ್ ಕೂಡಾ ಪಡೆದಿದೆ.

## ಕಷಾಯ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಸುಮಾರು 1 ಇಂಚಿನ ಶುಂಠಿ ತುಂಡು, ಸುಮಾರು 8-10 ಕರಿಮೆಣಸು, 8-10 ತುಳಸಿ ಎಲೆಗಳು, ಹಸಿರು ಅರಿಶಿನ 1 ತುಂಡು, 1 ದಾಲ್ಚಿನ್ನಿ ಕಡ್ಡಿ, 1 ದೊಡ್ಡ ತುಂಡು ಬೆಲ್ಲ, 1 ಗ್ಲಾಸ್ ನೀರು

### ಮಾಡುವ ವಿಧಾನ

ಕಷಾಯವನ್ನು ತಯಾರಿಸಲು, ಮೊದಲು ಒಂದು ಪಾತ್ರೆಯಲ್ಲಿ ನೀರನ್ನು ಕುದಿಸಿ. ಅದಕ್ಕೆ ತುಳಸಿ ಎಲೆಗಳು, ಕರಿಮೆಣಸು ಮತ್ತು ಹಸಿರು ಅರಿಶಿನ ಸೇರಿಸಿ. ನೀರಿಗೆ ದಾಲ್ಚಿನ್ನಿ, ಬೆಲ್ಲ ಮತ್ತು ಶುಂಠಿ ಸೇರಿಸಿ ಕುದಿಯಲು ಬಿಡಿ. ನೀರು ಅರ್ಧ ಕುದಿಯುವವರೆಗೆ ಮತ್ತು ಅದರ ಬಣ್ಣ ಬದಲಾಗುವವರೆಗೆ ನೀವು ಅದನ್ನು ಸುಮಾರು 20 ನಿಮಿಷಗಳ ಕಾಲ ಕುದಿಸಬೇಕು. ಇದು ಸುಮಾರು ಅರ್ಧ ಗ್ಲಾಸ್ಗೆ ಕಡಿಮೆಯಾದ ನಂತರ, ಅದನ್ನು ಮಗ್ಗೆ ಸೋಸಿ ಬಿಸಿಯಾಗಿ ಕುಡಿಯಿರಿ. ಈ ಕಷಾಯವನ್ನು 3-4 ದಿನಗಳವರೆಗೆ ನಿರಂತರವಾಗಿ ಕುಡಿಯಿರಿ. ಇದರಿಂದ ನೆಗಡಿ ಮತ್ತು ಕೆಮ್ಮಿನ ಸಮಸ್ಯೆ ನಿವಾರಣೆಯಾಗುತ್ತದೆ.

# ರಾಕುಲ್ ಪ್ರೀತ್ ಸಿಂಗ್ ಮದುವೆಯಂತೆ?



ಅನೇಕ ಬಾಲಿವುಡ್ ಸೆಲೆಬ್ರಿಟಿಗಳು 2024 ರಲ್ಲಿ ಮದುವೆಯಾಗಲು ಸಜ್ಜಾಗಿದ್ದಾರೆ. ಅಮೀರ್ ಖಾನ್ ಪುತ್ರಿ ಇರಾ ಖಾನ್ ತನ್ನ ಬಾಯ್ ಫ್ರೆಂಡ್ ನೂಪುರ್ ಶಿಖರೆ ಜೊತೆ ಜನವರಿ ಮೊದಲ ವಾರದಲ್ಲಿ ದಾಂಪತ್ಯ ಜೀವನಕ್ಕೆ ಕಾಲಿಡಲಿದ್ದಾರೆ. ಇದೀಗ ಮತ್ತೊಂದು ಜೋಡಿ ಇದೇ ವರ್ಷ ಮದುವೆಯಾಗುವ ಸುದ್ದಿ ಮುನ್ನೆಲೆಗೆ ಬಂದಿದೆ. ಈ ಜೋಡಿ ಬೇರೆ ಯಾರೂ ಅಲ್ಲರಾಕುಲ್ ಪ್ರೀತ್ ಸಿಂಗ್ಮತ್ತು ಜಾಕಿ ಭಗ್ನಾನಿ. ಬಹುಭಾಷಾ ನಟಿ ರಾಕುಲ್ ಪ್ರೀತ್ ಸಿಂಗ್ ಸದ್ಯದಲ್ಲಿಯೇ ಮದುವೆಯಾಗಲಿದ್ದಾರೆ ಎಂಬ ಗಾಳಿ ಸುದ್ದಿಯೊಂದು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ. ಮದುವೆಯ ದಿನಾಂಕಕ್ಕೆ ಸಂಬಂಧಿಸಿದ ಸುದ್ದಿಗಳು ಕೂಡ ಸಖತ್ ಸುದ್ದು ಮಾಡುತ್ತಿದ್ದು ನೆಟಿಜನ್ಸ್, ಫ್ಯಾನ್ಸ್, ಸಿನಿ ತಾರೆಯರು ಮುಂಚಿತವಾಗಿ ವಿಶ್ ಮಾಡಲಾಂಭಿಸಿದ್ದಾರೆ. ಬಹು ದಿನಗಳಿಂದ ಪ್ರೀತಿಸುತ್ತಿರುವ ಬಾಲಿವುಡ್ ನಿರ್ಮಾಪಕ ಜಾಕಿ ಭಗ್ನಾನಿ ಜೊತೆ ರಾಕುಲ್ ಅವರು ಮದುವೆಯಾಗಲಿದ್ದಾರೆ ಎಂಬ ಸುದ್ದಿ ಇದ್ದು, ಇವರ ಮದುವೆ ಫೆಬ್ರವರಿ 22 ರಂದು ಗೋವಾದ ಜನಪ್ರಿಯ ರೆಸಾರ್ಟ್‌ನಲ್ಲಿ ನಡೆಯಲಿದೆ ಎಂಬ ಮಾತು ಕೂಡ ಚಾಲ್ತಿಯಲ್ಲಿದೆ.ವರದಿಗಳ ಪ್ರಕಾರ, ರಾಕುಲ್ ಮತ್ತು ಜಾಕಿ ಶೀಘ್ರದಲ್ಲೇ ಮದುವೆಯಾಗಲು ಯೋಜಿಸುತ್ತಿದ್ದಾರೆ. ಅಷ್ಟೇ ಅಲ್ಲದೆ, ಮದುವೆಯ ದಿನಾಂಕವೂ ಬಹಿರಂಗವಾಗಿದೆ.

ಹಿಂದೂಸ್ತಾನ್ ಟೈಮ್ಸ್ ವರದಿ ಪ್ರಕಾರ, ಫೆಬ್ರವರಿಯಲ್ಲಿ ರಾಕುಲ್ ಮತ್ತು ಜಾಕಿ ಗೋವಾದಲ್ಲಿ ವಿವಾಹವಾಗಲಿದ್ದಾರೆ. ವರದಿಯ ಪ್ರಕಾರ, ರಾಕುಲ್ ಮತ್ತು ಜಾಕಿ ಫೆಬ್ರವರಿ 22 ರಂದು ಗೋವಾದಲ್ಲಿ ಮದುವೆಯಾಗುತ್ತಿದ್ದಾರೆ. ಈ ವಿವಾಹ ಕಾರ್ಯಕ್ರಮದಲ್ಲಿ ಖಾಸಗಿ ವ್ಯಕ್ತಿಗಳು ಮಾತ್ರ ಭಾಗವಹಿಸಲಿದ್ದಾರೆ ಎಂದು ತಿಳಿದುಬಂದಿದೆ. ಅಂದಹಾಗೆ, ರಾಕುಲ್ ಮತ್ತು ಜಾಕಿ ಮದುವೆಯ ದಿನಾಂಕದ ಬಗ್ಗೆ ವದಂತಿಗಳು ಹುಟ್ಟಿಕೊಂಡಿರುವುದು ಇದೇ ಮೊದಲಲ್ಲ. ಕಳೆದ ವರ್ಷವೂ ಇದೇ ಸುದ್ದಿ ಎಲ್ಲರ ಗಮನ ಸೆಳೆದಿತ್ತು. ಆದರೆ ನಂತರ ನಟಿ ಅದನ್ನು ನಿರಾಕರಿಸಿದ್ದರು. ಇನ್ನು ರಾಕುಲ್ ಪ್ರೀತ್ ಸಿಂಗ್ ಮತ್ತು ಜಾಕಿ ಭಗ್ನಾನಿ 2021 ರಿಂದ ಪರಸ್ಪರ ಡೇಟಿಂಗ್ ಮಾಡುತ್ತಿದ್ದಾರೆ. ಕನ್ನಡದ 'ಗಿಲ್ಲಿ' ಚಿತ್ರದ ಮೂಲಕ ನಟನೆಗೆ ಪಾದಾರ್ಪಣೆ ಮಾಡಿದ ರಾಕುಲ್ ಪ್ರೀತ್ ಸಿಂಗ್, ಬಳಿಕ ಟಾಲಿವುಡ್ಗೂ ಕಾಲಿಟ್ಟರು. 'ವೆಂಕಟಾದ್ರಿ ಎಕ್ಸ್ಪ್ರೆಸ್' ಇವರ ನಟನೆಯ ಮೊದಲ ತೆಲುಗು ಚಿತ್ರವಾಗಿದೆ. ನಟಿಸಿದ ಮೊದಲ ಚಿತ್ರವೇ ಯಶಸ್ಸು ಕಂಡಿದ್ದರಿಂದ ಅವರನ್ನು ಹುಡುಕಿಕೊಂಡು ದೊಡ್ಡ ದೊಡ್ಡ ನಿರ್ಮಾಪಕರೇ ಬರತೊಡಗಿದರು. ಹಾಗಾಗಿ ಟಾಲಿವುಡ್ನಲ್ಲಿಯೇ ನೆರೆಯೂರಿಸಿದ ರಾಕುಲ್, 'ಲೌಕ್ಯಂ', 'ನನ್ನಕು ಪ್ರೇಮತೋ', 'ಧ್ರುವ', 'ಕಿಕ್' 2 ಸಿನಿಮಾಗಳ ಮೂಲಕ ಸೌತ್ನ ಟಾಪ್ ನಟಿಯರ ಪಟ್ಟಿಗೆ ಸೇರಿಕೊಂಡರು. ರಕುಲ್ ಸದ್ಯ ತೆಲುಗಿನ ಜೊತೆಗೆ ಬಾಲಿವುಡ್ನಲ್ಲಿ ಬ್ಯುಸಿಯಾಗಿದ್ದಾರೆ. ಅವರ ಅಭಿನಯದ 'ಅಯಲನ್' ಚಿತ್ರ ಸಂಕ್ರಾಂತಿ ಉಡುಗೊರೆಯಾಗಿ ಬಿಡುಗಡೆಯಾಗಲಿದೆ.

# ರೋಗ ನಿರೋಧಕ ಶಕ್ತಿ ಹೆಚ್ಚಿಸಲು ಸಲಹೆ




ಹೆಲ್ತ್ ಟಿಪ್ಸ್

ವಿವಿಧ ಕಾಯಿಲೆಗಳ ವಿರುದ್ಧ ಹೋರಾಡಲು ಹಾಗೂ ಅಲರ್ಜಿ ವಿರುದ್ಧ ಹೋರಾಡಲು ರೋಗನಿರೋಧಕ ಶಕ್ತಿ ಬಹಳ ಮುಖ್ಯ. ವಿಟಮಿನ್ ಸಿ ಮತ್ತು ಡಿ ಹೊರತುಪಡಿಸಿ ಸತು ರೋಗ ನಿರೋಧಕ ಶಕ್ತಿ ಹೆಚ್ಚಿಸಲು ನೆರವಾಗುತ್ತದೆ. ರೋಗನಿರೋಧಕ ವ್ಯವಸ್ಥೆಗೆ ಅಗತ್ಯವಾದ ಖನಿಜವಾಗಿದೆ. ಸತು ಮಾನವ ದೇಹದಲ್ಲಿನ ಅನೇಕ ಜೈವಿಕ ಕಾರ್ಯಗಳೊಂದಿಗೆ ಸಂಬಂಧ ಹೊಂದಿದೆ. ದೇಹದಲ್ಲಿನ 300 ಕ್ಕೂ ಹೆಚ್ಚು ಕಿಣ್ವಗಳಿಗೆ ಸತುವು ಮುಖ್ಯವಾಗಿದೆ. ಇದು ಪ್ರೋಟೀನ್ ಸಂಶ್ಲೇಷಣೆ, ಗಾಯ ಗುಣಪಡಿಸುವುದು, ಡಿಎನ್ಎ ಸಂಶ್ಲೇಷಣೆ ಮತ್ತು ಕೋಶ ವಿಭಜನೆಯಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತದೆ. ರುಚಿ ಮತ್ತು ವಾಸನೆಯ ಬಗ್ಗೆ ಸರಿಯಾದ ತಿಳುವಳಿಕೆಗೂ ಇದು ಅಗತ್ಯವಾಗಿರುತ್ತದೆ.ಸತು, ಅಗತ್ಯವಾದ ಪೋಷಕಾಂಶವಾಗಿದ್ದರೂ, ಮಾನವ ದೇಹವು ತನ್ನದೇ ಆದ ಸತು ಉತ್ಪಾದಿಸಲು ಸಾಧ್ಯವಿಲ್ಲ. ಆದ್ದರಿಂದ, ಇದನ್ನು ಆಹಾರದ ಮೂಲಕ ಪಡೆಯಬೇಕು. ಹೆಚ್ಚಿನ ಭಾರತೀಯರು ಸತುವಿನ ಕೊರತೆ ಎದುರಿಸುತ್ತಿದ್ದಾರೆ. ಸತು ಹೆಚ್ಚಿರುವ ಆಹಾರ ಸೇವನೆ ಮಾಡುವುದು ಬಹಳ ಮುಖ್ಯ. ಮಾಂಸ ಮತ್ತು ಕೋಳಿಗಳಲ್ಲಿ ಇದ್ರ ಪ್ರಮಾಣ ಹೆಚ್ಚಿದೆ. ಸಸ್ಯಹಾರಕ್ಕೆ ಹೋಲಿಸಿದ್ರೆ, ಮಾಂಸಹಾರದಲ್ಲಿ ಸತು ಹೆಚ್ಚಿರುತ್ತದೆ. ಧಾನ್ಯದ ಬ್ರೆಡ್ಗಳು, ಸಿರಿಧಾನ್ಯಗಳು, ದ್ವಿದಳ ಧಾನ್ಯಗಳು ಇತ್ಯಾದಿಗಳಲ್ಲಿ ಸತು ಕಂಡು ಬರುತ್ತದೆ. ಕೆಲವು ಆಹಾರ ತಯಾರಿಕೆ ವಿಧಾನಗಳಿಂದಲೂ ಸತುವನ್ನು ಹೆಚ್ಚಿಸಿಕೊಳ್ಳಬಹುದು. ಬೀನ್ಸ್, ಧಾನ್ಯಗಳು ಮತ್ತು ಬೀಜಗಳನ್ನು ನೀರಿನಲ್ಲಿ ನೆನೆಸಿ ಬೇಯಿಸುವ ಮೊದಲು ಮೊಳಕೆ ಬರುವಂತೆ ನೋಡಿಕೊಳ್ಳಬೇಕು. ಮೊಳಕೆ ಬರುವ ಧಾನ್ಯಗಳಲ್ಲಿ ಸತು ಹೆಚ್ಚಿರುತ್ತದೆ. ವಾಲ್ನಟ್ಸ್, ಬಾದಾಮಿ, ಗೋಡಂಬಿ, ಸೂರ್ಯಕಾಂತಿ, ಕುಂಬಳಕಾಯಿ, ಕಲ್ಲಂಗಡಿ ಬೀಜಗಳು, ಹಾಲು ಮತ್ತು ಡೈರಿ ಉತ್ಪನ್ನಗಳಲ್ಲಿ ಸ್ವಲ್ಪ ಪ್ರಮಾಣದ ಸತುವಿರುತ್ತದೆ. ತಾಜಾ ಹಣ್ಣುಗಳು ಮತ್ತು ತರಕಾರಿಗಳು ಸಾಮಾನ್ಯವಾಗಿ ಸತುವಿನ ಪ್ರಮಾಣ ಕಡಿಮೆಯಿರುತ್ತದೆ. ಆದಾಗ್ಯೂ, ದಾಳಿಂಬೆ, ಪೇರಲ ಮತ್ತು ಅಣಬೆ, ಪಾಲಕ, ಕೋಸುಗಡ್ಡೆಗಿಂತ ತಾಜಾ ಹಣ್ಣಿನಲ್ಲಿ ಹೆಚ್ಚಿನ ಸತುವಿರುತ್ತದೆ. ಹೆಚ್ಚಿನ ಭಾರತೀಯರು ಸಸ್ಯಹಾರಿಗಳಾಗಿರುವುದ್ರಿಂದ ಸತು ಕೊರತೆ ವ್ಯಾಪಕವಾಗಿದೆ.

# 2024ರಲ್ಲಿ ಯುಪಿಐ ಪಾವತಿಯಲ್ಲಿ 6 ಹೊಸ ನಿಯಮಗಳ ಸೇರ್ಪಡೆ!




2024ರಲ್ಲಿ ಯುಪಿಐ ಪಾವತಿಗೆ ಸಂಬಂಧಿಸಿದ ಕೆಲವು ನಿಯಮಗಳು ಬದಲಾಗಲಿವೆ. ಯುಪಿಐ ಇಂದು ನಮ್ಮ ದೈನಂದಿನ ವಹಿವಾಟಿನ ಬಹುಮುಖ್ಯ ಭಾಗವಾಗಿರುವ ಕಾರಣ ಇದರಲ್ಲಿನ ಬದಲಾವಣೆಗಳ ಬಗ್ಗೆ ಮಾಹಿತಿ ಹೊಂದಿರೋದು ಅಗತ್ಯ. 2024ರಿಂದ ಯುಪಿಐ ಪಾವತಿಯಲ್ಲಿನ ಈ 6 ಬದಲಾವಣೆಗಳ ಬಗ್ಗೆ ಮಾಹಿತಿ ಹೊಂದಿರೋದು ಅಗತ್ಯ.

**ಯುಪಿಐ ಈ 6 ನಿಯಮಗಳಲ್ಲಿ ಬದಲಾವಣೆ:** 1. ಒಂದು ವರ್ಷಕ್ಕಿಂತ ಹೆಚ್ಚು ಸಮಯದಿಂದ ಕಾರ್ಯನಿರ್ವಹಿಸದ ಯುಪಿಐ ಐಡಿಗಳನ್ನು ನಿಷ್ಕ್ರಿಯಗೊಳಿಸುವಂತೆ ಪೇಟಿಎಂ, ಗೂಗಲ್ ಪೇ, ಫೋನ್ ಪೇ ಮುಂತಾದ ಪಾವತಿ ಅಪ್ಲಿಕೇಷನ್ ಗಳಿಗೆ ರಾಷ್ಟ್ರೀಯ ಪಾವತಿಗಳ ನಿಗಮ ನಿರ್ದೇಶನ ನೀಡಿದೆ. 2024ರ ಜನವರಿ 1 ರಿಂದ ಇಂಥ ಯುಪಿಐ ಐಡಿಗಳನ್ನು ನಿಷ್ಕ್ರಿಯಗೊಳಿಸುವಂತೆ ಎನ್ ಪಿಸಿಐ ಸೂಚಿಸಿದೆ.

2.ಆಸ್ಪತ್ರೆ ಹಾಗೂ ಶಿಕ್ಷಣ ಸಂಸ್ಥೆಗಳಿಗೆ ಪಾವತಿಸಲು ಯುಪಿಐ ವಹಿವಾಟಿನ ಮಿತಿಯನ್ನು ಭಾರತೀಯ ರಿಸರ್ವ್ ಬ್ಯಾಂಕ್ (ಆರ್ ಬಿಐ) ಈಗಿರುವ 1ಲಕ್ಷ ರೂ.ನಿಂದ 5ಲಕ್ಷ ರೂ.ಗೆ ಏರಿಕೆ ಮಾಡಿದೆ.

3.ಬೇಟಾ ಫೇಸ್ ಅಡಿಯಲ್ಲಿ 'ಸೆಕೆಂಡರಿ ಮಾರುಕಟ್ಟೆಗೆ ಯುಪಿಐ' ಪರಿಚಯಿಸಲು ಎನ್ ಪಿಸಿಐ ಘೋಷಣೆ ಮಾಡಿತ್ತು.

4. ದೇಶದಲ್ಲಿ ಹೆಚ್ಚುತ್ತಿರುವ ಆನ್ ಲೈನ್ ವಂಚನೆಗಳಿಗೆ ಕಡಿವಾಣ ಹಾಕಲು ಸರ್ಕಾರ ಮುಂದಾಗಿದೆ. ಮೊದಲ ಬಾರಿಗೆ ಇಬ್ಬರು ವ್ಯಕ್ತಿಗಳ ನಡುವೆ ಯುಪಿಐ ವಹಿವಾಟು ನಡೆಯುವಾಗ ನಿರ್ದಿಷ್ಟ ಮೊತ್ತಕ್ಕೆ ಹೆಚ್ಚಿನದಕ್ಕೆ ಕನಿಷ್ಠ ಸಮಯ ಮಿತಿ ವಿಧಿಸಲು ಸರ್ಕಾರ ಯೋಜನೆ ರೂಪಿಸಿದೆ. 2 ಸಾವಿರ ರೂ. ಮೀರಿದ ಮೊತ್ತವನ್ನು ಮೊದಲ ಬಾರಿಗೆ ಡಿಜಿಟಲ್ ಪಾವತಿ ವ್ಯವಸ್ಥೆ ಬಳಸಿ ವರ್ಗಾವಣೆ ಮಾಡುವಾಗ 4 ಗಂಟೆಗಳ ಸಮಯಾವಧಿ ನಿಗದಿಪಡಿಸುವ ಬಗ್ಗೆ ಯೋಚಿಸಲಾಗಿದೆ.

5.ಆರ್ ಬಿಐ ದೇಶಾದ್ಯಂತ ಯುಪಿಐ ಎಟಿಎಂಗಳನ್ನು ಅಳವಡಿಸಲು ಯೋಜನೆ ರೂಪಿಸಿದೆ. ಕ್ಯುಆರ್ ಕೋಡ್ ಸ್ಕ್ಯಾನ್ ಮಾಡುವ ಮೂಲಕ ನಗದು ವಿತ್ ಡ್ರಾ ಮಾಡುವ ಸೌಲಭ್ಯ ಪರಿಚಯಿಸಲು ಯೋಚಿಸಿದೆ.

ಯುಪಿಐ-ಎಟಿಎಂ ಸೇವೆಯನ್ನು ಇಂಟರ್ ಆಪರೇಬಲ್ ಕಾರ್ಡ್ ರಹಿತ ನಗದು ವಿತ್ ಡ್ರಾವಲ್ ಎಂದು ಕರೆಯಲಾಗುತ್ತದೆ. ಭಾರತೀಯ ರಾಷ್ಟ್ರೀಯ ಪಾವತಿಗಳ ನಿಗಮದ (ಎನ್ ಪಿಸಿಐ) ಸಹಭಾಗಿತ್ವದಲ್ಲಿ ಹಿಟ್ಯಾಚಿ ಪೇಮೆಂಟ್ ಸರ್ವೀಸ್ ಭಾರತದ ಮೊದಲ ಯುಪಿಐ-ಎಟಿಎಂ ಅನ್ನು ಸೆಪ್ಟೆಂಬರ್ 5ರಂದು ಬಿಡುಗಡೆಗೊಳಿಸಿತ್ತು. ಈ ಯಂತ್ರದ ಮೂಲಕ ನಿರ್ದಿಷ್ಟ ಬ್ಯಾಂಕ್ ಗಳ ಗ್ರಾಹಕರು 'ಕ್ಯುಆರ್ ಆಧಾರಿತ ನಗದುರಹಿತ ವಿತ್ ಡ್ರಾ' ಕೂಡ ಮಾಡಬಹುದಾಗಿದೆ.

6.Hello UPIಸೇವೆ. ಇದು ಧ್ವನಿ ಆಧಾರಿತ ಯುಪಿಐ ಹಣ ವರ್ಗಾವಣೆ ಸೌಲಭ್ಯವಾಗಿದ್ದು, ಮೊಬೈಲ್ ಸೇರಿದಂತೆ ಡಿಜಿಟಲ್ ಬಳಕೆ ಬಗ್ಗೆ ಹೆಚ್ಚಿನ ಜ್ಞಾನ ಹೊಂದಿಲ್ಲದವರಿಗೆ ಹಾಗೂ ಹಿರಿಯ ನಾಗರಿಕರಿಗೆ ದೊಡ್ಡ ಪ್ರಮಾಣದಲ್ಲಿ ನೆರವಾಗಲಿದೆ. ಇದರ ಮೂಲಕ ಬಳಕೆದಾರರು ಬರಹ (ಟೆಕ್ಸ್ಟ್) ಆಧಾರಿತ ಇನ್ ಪುಟ್ ಬದಲು ಧ್ವನಿ ಬಳಸಿ ಕಮಾಂಡ್ ಗಳನ್ನು ನೀಡುವ ಮೂಲಕ ಹಣವನ್ನು ಶೀಘ್ರದಲ್ಲಿ ವರ್ಗಾಯಿಸಬಹುದಾಗಿದೆ.

# ಬಿಳಿ ಕಲೆ ಹೋಗಲಾಡಿಸಲು ಮನೆಮದ್ದು




ಬಿಳಿ ಕಲೆ ಚರ್ಮದ ಒಂದು ಕಾಯಿಲೆ. ಇದರಿಂದ ನೋವು, ತುರಿಕೆ ಯಾವುದೂ ಆಗುವುದಿಲ್ಲ. ದೇಹದ ವಿವಿಧ ಭಾಗಗಳಲ್ಲಿ ವಿವಿಧ ಆಕಾರಗಳಲ್ಲಿ ಇದು ಕಾಣಿಸಿಕೊಳ್ಳುತ್ತದೆ. ಕ್ಯಾಲ್ಸಿಯಂ ಕೊರತೆಯಿಂದ ಈ ಕಾಯಿಲೆ ಬರುತ್ತದೆ. ಇದಕ್ಕೆ ಭಯಪಡುವ ಅಗತ್ಯವಿಲ್ಲ. ಕ್ಯಾಲ್ಸಿಯಂ ಮಾತ್ರೆ ಅಥವಾ ಕ್ಯಾಲ್ಸಿಯಂ ಇರುವ ಯಾವುದಾದ್ರೂ ಪದಾರ್ಥಗಳನ್ನು ಸೇವಿಸಿ, ಕಾಯಿಲೆಯಿಂದ ಮುಕ್ತಿ ಹೊಂದಬಹುದು. ಬಿಳಿ ಕಲೆ ಕಡಿಮೆಯಾಗುವಂತಹದ್ದು. ಆದ್ರೆ ತಾಳ್ಮೆ ಅಗತ್ಯ. ಕೆಲವು ಉಪಾಯಗಳಿಂದ ಬಿಳಿ ಕಲೆಯನ್ನು ತೆಗೆದು ಹಾಕಬಹುದು. ಅದರ ಜೊತೆಯಲ್ಲಿ ಕೆಲವೊಂದು ಅಂಶಗಳ ಬಗ್ಗೆ ಗಮನ ಇಡಬೇಕಾಗುತ್ತದೆ. ಆಹಾರದಲ್ಲಿ ಜಾಸ್ತಿ ಉಪ್ಪನ್ನು ಬಳಸಬೇಡಿ. ಹಾಗೇ ಹುಳಿ ಪದಾರ್ಥಗಳಿಂದ ದೂರ ಇರಿ. ಉಪ್ಪಿನಕಾಯಿ, ವಿಟಮಿನ್ ಸಿ ಜೀವಸತ್ವವಿರುವ ಪದಾರ್ಥಗಳನ್ನು ಅಷ್ಟಾಗಿ ಸೇವಿಸಬೇಡಿ.

ಹಾಲಿನ ಪದಾರ್ಥಗಳಿಂದ ದೂರ ಇರಿ. ಮಿಠಾಯಿ, ಮೊಸರನ್ನು ಒಟ್ಟಿಗೆ ಸೇವಿಸಬೇಡಿ. ಕರಿದ ತಿಂಡಿ, ಮಾಂಸ, ಮೀನಿನಿಂದ ದೂರವಿರಿ ತೆಂಗಿನ ಕಾಯಿ ಬಿಳಿ ಕಲೆ ಹೋಗಲಾಡಿಸಲು ಸಹಕಾರಿ. ಹಾಗಾಗಿ ಪ್ರತಿದಿನ ಇದರ ಸೇವನೆ ಮಾಡುವುದು ಉತ್ತಮ.

ಆಹಾರದಲ್ಲಿ ಬೆಳ್ಳುಳ್ಳಿ ಬಳಕೆಯನ್ನು ಜಾಸ್ತಿ ಮಾಡಬೇಕು. ಬೆಳ್ಳುಳ್ಳಿ ರಸವನ್ನು ಬಿಳಿ ಕಲೆಗೆ ಹಚ್ಚಿಕೊಳ್ಳುತ್ತ ಬಂದರೆ ಕಲೆ ಕ್ರಮೇಣ ಕಡಿಮೆಯಾಗುತ್ತದೆ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

# ರಾಶಿ ಭವಿಷ್ಯ

**ಮೇಷ:** ಮಿತ್ರರಲ್ಲಿ ಸ್ನೇಹ ವೃದ್ಧಿ, ಅನಿರೀಕ್ಷಿತ ದ್ರವ್ಯಲಾಭ, ದೂರ ಪ್ರಯಾಣ, ಶತ್ರು ಬಾಧೆ.

**ವೃಷಭ:** ಕಾರ್ಯಸಾಧನೆಗಾಗಿ ತಿರುಗಾಟ, ಪರಸ್ಥಳ ವಾಸ, ಉದ್ಯೋಗದಲ್ಲಿ ಪ್ರಗತಿ, ಕುಟುಂಬದಲ್ಲಿ ನೆಮ್ಮದಿಯ ವಾತಾವರಣ.

**ಮಿಥುನ:** ಯತ್ನ ಕಾರ್ಯಭಂಗ, ಮನಕ್ಲೇಷ, ಸಾಲಬಾಧೆ, ಅಶಾಂತಿ, ಹಣದ ತೊಂದರೆ.

**ಕಟಕ:** ಕೆಲಸ ಕಾರ್ಯಗಳಲ್ಲಿ ಜಯ, ಸ್ತ್ರೀಯಿಂದ ಲಾಭ, ಅಧಿಕಾರಿಗಳಲ್ಲಿ ಕಲಹ, ಮಾನಸಿಕ ಒತ್ತಡ.

**ಸಿಂಹ:** ವಾಹನದಿಂದ ತೊಂದರೆ, ವ್ಯಾಪಾರದಲ್ಲಿ ನಷ್ಟ, ಷೇರು ಮಾರುಕಟ್ಟೆಯಲ್ಲಿ ಲಾಭ, ಸಂಧ್ಯಾ ಸಮಯದಲ್ಲಿ ಲಾಭ.

**ಕನ್ಯಾ:** ಚೋರಭಯ, ಕುತಂತ್ರದಿಂದ ಹಣ ಸಂಪಾದನೆ, ಮೂಗಿನ ಮೇಲೆ ಕೋಪ, ಗುರುಗಳಿಂದ ಬೋಧನೆ.

**ತುಲಾ:** ಭೂ ಸಂಬಂಧ ವಿಚಾರದಲ್ಲಿ ವಿವಾದ, ಪರರ ಮಾತಿಗೆ ಕಿವಿ ಕೊಡಬೇಡಿ, ಕೆಲಸ ಕಾರ್ಯಗಳಲ್ಲಿ

**ವೃಶ್ಚಿಕ:** ಅಧಿಕಾರಿಗಳಿಂದ ಕಿರುಕುಳ, ಸ್ಥಾನ ಭ್ರಷ್ಟತ್ವ, ಧನವ್ಯಯ, ಸಜ್ಜನರ ವಿರೋಧ, ಅಲ್ಪ ಲಾಭಅಧಿಕ ಖರ್ಚು.

**ಧನಸ್ಸು:** ಕೆಲಸ ಕಾರ್ಯದಲ್ಲಿ ವಿಳಂಬ, ಮನಸ್ಸಿನಲ್ಲಿ ಭಯಭೀತಿ, ಎಲ್ಲಿ ಹೋದರು ಅಶಾಂತಿ, ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಖರ್ಚು.

**ಮಕರ:** ಸ್ಥಿರಾಸ್ತಿ ಸಂಪಾದನೆ, ಶತ್ರುಗಳ ನಾಶ, ಉದ್ಯೋಗದಲ್ಲಿ ಬಡ್ತಿ, ಅನ್ಯರಿಗೆ ಉಪಕಾರಮಾಡುವಿರಿ.

**ಕುಂಭ:** ವಿನಾಕಾರಣ ದ್ವೇಷ, ಮಾತಾ-ಪಿತೃಗಳ ಸೇವೆ, ಕೆಲಸ ಕಾರ್ಯಗಳನ್ನ ಮಾಡುವಿರಿ.

**ಮೀನ:** ಅಪಕೀರ್ತಿ, ಪಾಪಕಾರ್ಯಾಸಕ್ತಿ, ವಿವಾಹಕ್ಕೆ ಅಡಚಣೆ, ಹಿತ ಶತ್ರುಗಳಿಂದ ತೊಂದರೆ, ಮನಕ್ಲೇಷ.

# ವಿಶ್ವ ಅಂತರ್ಮುಖಿ ದಿನಾಚರಣೆ

ವಿಶ್ವ ಅಂತರ್ಮುಖಿ ದಿನವು ಅಂತರ್ಮುಖಿ ವ್ಯಕ್ತಿಗಳ ಅರಿವು ಮತ್ತು ತಿಳುವಳಿಕೆಯನ್ನು ಹೆಚ್ಚಿಸುವ ಸಲುವಾಗಿ ಜನವರಿ 2 ರಂದು ಆಚರಿಸಲಾಗುತ್ತದೆ. ಇದನ್ನು 2011 ರಲ್ಲಿ ಸ್ಥಾಪಿಸಲಾಯಿತು ಜೆನ್ ಗ್ರ್ಯಾನೆಮನ್, ಜನಪ್ರಿಯ ವೆಬ್‌ಸೈಟ್ ಇಂಟ್ರೋವರ್ಟ್, ಡಿಯರ್ ನ ಸೃಷ್ಟಿಕರ್ತ.

ವಿಶ್ವ ಅಂತರ್ಮುಖಿ ದಿನದ ಇತಿಹಾಸವನ್ನು 2012 ರಲ್ಲಿ ಸುಸಾನ್ ಕೇನ್ ಅವರು ಕ್ವೈಟ್: ದಿ ಪವರ್ ಆಫ್ ಇಂಟ್ರೋವರ್ಟ್ಸ್ ಇನ್ ಎ ವರ್ಲ್ಡ್ ದಟ್ ಸ್ಟಾಪ್ ಟಾಕಿಂಗ್ ಪುಸ್ತಕದ ಪ್ರಕಟಣೆಯಿಂದ ಗುರುತಿಸಬಹುದು. ಪುಸ್ತಕವು ಅಂತರ್ಮುಖಿಗಳ ಮೌಲ್ಯ ಮತ್ತು ಪ್ರಾಮುಖ್ಯತೆಯನ್ನು ಗಮನಕ್ಕೆ ತಂದಿತು. ಬಹಿರ್ಮುಖಿಗಳನ್ನು ಹೆಚ್ಚಾಗಿ ಗೌರವಿಸುವ ಸಮಾಜದಲ್ಲಿ. ಪುಸ್ತಕದ ಬಿಡುಗಡೆಯ ನಂತರದ ವರ್ಷಗಳಲ್ಲಿ, ಅಂತರ್ಮುಖಿಗಳ ಸಾಮರ್ಥ್ಯವನ್ನು ಆಚರಿಸಲು ಮತ್ತು ಗುರುತಿಸುವ ಮಾರ್ಗವಾಗಿ ವಿಶ್ವ ಅಂತರ್ಮುಖಿ ದಿನವನ್ನು ರಚಿಸಲಾಯಿತು.

ವಿಶ್ವ ಅಂತರ್ಮುಖಿ ದಿನದ ಮಹತ್ವವು ಅಂತರ್ಮುಖಿ ವ್ಯಕ್ತಿಗಳು ಎದುರಿಸುತ್ತಿರುವ ಅನನ್ಯ ಅನುಭವಗಳು ಮತ್ತು ಸವಾಲುಗಳಿಗೆ ಗಮನವನ್ನು ತರುವ ಸಾಮರ್ಥ್ಯದಲ್ಲಿದೆ. ಅಂತರ್ಮುಖಿಗಳು ಸಾಮಾನ್ಯವಾಗಿ ಹೆಚ್ಚು ಬಹಿರ್ಮುಖವಾಗಿ ವರ್ತಿಸಲು ಸಾಮಾಜಿಕ ಒತ್ತಡವನ್ನು ಎದುರಿಸುತ್ತಾರೆ ಮತ್ತು ಅಂತರ್ಮುಖಿ ಗುಣಲಕ್ಷಣಗಳ ಸ್ವೀಕಾರ ಮತ್ತು ತಿಳುವಳಿಕೆಯನ್ನು ಉತ್ತೇಜಿಸಲು ವಿಶ್ವ ಅಂತರ್ಮುಖಿ ದಿನವು ಸಹಾಯ ಮಾಡುತ್ತದೆ. ಅಂತರ್ಮುಖಿಗಳು ಉತ್ತಮ ಕೇಳುಗರು, ಪ್ರತಿಬಿಂಬಿಸುವ ಮತ್ತು ಸ್ವತಂತ್ರರಂತಹ ಅನೇಕ ಅಮೂಲ್ಯ ಗುಣಗಳನ್ನು ಹೊಂದಿದ್ದಾರೆ ಎಂಬುದನ್ನು ಇದು ನೆನಪಿಸುತ್ತದೆ.

ವಿಶ್ವ ಅಂತರ್ಮುಖಿ ದಿನದಂದು ಗಮನಿಸಬೇಕಾದ ಅಂತರ್ಮುಖಿಗಳ ಬಗ್ಗೆ ಅನೇಕ ಆಸಕ್ತಿದಾಯಕ ಸಂಗತಿಗಳಿವೆ. ಉದಾಹರಣೆಗೆ, ಅಂತರ್ಮುಖಿಗಳು ಜನಸಂಖ್ಯೆಯ ಸುಮಾರು 50% ರಷ್ಟಿದ್ದಾರೆ ಎಂದು ನಿಮಗೆ ತಿಳಿದಿದೆಯೇ? ಅಥವಾ ಅಂತರ್ಮುಖಿಗಳು ಬಹಿರ್ಮುಖಿಗಳಿಗಿಂತ ದೀರ್ಘ ಮತ್ತು ಹೆಚ್ಚು ಅರ್ಥಪೂರ್ಣ ಸಂಭಾಷಣೆಗಳನ್ನು ಹೊಂದಿರುತ್ತಾರೆಯೇ? ಅಥವಾ ಅಂತರ್ಮುಖಿಗಳು ಸಾಮಾನ್ಯವಾಗಿ ಹೆಚ್ಚು ಸೃಜನಶೀಲರು ಮತ್ತು ಆಳವಾದ ಚಿಂತನೆಗೆ ಹೆಚ್ಚಿನ ಸಾಮರ್ಥ್ಯವನ್ನು ಹೊಂದಿರುತ್ತಾರೆಯೇ? ಅಂತರ್ಮುಖಿಗಳ ಅನೇಕ ಸಾಮರ್ಥ್ಯಗಳು ಮತ್ತು ಸಾಮರ್ಥ್ಯಗಳ ಕೆಲವು ಉದಾಹರಣೆಗಳಾಗಿವೆ.

ಒಟ್ಟಾರೆಯಾಗಿ, ವಿಶ್ವ ಅಂತರ್ಮುಖಿ ದಿನವು ಅಂತರ್ಮುಖಿ ವ್ಯಕ್ತಿಗಳ ಅನನ್ಯ ಸಾಮರ್ಥ್ಯ ಮತ್ತು ಕೊಡುಗೆಗಳನ್ನು ಆಚರಿಸುವ ಪ್ರಮುಖ ಘಟನೆಯಾಗಿದೆ. ಇದು ವೈವಿಧ್ಯತೆಯನ್ನು ಅಳವಡಿಸಿಕೊಳ್ಳಲು ಮತ್ತು ಆಚರಿಸಲು ಮತ್ತು ಅಂತರ್ಮುಖಿ ಗುಣಲಕ್ಷಣಗಳ ಮೌಲ್ಯವನ್ನು ಗುರುತಿಸಲು ಜ್ಞಾಪನೆಯಾಗಿ ಕಾರ್ಯನಿರ್ವಹಿಸುತ್ತದೆ. ಅಂತರ್ಮುಖಿಗಳ ಸಾಮರ್ಥ್ಯವನ್ನು ಅರ್ಥಮಾಡಿಕೊಳ್ಳುವ ಮತ್ತು ಶ್ಲಾಘಿಸುವ ಮೂಲಕ, ನಾವು ಹೆಚ್ಚು ಒಳಗೊಳ್ಳುವ ಮತ್ತು ಅರ್ಥಮಾಡಿಕೊಳ್ಳುವ ಸಮಾಜವನ್ನು ರಚಿಸಬಹುದು.

# ಮತ್ತೊಂದು ಹಡಗು ಅಪಹರಣಕ್ಕೆ ಯತ್ನಿಸಿದ ಹೌತಿ ಉಗ್ರರ ಬೋಟ್ ಸ್ಫೋಟಿಸಿದ ಅಮೆರಿಕ ಸೇನೆ

**ನವದೆಹಲಿ:** ಕೆಂಪು ಸಮುದ್ರದಲ್ಲಿ ಹೌತಿ ಬಂಡುಕೋರರ ಹಾವಳಿ ಮಿತಿ ಮೀರುತ್ತಿದ್ದು, ಇದೀಗ ಮತ್ತೊಂದು ಹಡಗು ಹೈಜಾಕ್ ಯತ್ನಿಸಿದ್ದ ವೇಳೆ ಅಮೆರಿಕ ನೌಕಾಪಡೆಯ ಹೆಲಿಕಾಪ್ಟರ್ ಗಳು ಹೌತಿ ಉಗ್ರರ 2 ಬೋಟ್ ಗಳನ್ನು ಸ್ಫೋಟಿಸಿ ನಾಶಪಡಿಸಿದೆ.

ಕೆಂಪು ಸಮುದ್ರದಲ್ಲಿ ಕಂಟೈನರ್ ಹಡಗಿನ ಮೇಲೆ ದಾಳಿ ನಡೆಸಿದ ಯೆಮೆನ್ ನ ಇರಾನ್ ಬೆಂಬಲಿತ ಹೌತಿ ಬಂಡುಕೋರರ ಮೇಲೆ ಅಮೆರಿಕ ಸೇನಾಪಡೆ ದಾಳಿ ನಡೆಸಿದ್ದು, ಉಗ್ರರು ನಿರ್ವಹಿಸುತ್ತಿದ್ದ ಹಡಗುಗಳನ್ನು ಸ್ಫೋಟಿಸಿ ಮುಳುಗಿಸಿವೆ ಎಂದು ಅಮೆರಿಕ ಸೇನಾ ಮಿಲಿಟರಿ ಭಾನುವಾರ ತಿಳಿಸಿದೆ.

ಕೆಂಪು ಸಮುದ್ರದಲ್ಲಿ ಗಸ್ತು ತಿರುಗುತ್ತಿದ್ದ ವೇಳೆ ಸರಕುಸಾಗಾಣಿಕಾ ಹಡಗಿನ ಮೇಲೆ ದಾಳಿ ಯತ್ನಿಸಿದ ಹೌತಿ ಬಂಡುಕೋರರು ಭದ್ರತಾ ಪಡೆಗಳ ಹೆಲಿಕಾಪ್ಟರ್‌ಗಳ ಮೇಲೆ ಗುಂಡು ಹಾರಿಸಿದ್ದಾರೆ. ಈ ವೇಳೆ ಸೇನಾಪಡೆಯೂ ಕೂಡ 'ಆತ್ಮರಕ್ಷಣೆಗಾಗಿ ಗುಂಡು ಹಾರಿಸಿದೆ. ಹಡಗಿನ 20 ಮೀಟರ್‌ಗಳ ಒಳಗೆ ಬಂದ ನಾಲ್ಕು ಸಣ್ಣ ದೋಣಿಗಳಲ್ಲಿ ಮೂರು ಬೋಟ್ ಗಳನ್ನು ರಕ್ಷಣಾ ಪಡೆಗಳು ಹೊಡೆದುರುಳಿಸಿವೆ. ಅದರಲ್ಲಿದ್ದ ಬಂಡುಕೋರರು ಕೂಡ ಹತರಾಗಿದ್ದಾರೆ. ಅಮೆರಿಕ ಸೇನಾ ಸಿಬ್ಬಂದಿ ದಾಳಿ ಆರಂಭಿಸಿದ ಬೆನ್ನಲ್ಲೇ ಹೌತಿ ಬಂಡುಕೋರರ ನಾಲ್ಕನೇ ದೋಣಿ ಪ್ರದೇಶದಿಂದ ಪಲಾಯನ ಮಾಡಿದೆ ಎಂದು ಯುಎಸ್ ಸೆಂಟ್ರಲ್ ಕಮಾಂಡ್ ಹೇಳಿಕೆಯಲ್ಲಿ ತಿಳಿಸಿದೆ.

ಸಿಂಗಾಪುರದ ಧ್ವಜದ, ಡೆನ್ಮಾರ್ಕ್ ಒಡೆತನದ ಮತ್ತು ಚಾಲಿತ ಕಂಟೇನರ್ ಹಡಗಿನ ಮಾರ್ಸ್ಕ್ ಹ್ಯಾಂಗ್‌ಝೌ ಅವರ ಸಹಾಯಕ್ಕಾಗಿ ಕೋರಿಕೆಗೆ ನೌಕಾಪಡೆ




ಪ್ರತಿಕ್ರಿಯಿಸಿದೆ ಎಂದು ಸೆಂಟ್‌ಕಾಮ್ ಹೇಳಿದೆ, ಇದು ಕೆಂಪು ಸಮುದ್ರದಲ್ಲಿ 24 ಗಂಟೆಗಳಲ್ಲಿ ಎರಡನೇ ಬಾರಿಗೆ ದಾಳಿಗೆ ಒಳಗಾಗಿದೆ. ಹಡಗನ್ನು ಮೊದಲು ಎರಡು ಹಡಗು ವಿರೋಧಿ ಬ್ಯಾಲಿಸ್ಟಿಕ್ ಕ್ಷಿಪಣಿಗಳೊಂದಿಗೆ ಗುರಿಯಾಗಿಸಲಾಗಿತ್ತು, ಅದನ್ನು ಯುಎಸ್ ಮಿಲಿಟರಿ ಹೊಡೆದುರುಳಿಸಿತು.

ಹೌತಿ-ನಿಯಂತ್ರಿತ ಯೆಮೆನ್‌ನಿಂದ ಉಡಾವಣೆಯಾದ ಕ್ಷಿಪಣಿಗಳಲ್ಲಿ ಒಂದು, ಮಾರ್ಸ್ಕ್ ಹ್ಯಾಂಗ್‌ಝೌಗೆ ಅಪ್ಪಳಿಸಿತು. ಹಮಾಸ್ ವಿರುದ್ಧ ಇಸ್ರೇಲ್ ಯುದ್ಧ ಮಾಡುತ್ತಿರುವ ಸಂದರ್ಭದಲ್ಲಿ ಪ್ಯಾಲೆಸ್ಟೀನಿಯನ್ನರಿಗೆ ಬೆಂಬಲ ನೀಡುವ ಸಲುವಾಗಿ ಹೌತಿ ಬಂಡುಕೋರರು ಈ ದಾಳಿ ಮಾಡುತ್ತಿದ್ದಾರೆ. ಪ್ರಮುಖವಾದ ಕೆಂಪು ಸಮುದ್ರದ ಹಡಗು ಲೇನ್‌ನಲ್ಲಿ ಬಂಡುಕೋರರು ಪದೇ ಪದೇ ಹಡಗುಗಳನ್ನು ಗುರಿಯಾಗಿಸಿಕೊಂಡು ದಾಳಿ ಮಾಡುತ್ತಿದ್ದಾರೆ.

# ಹೊಸ ಕಾನೂನು ವಿರೋಧಿಸಿ ದೇಶಾದ್ಯಂತ ಚಾಲಕರ ಪ್ರತಿಭಟನೆ

**ನವದೆಹಲಿ:** ಟ್ರಕ್ ಗಳು, ಟ್ಯಾಂಕರ್ ಗಳು ಸೇರಿದಂತೆ ವಾಣಿಜ್ಯ ವಾಹನಗಳ ಚಾಲಕರು ಸೋಮವಾರ ಹಿಟ್ ಅಂಡ್ ರನ್ ಪ್ರಕರಣಗಳಿಗೆ ಸಂಬಂಧಿಸಿದ ಹೊಸ ಕಾನೂನಿನ ವಿರುದ್ಧ ದೇಶದ ಹಲವು ಭಾಗಗಳಲ್ಲಿ ಪ್ರತಿಭಟನೆ ನಡೆಸಿದ್ದಾರೆ.

ಹಿಟ್ ಅಂಡ್ ರನ್ ಪ್ರಕರಣಗಳಲ್ಲಿ ಜೈಲು ಶಿಕ್ಷೆಯನ್ನು ಹೆಚ್ಚಿಸುವ ವಸಾಹತುಶಾಹಿ ಯುಗದ ಕ್ರಿಮಿನಲ್ ಕಾನೂನುಗಳನ್ನು ಕೇಂದ್ರ ಸರ್ಕಾರ ಇತ್ತೀಚೆಗೆ ಬದಲಾಯಿಸಿದೆ. ಈ ಕ್ರಮವು



ದೇಶಾದ್ಯಂತ ಟ್ರಕ್ಕರ್ಗಳ ಪ್ರತಿಭಟನೆಗೆ ಕಾರಣವಾಗಿದೆ.

ಹೊಸ ಕಾನೂನಿನ ಪ್ರಕಾರ, ಚಾಲಕರು ಅಪಘಾತ ಸ್ಥಳದಿಂದ ಓಡಿಹೋದರೆ ಜೈಲು ಶಿಕ್ಷೆಯನ್ನು ಎರಡು ವರ್ಷದಿಂದ ಹತ್ತು ವರ್ಷಗಳವರೆಗೆ ಹೆಚ್ಚಿಸಲಾಗಿದೆ. ಹೊಸ ಕಾನೂನಿನ ಪ್ರಕಾರ, ಹಿಟ್ ಅಂಡ್ ರನ್ ಪ್ರಕರಣಗಳಿಗೆ 10 ವರ್ಷಗಳ ಜೈಲು ಶಿಕ್ಷೆ ಮತ್ತು 7 ಲಕ್ಷ ರೂಪಾಯಿ ದಂಡ ವಿಧಿಸಬಹುದು ಎಂದು ಭೋಪಾಲ್ನ ಬೋರ್ಡ್ ಆಫೀಸ್ ಸ್ಕ್ವೇರ್‌ನಲ್ಲಿ ಪ್ರತಿಭಟನೆ ನಡೆಸಿದ ಪ್ರಮೋದ್ ಸಿಕರ್ವಾರ್ ಹೇಳಿದ್ದಾರೆ. ಹೊಸ ಕಾನೂನು ಚಾಲಕರ ಹಿತಾಸಕ್ತಿಗೆ ವಿರುದ್ಧವಾಗಿದೆ. ಚಾಲಕರು ಯಾರನ್ನೂ ಕೊಲ್ಲಲು ಬಯಸುವುದಿಲ್ಲ, ಆದರೆ ಅಪಘಾತಗಳು ಸಂಭವಿಸುತ್ತವೆ. ಅಂತಹ ಸಂದರ್ಭಗಳಲ್ಲಿ, ಜನರು ಚಾಲಕನ ವಿರುದ್ಧ ತಿರುಗುತ್ತಾರೆ. ಹೊಸ ಕಾನೂನನ್ನು ತಿದ್ದುಪಡಿ ಮಾಡಬೇಕೆಂದು ನಾವು ಒತ್ತಾಯಿಸುತ್ತೇವೆ ಎಂದು ಅವರು ಹೇಳಿದ್ದಾರೆ. ಐಪಿಸಿಯ ಸೆಕ್ಷನ್ 304ಎ(ನಿರ್ಲಕ್ಷ್ಯದಿಂದ ಸಾವಿಗೆ ಕಾರಣ) ತಿದ್ದುಪಡಿಯನ್ನು ಪ್ರಾರಂಭದಿಂದಲೂ ವಾಣಿಜ್ಯ ಚಾಲಕರು ವಿರೋಧಿಸುತ್ತಿದ್ದಾರೆ. ಚಾಲಕರ ಪ್ರತಿಭಟನೆಯಿಂದಾಗಿ ದೇಶದ ಕೆಲವೆಡೆ ರಸ್ತೆ ತಡೆಗಳು ಕಂಡುಬಂದರೆ, ಇಂಧನ ಪೂರೈಕೆಯ ಭೀತಿಯಿಂದಾಗಿ ಕೆಲವು ಪೆಟ್ರೋಲ್ ಪಂಪ್ಗಳಲ್ಲಿ ಉದ್ದನೆಯ ಸರತಿ ಸಾಲುಗಳು ಕಂಡುಬಂದವು.

## ತಾಯಿಯ ಸೇರಿದ ಮರಿ ಆನೆ

**ತಮಿಳುನಾಡು:** ಕಳೆದುಹೋಗಿದ್ದ ಆನೆ ಮರಿಯೊಂದು ಮತ್ತೆ ತಾಯಿ ಆನೆಯ ಮಡಿಲಿಗೆ ಸೇರಿದ ಹೃದಯಸ್ಪರ್ಶಿ ಘಟನೆ ತಮಿಳುನಾಡಿನಲ್ಲಿ ನಡೆದಿದೆ. ತಮಿಳುನಾಡಿನ ಕೊಯಮತ್ತೂರಿನ ಅನಮಲೈ ಹುಲಿ ಸಂರಕ್ಷಿತಾರಣ್ಯದಲ್ಲಿ ಸುಮಾರು 4 ರಿಂದ 5 ತಿಂಗಳಿನ ಆನೆ ಮರಿಯೊಂದು ಕಳೆದು ಹೋಗಿತ್ತು. ಅದಾದ ಬಳಿಕ ಮರಿ ಆನೆ ತನ್ನ ತಾಯಿಯನ್ನು ಹುಡುಕುತ್ತಾ ಒಂಟಿಯಾಗಿ ಅಲೆದಾಡುತ್ತಿರುವುದು ಪತ್ತೆಯಾಗಿತ್ತು. ಈ ಬೆನ್ನಲ್ಲೇ ತಮಿಳುನಾಡು ಅರಣ್ಯ ಇಲಾಖೆಯು ಆನೆ ಮರಿಯು ಬೇರ್ಪಟ್ಟಿದ್ದ ಹಿಂಡನ್ನು ಪತ್ತೆ ಹಚ್ಚಲು ಶೋಧ ಕಾರ್ಯ ನಡೆಸಿದೆ. ಡ್ರೋನ್ ಸಹಾಯದಿಂದ ಸುಮಾರು 3 ಕಿಮೀ ದೂರದಲ್ಲಿ ಹಿಂಡನ್ನು ಗುರುತಿಸಿದೆ. ಅದಾದ ಬಳಿಕ ಮರಿಯನ್ನು ಸುರಕ್ಷಿತವಾಗಿ ಆನೆಯ ಹಿಂಡಿನೊಂದಿಗೆ ಮರಿಯನ್ನು ಅರಣ್ಯ ಇಲಾಖೆ ಬಿಡುಗಡೆ ಮಾಡಿದೆ. ಈ ಮನಕಲಕುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು, ಐಎಸ್ ಅಧಿಕಾರಿಗಳು, ಉದ್ಯಮಿ ಆನಂದ್ ಮಹೇಂದ್ರ, ಸೇರಿದಂತೆ ಅನೇಕ ಗಣ್ಯ ವ್ಯಕ್ತಿಗಳು ಟ್ವೀಟ್ ಮಾಡಿ, ತಮಿಳು ನಾಡು ಅರಣ್ಯ ಇಲಾಖೆಯ ಕಾರ್ಯಕ್ಕೆ ಅಭಿನಂದಿಸಿದ್ದಾರೆ.



## ಜಿಎಸ್ಟಿ ಕಲೆಕ್ಷನ್ ಶೇ. 10 ಹೆಚ್ಚಳ

**ನವದೆಹಲಿ:** ಕಳೆದ ವರ್ಷ ಡಿಸೆಂಬರ್ನಲ್ಲಿ ಸರಕು ಮತ್ತು ಸೇವಾ ತೆರಿಗೆ ಸಂಗ್ರಹದಲ್ಲಿ ಶೇಕಡಾ 10 ರಷ್ಟು ಏರಿಕೆಯಾಗಿದ್ದು, ಸುಮಾರು 1.64 ಲಕ್ಷ ಕೋಟಿ ರೂಪಾಯಿ ಜಿಎಸ್ ಟಿ ಸಂಗ್ರಹವಾಗಿದೆ. ಇದು 2022ರ ಡಿಸೆಂಬರ್ ಗೆ ಹೋಲಿಸಿದರೆ ಶೇ. 10 ರಷ್ಟು ಹೆಚ್ಚವಾಗಿದೆ. 2022ರ ಡಿಸೆಂಬರ್ ನಲ್ಲಿ ಒಟ್ಟು 1.49 ಲಕ್ಷ ಕೋಟಿ ರೂಪಾಯಿ ಜಿಎಸ್ ಟಿ ಕಲೆಕ್ಷನ್ ಆಗಿತ್ತು ಎಂದು ಸೋಮವಾರ ಕೇಂದ್ರ ಹಣಕಾಸು ಸಚಿವಾಲಯ ತಿಳಿಸಿದೆ. ಏಪ್ರಿಲ್-ಡಿಸೆಂಬರ್ 2023 ರ ಅವಧಿಯಲ್ಲಿ, ಒಟ್ಟು ಜಿಎಸ್ಟಿ ಸಂಗ್ರಹವು ಶೇ. 12 ರಷ್ಟು ಬೆಳವಣಿಗೆಯನ್ನು ಕಂಡಿದೆ. ದೇಶೀಯ ವಹಿವಾಟುಗಳು ಮತ್ತು ಸೇವೆಗಳ ಆಮದು ಏರಿಕೆಯು ಜಿಎಸ್ ಟಿ ಆದಾಯ ಹೆಚ್ಚಿಸುವಲ್ಲಿ ಮಹತ್ವದ ಪಾತ್ರ ವಹಿಸಿದೆ ಎಂದು ಕೇಂದ್ರ ಹಣಕಾಸು ಸಚಿವಾಲಯದ ಪ್ರಕಟಣೆ ತಿಳಿಸಿದೆ. ಡಿಸೆಂಬರ್, 2023 ರಲ್ಲಿ ಒಟ್ಟು ಜಿಎಸ್ಟಿ ಆದಾಯ 1,64,882 ಕೋಟಿ ರೂಪಾಯಿಗಳಾಗಿದ್ದು, ಇದರಲ್ಲಿ ಸಿಜಿಎಸ್ಟಿ 30,443 ಕೋಟಿ ರೂಪಾಯಿ, ಎಸ್ಜಿಎಸ್ಟಿ 37,935 ಕೋಟಿ ರೂಪಾಯಿ, ಐಜಿಎಸ್ಟಿ 84,255 ಕೋಟಿ ರೂಪಾಯಿ (ರೂ. 41,534 ಕೋಟಿ ಆಮದು ಮಾಡಿದ ಸರಕುಗಳನ್ನು ಒಳಗೊಂಡಂತೆ) ಮತ್ತು ಸೆಸ್ 12,249 ಕೋಟಿ (ಸರಕುಗಳ ಆಮದಿನ ಮೇಲೆ ಸಂಗ್ರಹಿಸಲಾದ 1,079 ಕೋಟಿ ಸೇರಿದಂತೆ) ರೂಪಾಯಿ ಸಂಗ್ರಹವಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಭಾರತ- ಪಾಕಿಸ್ತಾನದ ನಡುವೆ ಪರಮಾಣು ಸ್ಥಾಪನೆಗಳ ಪಟ್ಟಿ ವಿನಿಮಯ

ಭಾರತ ಮತ್ತು ಪಾಕಿಸ್ತಾನವು ರಾಜತಾಂತ್ರಿಕವಾಗಿ ಸೋಮವಾರ ಪರಮಾಣು ಸ್ಥಾಪನೆ ಮತ್ತು ಸೌಲಭ್ಯಗಳ ಪಟ್ಟಿಯ ವಿನಿಮಯ ಮಾಡಿಕೊಂಡಿದೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಭಾರತೀಯ ವಿದೇಶಾಂಗ ವ್ಯವಹಾರಗಳ ಸಚಿವಾಲಯ ಭಾರತ ಮತ್ತು ಪಾಕಿಸ್ತಾನದ ನಡುವಿನ ಪರಮಾಣು ಸ್ಥಾಪನೆ ಮತ್ತು ಸೌಲಭ್ಯಗಳ ಮೇಲಿನ ದಾಳಿಯ ನಿಷೇಧದ ಒಪ್ಪಂದದ ಅಡಿಯಲ್ಲಿ ಹೊಸದಿಲ್ಲಿ ಮತ್ತು ಇಸ್ಲಾಮಾಬಾದ್ನಲ್ಲಿ ರಾಜತಾಂತ್ರಿಕ ಮಾರ್ಗವಾಗಿ ಮಾಹಿತಿ ವಿನಿಮಯ ನಡೆಸಿದೆ ಎಂದು ತಿಳಿಸಿದೆ. 1988ರ ಡಿಸೆಂಬರ್ 31ರಂದು ಸಹಿ ಮಾಡಲ್ಪಟ್ಟ ಮತ್ತು 1991ರ ಜನವರಿ 27ರಂದು ಜಾರಿಗೆ ಬಂದ ಈ ಒಪ್ಪಂದದ ಅಡಿಯಲ್ಲಿ ಭಾರತ ಮತ್ತು ಪಾಕಿಸ್ತಾನ ದೇಶಗಳಲ್ಲಿ ಪರಮಾಣು ಸ್ಥಾಪನೆ ಮತ್ತು ಸೌಲಭ್ಯಗಳನ್ನು ಹೊಂದಿರುವ ಬಗ್ಗೆ ಪರಸ್ಪರ ಮಾಹಿತಿ ನೀಡುತ್ತದೆ. ಕಾಶ್ಮೀರ ಮತ್ತು ಗಡಿಯಾಚೆಗಿನ ಭಯೋತ್ಪಾದನೆ ಸೇರಿದಂತೆ ಹಲವು ವಿಷಯಗಳ ಕುರಿತು ಉಭಯ ದೇಶಗಳ ನಡುವಿನ ಸಂಬಂಧದಲ್ಲಿ ನಿರಂತರ ಒತ್ತಡವಿದ್ದರೂ ಪ್ರತಿ ಕ್ಯಾಲೆಂಡರ್ ವರ್ಷದ ಜನವರಿ ಮೊದಲ ದಿನ ಉಭಯ ದೇಶಗಳ ನಡುವೆ ಈ ಪಟ್ಟಿಗಳ ವಿನಿಮಯವಾಗುತ್ತದೆ. ಮೊದಲ ವಿನಿಮಯ 1992ರ ಜನವರಿ 1ರಂದು ನಡೆದಿದ್ದು, ಈ ಬಾರಿ ಅನುಕ್ರಮವಾಗಿ 33ನೇ ಪಟ್ಟಿಯ ವಿನಿಮಯವಾಗಿದೆ.

## ಪತಿ, ಮಾವನನ್ನು ಗುಂಡಿಕ್ಕಿ ಕೊಂದ ಮಹಿಳೆ!

ಉಜ್ಜಯನಿ: ಆಸ್ತಿ ವಿವಾದಕ್ಕೆ ಸಂಬಂಧಿಸಿದಂತೆ ಮಹಿಳೆಯೊಬ್ಬರು ತನ್ನ ಪತಿ ಮತ್ತು ಸೋದರ ಮಾವನನ್ನು ಗುಂಡಿಕ್ಕಿ ಕೊಂದಿದ್ದಾರೆ. ಸೋಮವಾರ ಮಧ್ಯಪ್ರದೇಶದ ಉಜ್ಜಯಿನಿಯಲ್ಲಿ ಈ ಘಟನೆ ನಡೆದಿದೆ. ನಂತರ ಅಪರಾಧಕ್ಕೆ ಬಳಸಿದ ಪಿಸ್ತೂಲ್‌ನೊಂದಿಗೆ ಶರಣಾಗಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಜಿಲ್ಲಾ ಕೇಂದ್ರದಿಂದ ಸುಮಾರು 25 ಕಿಲೋಮೀಟರ್ ದೂರದಲ್ಲಿರುವ ಇಂಗೋರಿಯಾದಲ್ಲಿ ಬೆಳಿಗ್ಗೆ ಈ ಘಟನೆ ನಡೆದಿದ್ದು, ಮೃತರನ್ನು ಆರೋಪಿ ಸವಿತಾ ಅವರ ಪತಿ ರಾಧೇಶ್ಯಾಮ್ (41), ಮತ್ತು ಆಕೆಯ ಸೋದರ ಮಾವ ಧೀರಜ್ (47) ಎಂದು ಗುರುತಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ. ರಾಧೇಶ್ಯಾಮ್ ಸ್ಥಳದಲ್ಲೇ ಸಾವನ್ನಪ್ಪಿದರೆ, ಧೀರಜ್ ಬದ್‌ನಗರ ಆಸ್ಪತ್ರೆಯಲ್ಲಿ ಗುಂಡೇಟಿನ ಗಾಯದಿಂದ ಮೃತಪಟ್ಟಿದ್ದಾರೆ. ನಂತರ ಆರೋಪಿ ಪಿಸ್ತೂಲ್‌ನೊಂದಿಗೆ ಶರಣಾಗಿದ್ದಾರೆ ಎಂದು ಇಂಗೋರಿಯಾ ಪೊಲೀಸ್ ಠಾಣೆಯ ಉಸ್ತುವಾರಿ ಚಂದ್ರಿಕಾ ಸಿಂಗ್ ಯಾದವ್ ಹೇಳಿದರು. ಅಂಗನವಾಡಿ ಕಾರ್ಯಕರ್ತೆಯಾಗಿರುವ ಸವಿತಾ (35) ಮೊದಲು ತನ್ನ ಪತಿಗೆ ನಂತರ ತನ್ನ ಸೋದರಮಾವನಿಗೆ ಗುಂಡು ಹಾರಿಸಿದ್ದಾಳೆ. ಮೇಲ್ನೋಟಕ್ಕೆ ಇದು ಆಸ್ತಿ ವಿವಾದದ ಕಾರಣ ಎಂದು ತೋರುತ್ತದೆ ಎಂದು ಯಾದವ್ ತಿಳಿಸಿದರು.



# ನೈತಿಕ ಆಧಾರದಲ್ಲಿ ಇಮ್ರಾನ್ ನ ಮತಪತ್ರ ತಿರಸ್ಕೃತ

**ಇಸ್ಲಮಾಬಾದ್ :** ಭ್ರಷ್ಟಾಚಾರ ಪ್ರಕರಣದಲ್ಲಿ ಜೈಲಿನಲ್ಲಿರುವ ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಫೆಬ್ರವರಿ 8ರ ಸಾರ್ವತ್ರಿಕ ಚುನಾವಣೆಗೆ ಸಲ್ಲಿಸಿರುವ ನಾಮಪತ್ರವನ್ನು ನೈತಿಕತೆಯ ಆಧಾರದಲ್ಲಿ ತಿರಸ್ಕರಿಸಲಾಗಿದೆ ಎಂದು ಚುನಾವಣಾ ಅಧಿಕಾರಿ ಹೇಳಿದ್ದಾರೆ. ಸಾರ್ವತ್ರಿಕ ಚುನಾವಣೆಗೆ ಇಮ್ರಾನ್ಖಾನ್ ಹಾಗೂ ಅವರ ಪಾಕಿಸ್ತಾನ್ ತೆಹ್ರೀಕೆ ಇನ್ಸಾಫ್(ಪಿಟಿಐ) ಪಕ್ಷದ ಹಲವು ಮುಖಂಡರು ಸಲ್ಲಿಸಿದ್ದ ನಾಮಪತ್ರವನ್ನು ಡಿಸೆಂಬರ್ 30ರಂದು ಚುನಾವಣಾ ಆಯೋಗ ತಿರಸ್ಕರಿಸಿದೆ. ತೋಷಖಾನ ಭ್ರಷ್ಟಾಚಾರ ಪ್ರಕರಣದಲ್ಲಿ ಇಮ್ರಾನ್ಖಾನ್ ಅಪರಾಧಿ ಎಂದು ಘೋಷಿಸಲ್ಪಟ್ಟಿರುವುದು ಅವರ ನಾಮಪತ್ರ ತಿರಸ್ಕೃತಗೊಳ್ಳಲು ಪ್ರಮುಖ ಕಾರಣವಾಗಿದ್ದರೆ ನಾಮಪತ್ರವನ್ನು ಅನುಮೋದಿಸಿದವರು ಆಯಾ ಕ್ಷೇತ್ರಕ್ಕೆ ಸೇರಿದವರಲ್ಲ ಎಂಬ ಕಾರಣವನ್ನೂ ನೀಡಲಾಗಿದೆ.

ಈ ಮಧ್ಯೆ, ಪಕ್ಷದ ಹಲವು ಅಭ್ಯರ್ಥಿಗಳ ನಾಮಪತ್ರ ತಿರಸ್ಕೃತಗೊಂಡಿರುವುದನ್ನು ಪ್ರಶ್ನಿಸಿ ಚುನಾವಣಾ ನ್ಯಾಯಮಂಡಳಿಗೆ ಮೇಲ್ಮನವಿ ಸಲ್ಲಿಸಲು ಪಿಟಿಐ ನಿರ್ಧರಿಸಿರುವುದಾಗಿ 'ಡಾನ್' ವರದಿ ಮಾಡಿದೆ. ಕಾನೂನಿನ ಪ್ರಕಾರ, ನಾಮಪತ್ರ ತಿರಸ್ಕರಿಸಿದರೆ ಮೊದಲು ನ್ಯಾಯಮಂಡಳಿಗೆ ಮೇಲ್ಮನವಿ ಸಲ್ಲಿಸಬೇಕಾಗಿದೆ. ನ್ಯಾಯಮಂಡಳಿಯ ಆದೇಶವನ್ನು ಗಮನಿಸಿ ಮುಂದಿನ ಕ್ರಮದ ಬಗ್ಗೆ ನಿರ್ಧರಿಸಲಾಗುವುದು ಎಂದು ಪಕ್ಷದ ಉನ್ನತ ಮೂಲಗಳನ್ನು ಉಲ್ಲೇಖಿಸಿದ ವರದಿ ತಿಳಿಸಿದೆ.

## ಕನಿಷ್ಠ 8 ಸಾವು, ಒಂದೇ ದಿನ 155 ಬಾರಿ ಕಂಪನ

# ಜಪಾನ್‌ನಲ್ಲಿ ಭೂಕಂಪ

ಟೋಕಿಯೋ: ಹೊಸ ವರ್ಷದ ಮೊದಲ ದಿನವೇ ಜಪಾನ್ ಗೆ ಪ್ರಕೃತಿ ಆಘಾತ ನೀಡಿದ್ದು, ಈಶಾನ್ಯ ಜಪಾನ್ ನಲ್ಲಿ ಪ್ರಬಲ ಭೂ ಕಂಪನ ಸಂಭವಿಸಿದ ಪರಿಣಾಮ ಕನಿಷ್ಟ 8 ಮಂದಿ ಸಾವನ್ನಪ್ಪಿದ್ದಾರೆ.

ವರ್ಷದ ಮೊದಲ ದಿನವಾದ ನಿನ್ನೆ ಜಪಾನ್ ನಲ್ಲಿ ಪ್ರಬಲ ಭೂಕಂಪನ ಸಂಭವಿಸಿತ್ತು. ರಿಕ್ಟರ್ ಮಾಪಕದಲ್ಲಿ 7.4ರಿಂದ 7.6 ರವರೆಗೂ ಭೂಕಂಪನ ಸಂಭವಿಸಿದ್ದು, ಜಪಾನ್ ನ ಈಶಾನ್ಯ ಭಾಗದ ನನಾವೋ ನಲ್ಲಿ ಭೂ ಕಂಪನದ ಕೇಂದ್ರ, ಬಿಂದು ವರದಿಯಾಗಿದೆ. ಈ ಕಂಪನದಲ್ಲಿ ಕನಿಷ್ಠ 8 ಮಂದಿ ಸಾವನ್ನಪ್ಪಿದ್ದು, 32 ಸಾವಿರಕ್ಕೂ ಅಧಿಕ ಮಂದಿ ಕಂಪನದಿಂದ ಸಂತ್ರಸ್ಥರಾಗಿದ್ದಾರೆ.

ಭೂಕಂಪನದಿಂದಾಗಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯವಾಗಿದ್ದು, ವರ್ಷದ ಮೊದಲ ದಿನವೇ ಸೆಂಟ್ರಲ್ ಜಪಾನ್ ನ ನಾಗರೀಕರು ಇಡೀ ರಾತ್ರಿ ಕತ್ತಲೆಯಲ್ಲಿ ಮುಳುಗುವಂತಾಗಿದೆ. ಜಪಾನ್ ಮಿಲಿಟರಿ ಬೇಸ್ ನಲ್ಲಿ ಕನಿಷ್ಠ ಸಾವಿರಕ್ಕೂ ಅಧಿಕ ಮಂದಿ ಆಶ್ರಯ ಪಡೆದಿದ್ದಾರೆ ಎಂದು ಸೇನಾ ಮೂಲಗಳು ತಿಳಿಸಿವೆ.

155 ಬಾರಿ ಕಂಪನ: ಜಪಾನ್ ನ ಇಶಿಕಾವಾ, ನಿಗಾಟಾ ಮತ್ತು ಟೊಯಾಮಾ ಪ್ರಾಂತ್ಯಗಳ ಕರಾವಳಿ ಪ್ರದೇಶಗಳಲ್ಲಿ ಕಂಪನ ಸಂಭವಿಸಿದ್ದು, 155 ಬಾರಿ ಭೂಮಿ ಕಂಪಿಸಿದೆ. ಮೊದಲ ಆರು ಕಂಪನಗಳು ಪ್ರಬಲವಾಗಿದ್ದು, ಈ ಕಂಪನಗಳು ರಿಕ್ಟರ್ ಮಾಪಕದಲ್ಲಿ 6.2 ರಿಂದ 6.7ರವರೆಗೂ ದಾಖಲಾಗಿವೆ. ಬಳಿಕ ಕನಿಷ್ಠ 3 ರಂತೆ 140ಕ್ಕೂ ಅಧಿಕ ಕಂಪನಗಳು ಸಂಭವಿಸಿವೆ ಎಂದು ಭೂಕಂಪನ ಮಾಪನ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.





### ಕರಾವಳಿಗೆ ಅಪ್ಪಳಿಸಿದ ಸುನಾಮಿ ಅಲೆಗಳು

**ಜಪಾನ್ ಹವಾಮಾನ ಸಂಸ್ಥೆ ಸುನಾಮಿ ಎಚ್ಚರಿಕೆ ನೀಡಿದ್ದು, ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಎಚ್ಚರಿಕೆ ನೀಡಿದೆ. ಅಲ್ಲದೆ ಮುಂಜಾಗ್ರತಾ ಕ್ರಮವಾಗಿ ಎತ್ತರದ ಪ್ರದೇಶಗಳಿಗೆ ತೆರಳುವಂತೆ ಅಧಿಕಾರಿಗಳು ಸೂಚನೆ ನೀಡಿದ್ದಾರೆ. 5 ಮೀಟರ್ (16 ಅಡಿ) ಎತ್ತರದವರೆಗೆ ಅಲೆಗಳು ಬರುವ ಸಾಧ್ಯತೆಯಿದ್ದು, ಕರಾವಳಿ ಪ್ರದೇಶದಲ್ಲಿ ವಾಸಿಸುವ ಜನರು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಸೂಚಿಸಲಾಗಿತ್ತು. ಸೋಮವಾರ ಕನಿಷ್ಠ 1.2 ಮೀಟರ್ (ನಾಲ್ಕು ಅಡಿ) ಎತ್ತರದ ಅಲೆಗಳು ಜಪಾನ್ ನ ವಾಜಿಮಾ ಬಂದರಿಗೆ ಅಪ್ಪಳಿಸಿವೆ. ಇದರ ಬೆನ್ನಲ್ಲೇ ಸಣ್ಣ ಸುನಾಮಿಗಳ ಸರಣಿಯು ಕೂಡ ಇತರೆಡೆ ವರದಿಯಾಗಿದೆ. ಆದರೆ ದೊಡ್ಡ ಸುನಾಮಿ ಅಲೆಗಳು ಅಪ್ಪಳಿಸಿದ ಕುರಿತು ವರದಿಯಾಗಿಲ್ಲ. ಟೋಕಿಯೊ ಮತ್ತು ಇಡೀ ಕಾಂಟೊ ಪ್ರದೇಶದಲ್ಲಿ ಕಂಪನಗಳು ಸಂಭವಿಸಿವೆ. 2011 ರಲ್ಲಿ ಭೂಕಂಪದ ನಂತರ ಸುನಾಮಿಯಿಂದಾಗಿ 16 ಸಾವಿರ ಮಂದಿ ಸಾವನ್ನಪ್ಪಿದ್ದರು. ಮಾರ್ಚ್ 2011 ರಲ್ಲಿ, 9 ತೀವ್ರತೆಯ ವಿನಾಶಕಾರಿ ಸುನಾಮಿ ಸಂಭವಿಸಿದೆ. ಆಗ ಎದ್ದ ಸುನಾಮಿ ಅಲೆಗಳು ಫುಕುಶಿಮಾ ಪರಮಾಣು ಸ್ಥಾವರವನ್ನು ನಾಶಪಡಿಸಿದ್ದವು.**

## ಸುನಾಮಿ ಆತಂಕ

ಜಪಾನ್ ಜನತೆಗೆ ಸುನಾಮಿ ಆತಂಕ ಎದುರಾಗಿದ್ದು, ಇದರ ಜೊತೆಗೆ 7.5 ತೀವ್ರತೆಯಲ್ಲಿ ಪ್ರಬಲ ಭೂಕಂಪನವಾಗಿದೆ.

ಸರಣಿ ಕಂಪನಗಳಿಂದ ಸುನಾಮಿ ಉಲ್ಬಣಗೊಂಡಿದ್ದು, ಜಪಾನ್ನ ಟೊಯಾಮಾ ನಗರಕ್ಕೆ ಮೊದಲ ಸುನಾಮಿ ಅಲೆ ಬಂದು ಅಪ್ಪಳಿಸಿವೆ ಎಂದು ಹೇಳಲಾಗಿದೆ. ಇದಕ್ಕೆ ಸಂಬಂಧಿಸಿದ ವಿಡಿಯೋಗಳು ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿವೆ.

ಜಪಾನ್ನ ಇಶಿಕವಾ ಪ್ರಾಂತ್ಯದ ನೋಟೋ ವಲಯದಲ್ಲಿ ಸ್ಥಳೀಯ ಕಾಲಮಾನ ಸಂಜೆ 4.10ರ ಸುಮಾರಿಗೆ ಭೂಕಂಪನ ಸಂಭವಿಸಿದೆ. ಅಲ್ಲದೆ, ಸರಣಿ ಕಂಪನಗಳಿಂದ ಸುನಾಮಿ ಪ್ರಚೋದನೆಗೊಂಡಿದ್ದು, ಸ್ಥಳೀಯ ಅಧಿಕಾರಿಗಳು ಮುನ್ನೆಚ್ಚರಿಕಾ ಕ್ರಮವಾಗಿ ಜನರನ್ನು ಎತ್ತರದ ಸ್ಥಳಗಳಿಗೆ ಸ್ಥಳಾಂತರ ಮಾಡುವ ಕಾರ್ಯದಲ್ಲಿ ತೊಡಗಿಕೊಂಡಿದ್ದಾರೆ. ಅಲ್ಲದೆ, ಜನರಿಗೂ ಕೂಡ ಎಚ್ಚರಿಕೆ ಸಂದೇಶವನ್ನು ರವಾನಿಸಲಾಗಿದೆ.

ಜಪಾನ್ ಕರಾವಳಿಯಲ್ಲಿ ಭೂಕಂಪದ ಕೇಂದ್ರಬಿಂದುವಿನಿಂದ 300 ಕಿಲೋಮೀಟರ್ (190 ಮೈಲುಗಳು) ಒಳಗೆ ಅಪಾಯಕಾರಿ ಸುನಾಮಿ ಅಲೆಗಳು ಏಳುವ ಸಾಧ್ಯತೆ ಇದೆ ಎಂದು ಹವಾಯಿ ಮೂಲದ ಪೆಸಿಫಿಕ್ ಸುನಾಮಿ ಎಚ್ಚರಿಕೆ ಕೇಂದ್ರ ತಿಳಿಸಿದೆ. ಈಗಾಗಲೇ ಟೊಯೋಮಾ ನಗರಕ್ಕೆ ಮೊದಲ ಸುನಾಮಿ ಅಲೆಗಳು ಅಪ್ಪಳಿಸಿವೆ ಎಂದು ಹೇಳಲಾಗಿದೆ. ಇದಕ್ಕೆ ಸಂಬಂಧಿಸಿದ ವಿಡಿಯೋಗಳು ಸಹ ಹರಿದಾಡುತ್ತಿವೆ. ಆದರೆ, ವಿಡಿಯೋಗಳ ಅಧಿಕೃತತೆ ಇನ್ನೂ ಖಚಿತವಾಗಿಲ್ಲ.

## ಬೆಂಗಳೂರು ರಸ್ತೆಯಲ್ಲಿ ಕಾಣಿಸಿಕೊಂಡ ಟೆಸ್ಲಾ ಕಾರು

**ಬೆಂಗಳೂರು:** ಟೆಸ್ಲಾ ಕಾರುಉತ್ಪಾದನೆ ಘಟಕ ಭಾರತಕ್ಕೆ ಬರುವ ಸುದ್ದಿಯ ನಡುವೆಯೇ ಬೆಂಗಳೂರಿನ ರಸ್ತೆಯಲ್ಲಿ ಟೆಸ್ಲಾ ಕಾರೊಂದು ಕಾಣಿಸಿಕೊಂಡಿದ್ದು, ಈ ಕಾರಿನ ಫೋಟೊಗಳು ಸಾಮಾಜಿಕ ಮಾಧ್ಯಮಗಳಲ್ಲಿ ಭಾರಿ ವೈರಲ್ ಆಗಿದೆ. ಬೆಂಗಳೂರಿನ ಕಬ್ಬನ್ ಪಾರ್ಕ್ ಮೆಟ್ರೋ ನಿಲ್ದಾಣದ ಸಮೀಪವಿರುವ ಮಿನ್ಸ್ಕ ಸ್ಕ್ವೇರ್ ಬಳಿ ಟೆಸ್ಲಾ ಕಾರಿನ ಫೋಟೋವನ್ನು ಸೆರೆಹಿಡಿಯಲಾಗಿದೆ.

ಕರ್ನಾಟಕಕ್ಕೆ ಇನ್ನೂ ಟೆಸ್ಲಾ ಕಾರುಗಳು ಲಗ್ಗೆ ಇಟ್ಟಿರದ ಕಾರಣ ಈ ಕಾರು ಓಡಾಡಿರುವುದು ಜನರಲ್ಲಿ ಅಚ್ಚರಿ ಮೂಡಿಸಿದ್ದು, ಈ ಕುರಿತು ಭಾರಿ ಚರ್ಚೆಗಳು ನಡೆಯುತ್ತಿವೆ. ಕೆಲವು ಬಳಕೆದಾರರು ಇದು ದುಬೈನಲ್ಲಿ ನೋಂದಾಯಿಸಲಾದ 'ಖಾಸಗಿ ಕಾರಿನಂತೆ ತೋರುತ್ತಿದೆ' ಎಂದು ಎಕ್ಸ್ ಖಾತೆಯಲ್ಲಿ ಬರೆದುಕೊಂಡಿದ್ದಾರೆ. ಮತ್ತೊಬ್ಬರು, 'ಇದು ಟೆಸ್ಟ್ ಡ್ರೈವ್ ಅಲ್ಲ, ಯಾರೋ ಅಧಿಕೃತ ಭೇಟಿಯಲ್ಲಿದ್ದಾರೆ ಮತ್ತು ದುಬೈನಿಂದ ತಂದು ಕಾರನ್ನು ಓಡಿಸುತ್ತಿದ್ದಾರೆ. ಇದು ಸೀಮಿತ ಅವಧಿಗೆ ಹೆಚ್ಚು ಅನುಮತಿಸಲಾಗಿದೆ' ಎಂದು ಹೇಳಿದ್ದಾರೆ.

ಅಹಮದಾಬಾದ್ ಮಿರರ್ನ ವರದಿಯ ಪ್ರಕಾರ, ಟೆಸ್ಲಾ ತನ್ನ ಕಾರು ಉತ್ಪಾದನಾ ಘಟಕವನ್ನು ಗುಜರಾತ್ನಲ್ಲಿ ಸ್ಥಾಪಿಸುವ ಸಾಧ್ಯತೆಯಿದ್ದು, ಸ್ಥಾವರದ ಘೋಷಣೆಯನ್ನು




ಟೆಸ್ಲಾ ಸಿಇಒ ಎಲೋನ್ ಮಸ್ಕ್ ಅವರ ಸಮ್ಮುಖದಲ್ಲಿ ಮಾಡಲಾಗುವುದು ಎಂದು ತಿಳಿದುಬಂದಿದೆ. ಜನವರಿ 2024 ರಲ್ಲಿ ವೈಬ್ರೆಂಟ್ ಗುಜರಾತ್ ಶೃಂಗಸಭೆಯಲ್ಲಿ ಈ ಬಗ್ಗೆ ಘೋಷಣೆಯನ್ನು ಮಾಡಬಹುದು ಎಂದು ನಿರೀಕ್ಷಿಸಲಾಗಿದೆ. ರಾಜ್ಯ ಸರ್ಕಾರವು ಸನಂದ್, ಧೋಲೇರಾ ಮತ್ತು ಬೆಚರಾಜಿ ಸ್ಥಳಗಳಲ್ಲಿ ಒಂದನ್ನು ಆಯ್ಕೆ ಮಾಡಲು ಟೆಸ್ಲಾಗೆ ಅವಕಾಶ ನೀಡಿದೆ ಎಂದು ವರದಿಯಾಗಿದೆ. ಗುಜರಾತ್ ಸ್ಥಾವರದಿಂದ ದೇಶೀಯ ಮತ್ತು ಅಂತರರಾಷ್ಟ್ರೀಯ ಬೇಡಿಕೆಗಳನ್ನು ಪೂರೈಸಲು ಟೆಸ್ಲಾ ಗುರಿ ಹೊಂದಿದೆ.

# 22ರಿಂದ ಏರ್ ಇಂಡಿಯಾದ ವಿಮಾನಗಳ ಕಾರ್ಯಾಚರಣೆ

**ನವದೆಹಲಿ:** ಏರ್ ಇಂಡಿಯಾ ತನ್ನ ಮೊದಲ ಎ350 ವಿಮಾನವನ್ನು ಜನವರಿ 22ರಿಂದ ದೇಶೀಯ ಮಾರ್ಗಗಳಲ್ಲಿ ಪ್ರಾರಂಭಿಸಲಿದ್ದು, ಬೆಂಗಳೂರಿನಿಂದ ಮುಂಬೈಗೆ ಮೊದಲ ಹಾರಾಟವನ್ನು ನಡೆಸಲಿದೆ.

ಎ350-900 ವಿಮಾನವು 316 ಆಸನಗಳೊಂದಿಗೆ 3 ವರ್ಗದ ಕ್ಯಾಬಿನ್ ಸಂರಚನೆಯನ್ನು ಹೊಂದಿರುತ್ತದೆ. 28 ಬಿಸಿನೆಸ್ ಕ್ಲಾಸ್, 24 ಪ್ರೀಮಿಯಂ ಎಕಾನಮಿ ಮತ್ತು 264 ಎಕಾನಮಿ ಸೀಟುಗಳು ಇರುತ್ತವೆ. 'ಭಾರತದ ಮೊದಲ ಏರ್ಬಸ್ ಎ350 2024ರ ಜನವರಿ 22ರಂದು ವಾಣಿಜ್ಯ ಸೇವೆಯನ್ನು ಪ್ರವೇಶಿಸಲಿದೆ' ಎಂದು ಏರ್ಲೈನ್ ಸೋಮವಾರ ತನ್ನ ಪ್ರಕಟಣೆಯಲ್ಲಿ ತಿಳಿಸಿದೆ. 'ಎ350 ವಿಮಾನವನ್ನು ಆರಂಭದಲ್ಲಿ ಸಿಬ್ಬಂದಿ ಪರಿಚಿತತೆ ಮತ್ತು ನಿಯಂತ್ರಕ ಅನುಸರಣೆ ಉದ್ದೇಶಗಳಿಗಾಗಿ ವಿಮಾನವನ್ನು ದೇಶೀಯ ಮಾರ್ಗಗಳಲ್ಲಿ ಕಾರ್ಯಾಚರಣೆ ನಡೆಸಲಾಗುತ್ತದೆ. ನಂತರ ಖಂಡಗಳಾದ್ಯಂತದ ಸ್ಥಳಗಳಿಗೆ ದೀರ್ಘಾವಧಿಯ ವಿಮಾನಗಳಿಗಾಗಿ ನಿಯೋಜಿಸಲಾಗುವುದು ಎಂದು ತಿಳಿಸಿದೆ. ಎ350 ಮೂಲಕ ನಿರ್ವಹಿಸಲಿರುವ ವಿಮಾನಗಳಿಗಾಗಿ ಏರ್ ಇಂಡಿಯಾ ಸೋಮವಾರ ಬುಕಿಂಗ್ ಆರಂಭಿಸಿದೆ.




## ಗುಜರಾತ್‌ನಲ್ಲಿ ಏಕಕಾಲಕ್ಕೆ 4 ಸಾವಿರಕ್ಕೂ ಹೆಚ್ಚು ನಾಗರಿಕರಿಂದ ಸೂರ್ಯ ನಮಸ್ಕಾರ

**ಮೆಹಸಾನಾ (ಗುಜರಾತ್)** – ಜನವರಿ 1 ರಂದು ಮೊಢೇರಾ ಸೂರ್ಯ ಮಂದಿರ ಸೇರಿದಂತೆ 108 ಸ್ಥಳಗಳಲ್ಲಿ 4 ಸಾವಿರಕ್ಕೂ ಹೆಚ್ಚು ನಾಗರಿಕರು ಏಕಕಾಲದಲ್ಲಿ ಸೂರ್ಯ ನಮಸ್ಕಾರ ಮಾಡಿ 'ಗಿನ್ನಿಸ್ ಬುಕ್ ಆಫ್ ರೆಕಾಡ್ರ್' ನಲ್ಲಿ ಹೊಸ ದಾಖಲೆ ನಿರ್ಮಿಸಿದೆ. ಈ ಸಂದರ್ಭದಲ್ಲಿ ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್, ಗೃಹ ಸಚಿವ ಹರ್ಷ ಸಾಂಘ್ವಿ ಮತ್ತು 'ಗಿನ್ನೆಸ್ ಬುಕ್ ಆಫ್ ರೆಕಾರ್ಡ್ಸ್'ನ ನಿರೀಕ್ಷಕ ಸ್ವಪ್ನಿಲ್ ಡಾಂಗ್ರಿಕ್ ಉಪಸ್ಥಿತರಿದ್ದರು. ಈ ಮಾಹಿತಿಯನ್ನು ಸ್ವತಃ ಪ್ರಧಾನಿ ನರೇಂದ್ರ ಮೋದಿ ಅವರು 'ಎಕ್ಸ್' ಮೂಲಕ ನೀಡಿದ್ದಾರೆ. ಗುಜರಾತ್ ವಿಶೇಷ ಸಾಧನೆಯೊಂದಿಗೆ 2024 ನೇ ವರ್ಷವನ್ನು ಸ್ವಾಗತಿಸಿದೆ ಎಂದು ಅವರು ಹೇಳಿದರು. ಏಕಕಾಲದಲ್ಲಿ 108 ಸ್ಥಳಗಳಲ್ಲಿ ಅತಿ ಹೆಚ್ಚು ಜನ ಸೂರ್ಯ ನಮಸ್ಕಾರ ಮಾಡಿ 'ಗಿನ್ನಿಸ್ ಬುಕ್ ಆಫ್ ರೆಕಾರ್ಡ್ಸ್'ನಲ್ಲಿ ದಾಖಲಾಗಿದ್ದಾರೆ. ನಮ್ಮ ಸಂಸ್ಕೃತಿಯಲ್ಲಿ '108' ಸಂಖ್ಯೆಗೆ ವಿಶೇಷ ಮಹತ್ವವಿದೆ. ಈ ವಿಶ್ವ ದಾಖಲೆಯು ನಡೆದ ಪ್ರಸಿದ್ಧ ಸ್ಥಳಗಳಲ್ಲಿ ಮೊಢೇರಾದ ಸೂರ್ಯ ದೇವಾಲಯವೂ ಸೇರಿತ್ತು. ಅಲ್ಲಿ ಸೂರ್ಯ ನಮಸ್ಕಾರ ಮಾಡುವ ಉಪಕ್ರಮದಲ್ಲಿ ಹಲವರು ಪಾಲ್ಗೊಂಡಿದ್ದರು. ಯೋಗ ಮತ್ತು ಸಾಂಸ್ಕೃತಿಕ ಪರಂಪರೆಯ ಮೇಲಿನ ಅವರ ವಚನಬದ್ಧತೆಗೆ ಇದು ನಿಜವಾದ ಪುರಾವೆಯಾಗಿದೆ. ಪ್ರಧಾನಿ ಮೋದಿಯವರು, ಸೂರ್ಯ ನಮಸ್ಕಾರವನ್ನು ತಮ್ಮ ದೈನಂದಿನ ದಿನಚರಿಯ ಭಾಗವಾಗಿಸುವಂತೆ ಎಲ್ಲಾ ನಾಗರಿಕರಲ್ಲಿ ಮನವಿ ಮಾಡಿದರು.



## ಮಣಿಪುರದಲ್ಲಿ ಮತ್ತೆ ಹಿಂಸಾಚಾರ; ನಾಲ್ವರ ಕಗ್ಗೊಲೆ

**ಗುವಾಹಟಿ:** ಹೊಸ ವರ್ಷಾಚರಣೆ ವೇಳೆ ನಡೆದ ಹಿಂಸಾಚಾರದಲ್ಲಿ ನಾಲ್ವರನ್ನು ಗುಂಡಿಕ್ಕಿ ಹತ್ಯೆ ಮಾಡಿದ ಘಟನೆ ಮಣಿಪರದಲ್ಲಿ ನಡೆದಿದೆಮೈತ್ಯೆ ಮತ್ತು ಕುಕಿ ಸಮುದಾಯದ ನಡುವಿನ ಸಂಘರ್ಷದಿಂದಾಗಿ ಕಳೆದ ಆರೇಳು ತಿಂಗಳಿಂದ ಮಣಿಪುರ ಹಿಂಸಾಚಾರದಿಂದ ತತ್ತರಿಸಿದೆ.

ಈಗ ನಡೆದಿರುವ ಹತ್ಯೆ ಮತ್ತೊಂದು ಸಂಘರ್ಷಕ್ಕೆ ಕಾರಣವಾಗುವ ಸಾಧ್ಯತೆ ಇದೆ. ಈ ಹೊಸ ಹಿಂಸಾಚಾರದ ಬಳಿಕ ರಾಜ್ಯದ ಐದು ಜಿಲ್ಲೆಗಳಲ್ಲಿ ಸಂಪೂರ್ಣ ಕರ್ಫ್ಯೂ ಹೇರಲಾಗಿದೆ. ಈ ದಾಳಿಯಿಂದ ರೊಚ್ಚಿಗೆದ್ದ ಸ್ಥಳೀಯರು ಬಂದೂಕುಧಾರಿಗಳ ವಾಹನಗಳಿಗೆ ಬೆಂಕಿ ಹೆಚ್ಚಿದ್ದಾರೆಂದು ವರದಿಯಾಗಿದೆ.

ತಂಡವು ಬಂದೂಕುಗಳೊಂದಿಗೆ ಇಲ್ಲಿಗೆ ಬಂದಿತು. ತಮಗೆ ಪರಿಚಯವಿರುವವರ ಜತೆ ಮಾತನಾಡುತ್ತಿದ್ದರು ಮತ್ತು ಆಗ ಅವರ ಮಧ್ಯೆ ಜಗಳ ಶುರುವಾಯಿತು. ಜಗಳ ತಾರಕ್ಕೇರುತ್ತಿದ್ದಂತೆ ಎಲ್ಲರ ಮೇಲೂ ಗುಂಡು ಹಾರಿಸಲು ಆರಂಭಿಸಿದರು ಎಂದು ಸ್ಥಳೀಯ ಹೇಳಿದ್ದಾರೆ. ಈ ವೇಳೆ, ಸ್ಥಳದಲ್ಲೇ ನಾಲ್ವರು ಮೃತಪಟ್ಟರೆ ಬಹಳಷ್ಟು ಮಂದಿಗೆ ಗಾಯಗಳಾಗಿವೆ. ಈ ಘಟನೆ ಕುರಿತು ವಿಡಿಯೋ ಸಂದೇಶವನ್ನು ಬಿಡುಗಡೆ ಮಾಡಿರುವ ಮಣಿಪುರ ಮುಖ್ಯಮಂತ್ರಿ ಎನ್ ಬಿರೇನ್ ಸಿಂಗ್ ಅವರು, ಹಿಂಸಾಚಾರವನ್ನು ಖಂಡಿಸಿದ್ದು, ಶಾಂತಿಯನ್ನು ಕಾಪಾಡುವಂತೆ ಜನರಿಗೆ ಮನವಿ ಮಾಡಿದ್ದಾರೆ.

## ಗಾಝಾದಿಂದ ಸಾವಿರಾರು ಸೈನಿಕರನ್ನು ಹಿಂಪಡೆದ ಇಸ್ರೇಲ್

**ಟೆಲ್ ಅವೀವ್:** ಗಾಝಾ ಪ್ರದೇಶದ ಪ್ರಮುಖ ದಕ್ಷಿಣದ ನಗರದಲ್ಲಿ ಯುದ್ಧ ಕೇಂದ್ರೀಕೃತ ಆಗಿರುವುದರಿಂದ ಇಸ್ರೇಲ್ ಗಾಝಾದಿಂದ ಸಾವಿರಾರು ಪಡೆಗಳನ್ನು ಹಿಂದಕ್ಕೆ ಕರೆಸಿಕೊಳ್ಳುತ್ತಿದೆ ಎಂದು ಇಸ್ರೇಲ್ ಸೇನೆ ಸೋಮವಾರ ಹೇಳಿಕೆ ನೀಡಿದೆ.

ಉತ್ತರಾರ್ಧದಲ್ಲಿ ಕಾರ್ಯಾಚರಣೆ ಬಹುತೇಕ ಯಶಸ್ವಿಯಾಗಿದ್ದು ಪ್ರದೇಶದ ಮೇಲೆ ನಿಯಂತ್ರಣ ಸಾಧಿಸುವ ಸಮಯ ಹತ್ತಿರದಲ್ಲಿರುವುದರಿಂದ ಕೆಲವು ಪ್ರದೇಶಗಳಿಂದ ಸೇನೆಯನ್ನು ಹಿಂಪಡೆಯಲಾಗುತ್ತಿದೆ ಎಂದು ವರದಿಯಾಗಿದೆ.

ಆದರೆ ಗಾಝಾದ ಇತರ ಪ್ರದೇಶಗಳಲ್ಲಿ, ವಿಶೇಷವಾಗಿ ದಕ್ಷಿಣದ ಖಾನ್ಯೂನಿಸ್ ಮತ್ತು ಕೇಂದ್ರ ಪ್ರದೇಶಗಳಲ್ಲಿ ಭೀಕರ ಯುದ್ಧ ಮುಂದುವರಿದಿದೆ. ಗಾಝಾವನ್ನು 16 ವರ್ಷದಿಂದ ಆಳುತ್ತಿರುವ ಹಮಾಸ್ ಅನ್ನು ನಿರ್ಮೂಲನೆ ಮಾಡುವವರೆಗೆ ಯುದ್ಧ ಮುಂದುವರಿಯುತ್ತದೆ ಎಂದು ಇಸ್ರೇಲ್ ಘೋಷಿಸಿದೆ. ಅಮೆರಿಕದ ವಿದೇಶಾಂಗ ಸಚಿವ ಅಂಥೋನಿ ಬ್ಲಿಂಕೆನ್ ಗಾಝಾ ಪ್ರದೇಶಕ್ಕೆ



ಭೇಟಿ ನೀಡಲಿರುವ ಸಂದರ್ಭದಲ್ಲೇ ಇಸ್ರೇಲ್ ಗಾಝಾದಿಂದ ಸೇನೆ ಹಿಂಪಡೆಯುವುದಾಗಿ ಘೋಷಿಸಿದೆ.

'ಮುಂದಿನ ವಾರ ತರಬೇತಿ ಮತ್ತು ವಿರಾಮದ ಉದ್ದೇಶದಿಂದ 5 ತುಕಡಿಗಳು, ಹಲವು ಸಾವಿರ ಯೋಧರನ್ನು ಗಾಝಾದಿಂದ ಹಿಂದಕ್ಕೆ ಕರೆಸಿಕೊಳ್ಳಲಾಗುತ್ತಿದೆ. ಯುದ್ಧದ ಉದ್ದೇಶಗಳಿಗೆ ದೀರ್ಘಾವಧಿಯ ಹೋರಾಟದ ಅಗತ್ಯವಿದೆ ಮತ್ತು ಅದಕ್ಕೆ ಅನುಗುಣವಾಗಿ ನಾವು ಸನ್ನದ್ಧರಾಗುತ್ತಿದ್ದೇವೆ' ಎಂದು ಸೇನೆಯ ವಕ್ತಾರ ಅಡ್ಮಿರಲ್ ಡೇನಿಯಲ್ ಹೆಗಾರಿ ಹೇಳಿದ್ದಾರೆ.

ಈ ಮಧ್ಯೆ, ಖಾನ್ಯೂನಿಸ್ ನಗರದ ಪಶ್ಚಿಮ ಮತ್ತು ಮಧ್ಯಭಾಗದಲ್ಲಿ ರವಿವಾರ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ ಹಲವರು ಮೃತಪಟ್ಟಿದ್ದು ವ್ಯಾಪಕ ಹಾನಿ ಸಂಭವಿಸಿದೆ. ಗ್ರಾಮೀಣ ನಿರಾಶ್ರಿತರ ಶಿಬಿರದ ಮೇಲೆಯೂ ವೈಮಾನಿಕ ದಾಳಿ ನಡೆದಿರುವ ವರದಿಯಾಗಿದೆ ಎಂದು 'ಫೆಲೆಸ್ತೀನಿಯನ್ ರೆಡ್ಕೆಸೆಂಟ್' ವರದಿ ಮಾಡಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಶೂಟಿಂಗ್‌ಗಾಗಿ ಇಟಲಿಗೆ ಹಾರಲಿದ್ದಾರೆ ಗಣೇಶ್




ಶ್ರೀನಿವಾಸರಾಜು ನಿರ್ದೇಶನದಲ್ಲಿ ಗೋಲ್ಡನ್ ಸ್ಟಾರ್ ಗಣೇಶ್ ನಾಯಕರಾಗಿ ನಟಿಸುತ್ತಿರುವ 'ಕೃಷ್ಣಂ ಪ್ರಣಯ ಸಖಿ' ಚಿತ್ರದ ಎರಡು ಹಾಡುಗಳ ಚಿತ್ರೀಕರಣ ಇಟಲಿ ಮತ್ತು ಮಾಲ್ಟಾದಲ್ಲಿ ನಡೆಯಲಿದೆ. ಗೋಲ್ಡನ್ ಸ್ಟಾರ್ ಗಣೇಶ್, ಮಾಳವಿಕ ನಾಯರ್ ಹಾಗೂ ಶರಣ್ಯ ಶೆಟ್ಟಿ ಹಾಡುಗಳ ಚಿತ್ರೀಕರಣದಲ್ಲಿ ಪಾಲ್ಗೊಳಲಿದ್ದಾರೆ.

ಹಾಡುಗಳ ಚಿತ್ರೀಕರಣಕ್ಕಾಗಿ ಮೂವತ್ತು ಜನರ ತಂಡ ಇಟಲಿಗೆ ಪ್ರಯಾಣ ಬೆಳಸಲಿದೆ. ಹೊಸವರ್ಷ ಆರಂಭದ ಸಂದರ್ಭದಲ್ಲಿ ಹೊಸ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ ಎಲ್ಲರಿಗೂ ಚಿತ್ರತಂಡ ಹೊಸವರ್ಷದ ಶುಭಾಶಯ ತಿಳಿಸಿದೆ.

ಯಶಸ್ವಿ ಚಿತ್ರಗಳ ನಿರ್ದೇಶಕ ಶ್ರೀನಿವಾಸರಾಜು ನಿರ್ದೇಶನದ ಈ ಚಿತ್ರದಲ್ಲಿ ಐದು ಹಾಡುಗಳಿದ್ದು, ಅರ್ಜುನ್ ಜನ್ಯ ಸಂಗೀತ ನೀಡಿದ್ದಾರೆ. ವೆಂಕಟ್ ಪ್ರಸಾದ್ ಛಾಯಾಗ್ರಹಣ ಹಾಗೂ ಕೆ.ಎಂ.ಪ್ರಕಾಶ್ ಸಂಕಲನ ಕೃಷ್ಣಂ ಪ್ರಣಯ ಸಖಿ ಚಿತ್ರಕ್ಕಿದೆ.

ತ್ರಿಶೂಲ್ ಎಂಟರ್ಟೈನ್ಮೆಂಟ್ ಲಾಂಛನದಲ್ಲಿ ಪ್ರಶಾಂತ್ ಜಿ ರುದ್ರಪ್ಪ ನಿರ್ಮಾಣ ಮಾಡುತ್ತಿದ್ದಾರೆ. ಕೃಷ್ಣಂ ಪ್ರಣಯ ಸಖಿ ಗೋಲ್ಡನ್ ಸ್ಟಾರ್ ಗಣೇಶ್ ಅಭಿನಯದ 41 ನೇ ಚಿತ್ರ. ಗಣೇಶ್ ಅವರಿಗೆ ನಾಯಕಿಯಾಗಿ ಮಾಳವಿಕ ನಾಯರ್ ನಟಿಸಿದ್ದಾರೆ. ಶರಣ್ಯ ಶೆಟ್ಟಿ, ಶ್ರೀನಿವಾಸಮೂರ್ತಿ, ಸಾಧುಕೋಕಿಲ, ರಂಗಾಯಣ ರಘು, ಶಶಿಕುಮಾರ್, ಶ್ರುತಿ, ಭಾವನ, ಅಶೋಕ್, ರಾಮಕೃಷ್ಣ, ಶಿವಧ್ವಜ್, ರಘುರಾಮ್, ಮಾನಸಿ ಸುಧೀರ್, ಅಂಬುಜ, ಗಿರಿ ಶಿವಣ್ಣ ಮುಂತಾದ ಕಲಾವಿದರು ಚಿತ್ರದ ತಾರಾಬಳಗದಲ್ಲಿದ್ದಾರೆ.

# ಶಿವಣ್ಣ ನಟನೆಯ 131ನೇ ಸಿನಿಮಾದ ಪೋಸ್ಟರ್ ಹಂಚಿಕೊಂಡ ಟೀಮ್




ಹೊಸ ವರ್ಷದ ಮುನ್ನ ದಿನ ಶಿವರಾಜ್ ಕುಮಾರ್ ಅಭಿಮಾನಿಗಳಿಗೆ ಸಿಹಿ ಸುದ್ದಿ ಕೊಟ್ಟಿದ್ದರು ದಿನಕರ್ ತೂಗುದೀಪ್. ಶಿವರಾಜ್ ಕುಮಾರ್ ಅವರ ಚಿತ್ರ ಮಾಡುವುದಾಗಿ ಘೋಷಿಸಿಕೊಂಡಿದ್ದರು. ಇದೀಗ ಶಿವಣ್ಣ ನಟನೆಯ 131ನೇ ಚಿತ್ರದ ಪೋಸ್ಟರ್ ಅನ್ನು ಹಂಚಿಕೊಂಡಿದ್ದಾರೆ. ಈ ಮೂಲಕ ಶಿವರಾಜ್ ಕುಮಾರ್ ಅಭಿಮಾನಿಗಳ ಕುತೂಹಲವನ್ನು ಹೆಚ್ಚಿಸಿದ್ದಾರೆ.

ಉತ್ಸಾಹದ ಚಿಲುಮೆಯಂತಿರುವ ಖ್ಯಾತ ನಟ ಕರುನಾಡ ಚಕ್ರವರ್ತಿ ಶಿವರಾಜಕುಮಾರ್ ನಾಯಕರಾಗಿ ನಟಿಸಲಿರುವ ನೂತನ ಚಿತ್ರ ಹೊಸವರ್ಷಕ್ಕೆ ಘೋಷಣೆಯಾಗಿದೆ. ಹೆಸರಾಂತ ನಿರ್ದೇಶಕ ದಿನಕರ್ ತೂಗುದೀಪ ಈ ಚಿತ್ರವನ್ನು ನಿರ್ದೇಶಿಸುತ್ತಿದ್ದಾರೆ.

ಬಿಂದ್ಯಾ ಮೂವೀಸ್ ಲಾಂಛನದಲ್ಲಿ ಆರ್ ಕೇಶವ್ ಹಾಗೂ ಬಿ.ಎಸ್ ಸುಧೀಂದ್ರ ಈ ಚಿತ್ರವನ್ನು ನಿರ್ಮಾಣ ಮಾಡುತ್ತಿದ್ದಾರೆ. ಪಕ್ಕಾ ಮಾಸ್ ಹಾಗೂ ಕಮರ್ಷಿಯಲ್ ಕಥಾಹಂದರ ಹೊಂದಿರುವ ಈ ಚಿತ್ರಕ್ಕೆ ಪ್ರಿಯದರ್ಶಿನಿ ರಾಮರೆಡ್ಡಿ ಕಥೆ ಬರೆದಿದ್ದಾರೆ. ಪ್ರೀ ಪ್ರೊಡಕ್ಷನ್ ವರ್ಕ್ ಬಿರುಸಿನಿಂದ ಸಾಗುತ್ತಿದೆ. ಉಳಿದ ತಾರಾಬಳಗ ಹಾಗೂ ತಾಂತ್ರಿಕವರ್ಗದ ಆಯ್ಕೆ ನಡೆಯುತ್ತಿದೆ. ಮಹಾ ಶಿವರಾತ್ರಿ ಹಬ್ಬದ ವೇಳೆಗೆ ಶೀರ್ಷಿಕೆ ಬಿಡುಗಡೆಯಾಗಲಿದೆ.

ಸೆಂಚುರಿ ಸ್ಟಾರ್ ಶಿವರಾಜಕುಮಾರ್ ಹಾಗೂ ದಿನಕರ್ ತೂಗುದೀಪ ಅವರ ಕಾಂಬಿನೇಶನ್ ನಲ್ಲಿ ಮೂಡಿಬರಲಿರುವ ಈ ಚಿತ್ರದ ಕುರಿತು ಅಭಿಮಾನಿ ವಲಯದಲ್ಲಿ ಹಾಗೂ ಚಿತ್ರೋದ್ಯಮದಲ್ಲಿ ಸಾಕಷ್ಟು ನಿರೀಕ್ಷೆಯಿದೆ.



# ಸ್ವಾತಿ ಮುತ್ತಿನ ಮಳೆ ಹನಿಯೇ ನಂತರ ಮತ್ತೊಂದು ಸಿನಿಮಾದಲ್ಲಿ ಸಿರಿ



2023ಕ್ಕೆ ಗುಡ್ ಬಾಯ್ ಹೇಳಿ 2024ರನ್ನು ಅದ್ದೂರಿಯಾಗಿ ಸ್ವಾಗತಿಸಿದ್ದೇವೆ. ಹೊಸ ವರ್ಷಕ್ಕೆ ಕಾಲಿಟ್ಟಾಗಿದೆ. ಎಲ್ಲೆಡೆ ಸಂಭ್ರಮ ಮನೆ ಮಾಡಿದೆ. ಕನ್ನಡ ಚಿತ್ರರಂಗ ಕೂಡ ಹೊಸ ಜೋಶ್ ನಿಂದ 2024ಕ್ಕೆ ಹಾಯ್ ಹೇಳಿದೆ. ಹೊಸ ವರ್ಷದ ಸುಸಂದರ್ಭದಲ್ಲಿ ಹೊಸ ಹೊಸ ಸಿನಿಮಾಗಳು ಘೋಷಣೆಯಾಗಿವೆ. ಅದರಂತೆ 'ಬಿಸಿ-ಬಿಸಿ Ice-Cream' ಕಥೆ ಹೇಳೋದಿಕ್ಕೆ ಸಿದ್ದವಾಗ್ತಿದ್ದಾರೆ ಅರವಿಂದ್ ಶಾಸ್ತ್ರಿ.

ಈ ಹಿಂದೆ ಕಹಿ, ಅಳಿದು ಉಳಿದವರು ಸಿನಿಮಾ ನಿರ್ದೇಶಿಸಿದ್ದ ಅರವಿಂದ್ ಶಾಸ್ತ್ರಿ 'ಬಿಸಿ-ಬಿಸಿ Ice-Cream' ಗೆ ಕಥೆ ಬರೆದು ಆಕ್ಷನ್ ಕಟ್ ಹೇಳುವುದರ ಜೊತೆಗೆ ಸಂಕಲನದ ಜವಾಬ್ದಾರಿ ಹೊತ್ತುಕೊಂಡಿದ್ದಾರೆ. ಹೊಸ ವರ್ಷಕ್ಕೆ ಟೈಟಲ್ ರಿವೀಲ್ ಮಾಡಿರುವ ಚಿತ್ರತಂಡ, ಈಗಾಗಲೇ ಸದ್ದಿಲ್ಲದೇ ಶೂಟಿಂಗ್ ಮುಗಿಸಿ ಬಿಡುಗಡೆ ಹೊಸ್ತಿಲಿನಲ್ಲಿ ನಿಂತಿದೆ.

ಐಸ್ ಕ್ರೀಂ ಬಿಸಿ ಬಿಸಿಯಾಗಿರುತ್ತಾ ನೋ ಚಾನ್ಸ್. ಸಿನಿಮಾದ ಕಥೆಗೆ ಸೂಕ್ತ ಎನ್ನುವ ಕಾರಣಕ್ಕೆ ಅರವಿಂದ್ ಈ ಟೈಟಲ್ ಫಿಕ್ಸ್ ಮಾಡಿದ್ದಾರೆ. ಡಾರ್ಕ್ ಕಾಮಿಡಿ ರೋಮ್ಯಾನ್ಸ್ ಕಥಾಹಂದರ ಹೊಂದಿರುವ ಈ ಚಿತ್ರದಲ್ಲಿ ಅರವಿಂದ್ ಐಯ್ಯರ್ -ಸಿರಿ ರವಿಕುಮಾರ್ ಜೋಡಿಯಾಗಿ ನಟಿಸುತ್ತಿದ್ದು, ಗೋಪಾಲಕೃಷ್ಣ ದೇಶಪಾಂಡೇ ಮುಖ್ಯಭೂಮಿಕೆಯಲ್ಲಿ ನಟಿಸುತ್ತಿದ್ದಾರೆ.

4 ವರ್ಷದ ಬಳಿಕ ಮತ್ತೆ ಡೈರೆಕ್ಟರ್ ಕ್ಯಾಪ್ ತೊಟ್ಟಿರುವ ಅರವಿಂದ್ ಶಾಸ್ತ್ರಿ ಒಂದೊಳ್ಳೆ ಫ್ರೆಶ್ ಕಥೆ ಮೂಲಕ ಪ್ರೇಕ್ಷಕರ ಎದುರು ಹಾಜರಾಗುತ್ತಿದ್ದಾರೆ. ನಕುಲ್ ಅಭ್ಯಂಕರ್ ಸಂಗೀತ ನಿರ್ದೇಶನ, ಎನೋಷ್ ಒಲಿವೇರಾ ಛಾಯಾಗ್ರಹಣ ಚಿತ್ರಕ್ಕಿದೆ. ಬೋಯಿಲ್ಡ್ ಬೀನ್ಸ್ ಪಿಕ್ಚರ್ಸ್ ಬ್ಯಾನರ್ ನಡಿ ಅಕ್ಷರ ಭಾರದ್ವಾಜ್ 'ಬಿಸಿ-ಬಿಸಿ Ice-Cream' ಸಿನಿಮಾಗೆ ಬಂಡವಾಳ ಹಾಕಿದ್ದಾರೆ. ಬೆಂಗಳೂರು ಸುತ್ತಮುತ್ತ ಚಿತ್ರೀಕರಣ ನಡೆಸಲಾಗಿದ್ದು, ಸದ್ಯ ಟೈಟಲ್ ರಿವೀಲ್ ಮಾಡುವ ಮೂಲಕ ಚಿತ್ರತಂಡ ಪ್ರಮೋಷನ ಕಹಳೆ ಮೊಳಗಿಸಿದೆ.

# ನಿವೃತ್ತಿ ಬೆನ್ನಲ್ಲೇ ಕ್ಯಾಪಿಟಲ್ಸ್ ತಂಡದ ಕ್ಯಾಪ್ಟನ್ ಆದ ವಾರ್ನರ್




ಆಸ್ಟ್ರೇಲಿಯಾ ತಂಡದ ಎಡಗೈ ಆರಂಭಿಕ ಆಟಗಾರ ಡೇವಿಡ್ ವಾರ್ನರ್ ಏಕದಿನ ಕ್ರಿಕೆಟ್ ಗೆ ನಿವೃತ್ತಿ ಘೋಷಿಸಿದ್ದಾರೆ. ಜನವರಿ 3 ರಿಂದ ಶುರುವಾಗಲಿರುವ ಪಾಕಿಸ್ತಾನ್ ವಿರುದ್ಧದ ಕೊನೆಯ ಟೆಸ್ಟ್ ಪಂದ್ಯದ ಮೂಲಕ ಟೆಸ್ಟ್ ಕ್ರಿಕೆಟ್ ಗೂ ವಿದಾಯ ಹೇಳಲಿದ್ದಾರೆ.

ಆದರೆ ಇತ್ತ ಏಕದಿನ ಕ್ರಿಕೆಟ್ ಗೆ ವಿದಾಯ ಹೇಳಿದ ಬೆನ್ನಲ್ಲೇ ವಾರ್ನರ್ ಅವರು ಇಂಟರ್ ನ್ಯಾಷನಲ್ ಟಿ20 ಲೀಗ್ ಕ್ರಿಕೆಟ್ ನಲ್ಲಿ ಕ್ಯಾಪ್ಟನ್ ಪಟ್ಟ ದೊರೆತಿದೆ. ಅದು ಕೂಡ ಪ್ರತಿಷ್ಠಿತ ದುಬೈ ಕ್ಯಾಪಿಟಲ್ಸ್ ತಂಡದ ನಾಯಕನಾಗಿ ಎಂಬುದು ವಿಶೇಷ. ಹೌದು, ಯುಎಇನಲ್ಲಿ ನಡೆಯಲಿರುವ ಇಂಟರ್ ನ್ಯಾಷನಲ್ ಟಿ20 ಲೀಗ್ ಕ್ರಿಕೆಟ್ (ಟಿಐಟಿ20) ನಲ್ಲಿ ಡೇವಿಡ್ ವಾರ್ನರ್ ದುಬೈ ಕ್ಯಾಪಿಟಲ್ಸ್ ತಂಡವನ್ನು ಮುನ್ನಡೆಸಲಿದ್ದಾರೆ. ಕಳೆದ ಸೀಸನ್ ನಲ್ಲಿ ದುಬೈ ಕ್ಯಾಪಿಟಲ್ಸ್ ತಂಡವನ್ನು ವೆಸ್ಟ್ ಇಂಡೀಸ್ ಆಟಗಾರ ರೋವ್ ಮನ್ ಪೊವೆಲ್ ಮುನ್ನಡೆಸಿದ್ದರು.

ಇದೀಗ ಏಕದಿನ ಹಾಗೂ ಟೆಸ್ಟ್ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿರುವ ವಾರ್ನರ್ ಅವರನ್ನು ಡೆಲ್ಲಿ ಕ್ಯಾಪಿಟಲ್ಸ್ ಮಾಲೀಕತ್ವದ ದುಬೈ ಕ್ಯಾಪಿಟಲ್ಸ್ ಫ್ರಾಂಚೈಸಿಯು ನೂತನ ನಾಯಕನಾಗಿ ಆಯ್ಕೆ ಮಾಡಿದೆ. ವಿಶೇಷ ಎಂದರೆ 2023 ರಲ್ಲಿ ರಿಷಭ್ ಪಂತ್ ಅನುಪಸ್ಥಿತಿಯಲ್ಲಿ ವಾರ್ನರ್ ಡೆಲ್ಲಿ ಕ್ಯಾಪಿಟಲ್ಸ್ ತಂಡವನ್ನು ಮುನ್ನಡೆಸಿದ್ದರು.

ಇದೀಗ ದುಬೈ ಕ್ಯಾಪಿಟಲ್ಸ್ ತಂಡದ ನಾಯಕತ್ವದೊಂದಿಗೆ ಹೊಸ ಲೀಗ್ ನಲ್ಲಿ ಕಣಕ್ಕಿಳಿಯಲು ವಾರ್ನರ್ ಸಜ್ಜಾಗಿದ್ದಾರೆ. ಅದರಂತೆ 37 ಜನವರಿ 20 ರಿಂದ ಫೆಬ್ರವರಿ 18 ರವರೆಗೆ ನಡೆಯಲಿರುವ ILT20 2024ರಲ್ಲಿ ದುಬೈ ಕ್ಯಾಪಿಟಲ್ಸ್ ತಂಡವನ್ನು ಡೇವಿಡ್ ವಾರ್ನರ್ ಮುನ್ನಡೆಸಲಿದ್ದಾರೆ.

# ಅಯೋಧ್ಯೆಯ ರಾಮನನ್ನೇಕೆ ಹೋಗಿ ಪೂಜಿಸಬೇಕು



**ಚಿತ್ರದುರ್ಗ:** 'ಸಿಎಂ ಸಿದ್ದರಾಮಯ್ಯ ಅವರೇ ಒಬ್ಬ ರಾಮ, ಇನ್ನು ಅವರು ಆ ರಾಮನನ್ನು (ಅಯೋಧ್ಯೆಯ ರಾಮನ ಉದ್ದೇಶಿಸಿ) ಹೋಗಿ ಯಾಕೆ ಪೂಜಿಸಬೇಕು' ಎಂದು ಕಾಂಗ್ರೆಸ್ ನಾಯಕ, ಮಾಜಿ ಸಚಿವ ಹೆಚ್ ಆಂಜನೇಯ ಪ್ರಶ್ನಿಸಿದರು. ಅಯೋಧ್ಯೆಯ ರಾಮ ಮಂದಿರ ಉದ್ಘಾಟನೆಗೆ ಸಿಎಂ ಸಿದ್ದರಾಮಯ್ಯ ಅವರಿಗೆ ಆಹ್ವಾನ ನೀಡಿಲ್ಲ ಎಂಬ ಕುರಿತಾದ ಚರ್ಚೆಗೆ ಚಿತ್ರದುರ್ಗದಲ್ಲಿ ಪ್ರತಿಕ್ರಿಯಿಸಿದ ಅವರು, ರಾಮಮಂದಿರ ಉದ್ಘಾಟನೆಗೆ ಕರೆಯದಿದ್ದದ್ದೇ ಒಳ್ಳೆಯದಾಯಿತು. ಸ್ವತ: ಸಿದ್ದರಾಮಯ್ಯ ಅವರೇ ರಾಮ, ಇನ್ನು ಆ ರಾಮನಿಗೇಕೆ ಹೋಗಿ ಪೂಜಿಸಬೇಕು ಎಂದು ಹೇಳಿದರು.

ಸಿದ್ಧರಾಮನಹುಂಡಿಯಲ್ಲಿ ರಾಮನ ದೇವಸ್ಥಾನ ಇದೆ, ಪೂಜಿಸುತ್ತಾರೆ. ಅಯೋಧ್ಯೆಯಲ್ಲಿರುವುದು ಬಿಜೆಪಿ ರಾಮ. ಬಿಜೆಪಿಯವರನ್ನು ಕರೆಸಿಕೊಂಡು ಭಜನೆ ಮಾಡುತ್ತಾರೆ. ನಮ್ಮ ರಾಮ ಎಲ್ಲಾ ಕಡೆಗೂ ಇದ್ದಾನೆ, ನಾನು ಆಂಜನೇಯ. ನಾವೆಲ್ಲಾ ಶ್ರೀರಾಮನ ಭಕ್ತರು ಎಂದು ಅವರು ಹೇಳಿದರು.

ನಮ್ಮ ಸಮುದಾಯದವರು ರಾಮ, ಆಂಜನೇಯ, ಹನುಮಂತ ಹೆಸರಿಟ್ಟುಕೊಳ್ಳುತ್ತಾರೆ. ರಾಮ, ಆಂಜನೇಯ ನಮ್ಮ ವರ್ಗಕ್ಕೆ ಸೇರಿದವರು. ಬಿಜೆಪಿಯವರದ್ದು ಧರ್ಮಗಳನ್ನು ಒಡೆದಾಳುವ ನೀತಿ. ಒಂದು ಧರ್ಮದ ವಿರುದ್ಧ ಟೀಕಿಸಿ ಮತ ಬ್ಯಾಂಕ್ ಸೃಷ್ಟಿಸುವ ಭ್ರಮೆ ಬಿಜೆಪಿಗಿದೆ ಎಂದು ಆಂಜನೇಯ ಟೀಕಿಸಿದರು.

ಬಿಜೆಪಿ ಆಡಳಿತದಲ್ಲಿ ಯಾರಿಗೆ ಅನುಕೂಲ ಆಗಿದೆ ಹಿಂದೂ ಯುವಕರಿಗೆ ಬಿಜೆಪಿ ಆಡಳಿತದಿಂದ ಅನುಕೂಲ ಆಗಿದೆಯೆ ನಾವೆಲ್ಲಾ ಹಿಂದೂಗಳೇ, ಹಿಂದೂ, ಹಿಂದೂ ಧರ್ಮವನ್ನ ಬಿಜೆಪಿ ಕೊಂಡುಕೊಂಡಿಲ್ಲ. ಧರ್ಮದಲ್ಲಿನ ಮೇಲು ಕೀಳು, ಶೋಷಣೆಗೆ ಪರಿಹಾರ ನೀಡಿದ್ದಾರೆಯೇ ಎಂದು ಆಂಜನೇಯ ಪ್ರಶ್ನಿಸಿದರು.

ಮಂದಿರ ನಿರ್ಮಾಣ ಸಾಕು, ಮನೆ-ಮನ ಕಟ್ಟುವ ಕೆಲಸ ಆಗಬೇಕು. ದೇಶದ ಅನೇಕ ಜನ ನಾಯಿ ನರಿ ವಾಸಿಸಲು ಯೋಗ್ಯವಲ್ಲದ ಸ್ಥಳಗಳಲ್ಲಿ ವಾಸವಾಗಿದ್ದಾರೆ. ಅಂಥವರ ಕಣ್ಣೊರೆಸಿ ಸೂರುಕೊಟ್ಟು ರಕ್ಷಣೆ ಮಾಡುವ ಕೆಲಸ ಆಗಲಿ. ಸೂರಿಲ್ಲದವರಿಗೆ ಮನೆ ಕಟ್ಟಿಸಿ ರಾಮಮಂದಿರ ಅಂತ ಹೆಸರಿಡಿ. ಆಗ ನಿಜವಾದ ರಾಮ ಬಂದು ಆಶೀರ್ವದಿಸುತ್ತಾನೆ. ಓಟಿನ ರಾಮ ಅಲ್ಲ, ಓಟಿಗಾಗಿ ಬಿಜೆಪಿ ರಾಮನ ಮಾಡುವುದು ಬೇಡ ಎಂದು ಆಂಜನೇಯ ಆಕ್ರೋಶ ವ್ಯಕ್ತಪಡಿಸಿದರು.

# ಚೆನ್ನೈ ಸೂಪರ್ ಕಿಂಗ್ಸ್ ಅಭಿಮಾನಿಯ ಹೃದಯವನ್ನು ಗೆದ್ದ ರಚಿನ್ ರವೀಂದ್ರ



ಇಂಡಿಯನ್ ಪ್ರೀಮಿಯರ್ ಲೀಗ್ 2024 ಹರಾಜು ಪ್ರಕ್ರಿಯೆ ಇತ್ತೀಚೆಗಷ್ಟೆ ಮುಕ್ತಾಯಗೊಂಡಿತು. ಈ ಬಾರಿಯ ಹರಾಜಿನಲ್ಲಿ ಕೆಲ ಅಚ್ಚರಿಯ ಆಯ್ಕೆಗಳು, ದುಬಾರಿ ಹರಾಜು ಕೂಡ ನಡೆದವು. ಕೆಲವೇ ದಿನಗಳಲ್ಲಿ ಐಪಿಎಲ್ 2024 ವೇಳಾಪಟ್ಟಿ ಕೂಡ ಪ್ರಕಟವಾಗುವ ಸಾಧ್ಯತೆ ಇದೆ. ಕಳೆದ ವರ್ಷ ನಡೆದ ಐಸಿಸಿ ಏಕದಿನ ವಿಶ್ವಕಪ್ ನಲ್ಲಿ ಮಿಂಚಿದ್ದ ಕೆಲ ಸ್ಟಾರ್ ಆಟಗಾರರು ಈ ಬಾರಿಯ ಹರಾಜಿನಲ್ಲಿ ಉತ್ತಮ ಮೊತ್ತಕ್ಕೆ ಸೇಲ್ ಆದರು. ಈ ಪೈಕಿ ನ್ಯೂಝಿಲೆಂಡ್ ತಂಡದ ಭವಿಷ್ಯದ ಆಲ್‌ರೌಂಡರ್ ರಚಿನ್ ರವೀಂದ್ರ ಕೂಡ ಒಬ್ಬರು. ಡಿಸೆಂಬರ್ 19 ರಂದು ದುಬೈನಲ್ಲಿ ನಡೆದ ಐಪಿಎಲ್ 2024 ಮಿನಿ ಹರಾಜಿನಲ್ಲಿ ರಚಿನ್ ಅವರನ್ನು ಚೆನ್ನೈ ಸೂಪರ್ ಕಿಂಗ್ಸ್ ಫ್ರಾಂಚೈಸಿ ಖರೀದಿಸಿತು. ಯುವ ಆಲ್‌ರೌಂಡರ್ ಗಾಗಿ ಸಿಎಸ್ ಕೆ, ಡೆಲ್ಲಿ ಕ್ಯಾಪಿಟಲ್ಸ್ ಮತ್ತು ಪಂಜಾಬ್ ಕಿಂಗ್ಸ್ ಬಿಡ್ ಮಾಡಿತು. ಅಂತಿಮವಾಗಿ ಎಂಎಸ್ ಧೋನಿ ನೇತೃತ್ವದ ತಂಡ ರಚಿನ್ ಅವರನ್ನು 1.80 ಕೋಟಿ ರೂ. ನೀಡಿ ಖರೀದಿಸಿತು.

ಇದೀಗ ರಚಿನ್ ರವೀಂದ್ರ, ಅವರು ಚೆನ್ನೈ ಸೂಪರ್ ಕಿಂಗ್ಸ್ ಅಭಿಮಾನಿಯ ಹೃದಯವನ್ನು ಗೆದ್ದಿದ್ದಾರೆ. ನ್ಯೂಝಿಲೆಂಡ್‌ನಲ್ಲಿ ರವೀಂದ್ರ ಸಿಎಸ್ ಕೆ ಅಭಿಮಾನಿಗಳ ಪೋಸ್ಟರ್‌ಗೆ ಸಹಿ ಹಾಕಿ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗುತ್ತಿರುವ ವಿಡಿಯೋದಲ್ಲಿ, ರಚಿನ್ ತನ್ನ ಕಾರಿನಿಂದ ಇಳಿದ ತಕ್ಷಣ ಚೆನ್ನೈ ಅಭಿಮಾನಿಯ ಮನವಿಗೆ ಸಮ್ಮತಿಸುತ್ತಿರುವುದನ್ನು ಕಾಣಬಹುದು. ಪೋಸ್ಟರ್‌ನಲ್ಲಿ ಸಿಎಸ್‌ಕೆ ಲಾಂಛನದ ಮೇಲೆ ರಚಿನ್ ಸಹಿ ಮಾಡಿದ್ದಾರೆ.

ರಚಿನ್ ಈ ಋತುವಿನಲ್ಲಿ ಇಂಡಿಯನ್ ಪ್ರೀಮಿಯರ್ ಲೀಗ್ ಗೆ ಚೊಚ್ಚಲ ಪ್ರವೇಶವನ್ನು ಮಾಡಲಿದ್ದಾರೆ. ಈ ಬಗ್ಗೆ ಸ್ವತಃ ಅವರೇ ಖಚಿತಪಡಿಸಿದ್ದಾರೆ. 2023ರ ವಿಶ್ವಕಪ್‌ನಲ್ಲಿ ಅದ್ಭುತ ಆಟವಾಡಿದ ರಚಿನ್ ಐಪಿಎಲ್ ಫ್ರಾಂಚೈಸಿಗಳ ಗಮನ ಸೆಳೆದಿದ್ದರು. ಚೊಚ್ಚಲ ವಿಶ್ವಕಪ್ ಆಡಿದ ರಚಿನ್ 10 ಪಂದ್ಯಗಳಲ್ಲಿ 578 ರನ್ ಗಳಿಸಿದರು. ಇವರು ಈವರೆಗೆ 53 ಟಿ20 ಪಂದ್ಯಗಳನ್ನು ಆಡಿದ್ದು, 618 ರನ್ ಹಾಗೂ 41 ವಿಕೆಟ್ ಪಡೆದಿದ್ದಾರೆ.

ರಚಿನ್ ಹೊರತಾಗಿ, ಸಿಎಸ್ ಕೆ ಹರಾಜಿನಲ್ಲಿ ನ್ಯೂಝಿಲೆಂಡ್ ತಂಡದ ಆಟಗಾರ ಡ್ಯಾರಿಲ್ ಮಿಚೆಲ್ ಅವರನ್ನು ಕೂಡ ಖರೀದಿಸಿತು. ಈ ಸ್ಟಾರ್ ಆಲ್ ರೌಂಡರ್ ಗೆ ಹರಾಜಿನಲ್ಲಿ ಹಣದ ಮಳೆ ಸುರಿಯಿತು. ಬರೋಬ್ಬರಿ 14 ಕೋಟಿ ರೂ. ಗೆ ಸಿಎಸ್ ಕೆ ಸೇರಿದರು. ಅಂತೆಯೆ ಚೆನ್ನೈ ಶಾರ್ದೂಲ್ ಠಾಕೂರ್ ಅವರನ್ನು 4 ಕೋಟಿ ನೀಡಿ ಮರಳಿ ಕರೆಸಿದೆ. ಹಳದಿ ಸೇನೆಯು ಅನ್ ಕ್ಯಾಪ್ಡ್ ಸಮೀರ್ ರಿಜ್ವಿಗಾಗಿ 8.40 ಕೋಟಿ ರೂ. ನೀಡಿದೆ. ಮುಸ್ತಾಫಿಜುರ್ ರೆಹಮಾನ್ ಅವರನ್ನು ಬಿಡ್ ಮಾಡಿದ ಏಕೈಕ ತಂಡ ಸಿಎಸ್ ಕೆ ಆಗಿದ್ದು, ಅವರು ತಮ್ಮ ಮೂಲ ಬೆಲೆ 2 ಕೋಟಿಗೆ ಸೇರಿಕೊಂಡರು.

ಅಂತೆಯೆ ಐಪಿಎಲ್ 2024 ರಲ್ಲಿ ಧೋನಿ ಸಿಎಸ್‌ಕೆಯನ್ನು ಮುನ್ನಡೆಸುವುದು ಖಚಿತವಾಗಿದೆ. ಐಪಿಎಲ್ 2023ರ ವೇಳೆ ಮೊಣಕಾಲಿನ ಗಾಯಕ್ಕೆ ತುತ್ತಾಗಿದ್ದ ಧೋನಿ ಇದೀಗ ಚೇತರಿಸಿಕೊಂಡಿದ್ದಾರೆ. ಶೀಘ್ರದಲ್ಲೇ ಐಪಿಎಲ್ 2024ಕ್ಕೆ ಸಿದ್ಧತೆಗಳನ್ನು ಪ್ರಾರಂಭಿಸಲಿದ್ದಾರೆ.

## ಬಾಕಿ ಉಳಿಸಿಕೊಂಡಿರುವ ಆಸ್ತಿ ತೆರಿಗೆ

# 6 ಲಕ್ಷ ಮಂದಿಗೆ ಬಿಬಿಎಂಪಿ ಎಚ್ಚರಿಕೆ



**ಬೆಂಗಳೂರು:** ಆಸ್ತಿ ತೆರಿಗೆ ಕಟ್ಟದೆ ಬಾಕಿ ಉಳಿಸಿಕೊಂಡಿರುವವರ ವಿರುದ್ಧ ಕೆಲವು ದಿನಗಳ ಹಿಂದೆ ಕಠಿಣ ಕ್ರಮ ಕೈಗೊಳ್ಳಲು ಆರಂಭಿಸಿದ್ದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇದೀಗ ಮತ್ತೆ 6 ಲಕ್ಷ ಮಂದಿಗೆ ಬಾಕಿ ತೆರಿಗೆ ಪಾವತಿಸುವಂತೆ ಸಂದೇಶ ಕಳುಹಿಸಿದೆ. ಸುಮಾರು 500 ಕೋಟಿ ರೂಪಾಯಿ ತೆರಿಗೆ ಬಾಕಿ ಉಳಿಸಿಕೊಂಡಿರುವ 6 ಲಕ್ಷ ಮಂದಿಗೆ ಸಂದೇಶ ಕಳುಹಿಸಲಾಗಿದೆ. ಆದಾಗ್ಯೂ ಅವರು ತೆರಿಗೆ ಬಾಕಿ ಪಾವತಿ ಮಾಡದಿದ್ದರೆ ಈ ಸಂದೇಶದಲ್ಲಿ ಉಲ್ಲೇಖಿಸಿರುವಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಬಿಬಿಎಂಪಿ ಕಂದಾಯ ವಿಭಾಗದ ವಿಶೇಷ ಆಯುಕ್ತ ಮುನೀಶ್ ಮೌದ್ಗಿಲ್ ತಿಳಿಸಿದ್ದಾರೆ.

ಬಿಬಿಎಂಪಿ ಸಂದೇಶದಲ್ಲೇನಿದೆ

'ಈ ಅಪ್ಲಿಕೇಷನ್ ಸಂಖ್ಯೆಯ (ನಿರ್ದಿಷ್ಟ ಅರ್ಜಿ ಸಂಖ್ಯೆಯನ್ನು ಉಲ್ಲೇಖಿಸಿ) ಆಸ್ತಿಯ ತೆರಿಗೆಯನ್ನು ಪಾವತಿ ಮಾಡಲಾಗಿಲ್ಲ. ದಯವಿಟ್ಟು ಗಮನಿಸಿ, ತೆರಿಗೆ ಪಾವತಿಸದೇ ಇರುವುದರಿಂದ ನಿಮ್ಮನ್ನು 'ಬಿಬಿಎಂಪಿ ಕಾಯ್ದೆ 2020'ರ ಅಡಿಯಲ್ಲಿ ಕ್ರಮಕ್ಕೆ ಒಳಪಡಿಸಬೇಕಾಗುತ್ತದೆ. ಇದರಲ್ಲಿ ಚರಾಸ್ತಿಗಳ ಸೀಲಿಂಗ್, ಮುಟ್ಟುಗೋಲು, ಸಬ್-ರಿಜಿಸ್ಟ್ರಾರ್ ನೀಡಿದ ಎನ್ಕಂಬರೆನ್ಸ್ ಸರ್ಟಿಫಿಕೇಟ್ ವಶಪಡಿಸಿಕೊಳ್ಳುವಿಕೆ, ಹಿಂಪಡೆಯುವಿಕೆ, ಕ್ರಿಮಿನಲ್ ಪ್ರಕರಣ ದಾಖಲಿಸುವುದು ಸೇರಿವೆ. ತೆರಿಗೆ ಪಾವತಿಸಲು ಈ ಲಿಂಕ್ https:// bbmptax.karnataka.gov.in/ ಕ್ಲಿಕ್ ಮಾಡಿ. ಯಾವುದೇ ಸ್ಪಷ್ಟೀಕರಣಕ್ಕಾಗಿ ನಿಮ್ಮ ಸ್ಥಳೀಯ ವಾರ್ಡ್ ಅಥವಾ ಎಆರ್‌ಒ ಕಚೇರಿಯನ್ನು ಸಂಪರ್ಕಿಸಿ. ಈಗಾಗಲೇ ತೆರಿಗೆ ಪಾವತಿಸಿದ್ದರೆ ದಯವಿಟ್ಟು ನಿರ್ಲಕ್ಷಿಸಿ' ಎಂದು ಬಿಬಿಎಂಪಿಯು ತೆರಿಗೆದಾರರಿಗೆ ಕಳುಹಿಸಿದ ಸಂದೇಶದಲ್ಲಿ ಉಲ್ಲೇಖಿಸಲಾಗಿದೆ. ಇತ್ತೀಚೆಗಷ್ಟೇ ಬಿಬಿಎಂಪಿಯು ತೆರಿಗೆ ಪಾವತಿಸದವರ ವಿರುದ್ಧ ಕಾರ್ಯಾಚರಣೆ ನಡೆಸಿ ಅನೇಕ ಕಟ್ಟಡಗಳನ್ನು ಸೀಜ್ ಮಾಡಿತ್ತು.

ಐಎಎಸ್ ಅಧಿಕಾರಿ ಮುನೀಶ್ ಮೌದ್ಗಿಲ್ ಸೇರಿದಂತೆ 6 ಮಂದಿ ಐಎಎಸ್ ಅಧಿಕಾರಿಗಳಿಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಹೆಚ್ಚುವರಿ ಜವಾಬ್ದಾರಿ ಘೋಷಿಸಿ ರಾಜ್ಯ ಸರ್ಕಾರ ಅಕ್ಟೋಬರ್ ನಲ್ಲಿ ಆದೇಶ ಹೊರಡಿಸಿತ್ತು. ಮುನೀಶ್ ಮೌದ್ಗಿಲ್ ಅವರನ್ನು ಬಿಬಿಎಂಪಿ ಕಂದಾಯ ವಿಭಾಗದ ವಿಶೇಷ ಆಯುಕ್ತರನ್ನಾಗಿ ನೇಮಿಸಿ ಆದೇಶ ಹೊರಡಿಸಿತ್ತು. ಮೌದ್ಗಿಲ್ ಅವರು ಅಧಿಕಾರ ವಹಿಸಿಕೊಂಡ ಬೆನ್ನಲ್ಲೇ ತೆರಿಗೆ ವಂಚಕರಿಗೆ ಬಿಸಿ ಮುಟ್ಟಿಸಲು ಬಿಬಿಎಂಪಿ ಕ್ರಮಗಳನ್ನು ಕೈಗೊಳ್ಳಲು ಆರಂಭಿಸಿತ್ತು. ಇದೀಗ ಬಿಬಿಎಂಪಿ ತೆರಿಗೆ ವಂಚಕರಿಗೆ ಮತ್ತಷ್ಟು ಬಿಸಿ ಮುಟ್ಟಿಸಲು ಆರಂಭಿಸಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com